ಸಂಪುಟ: 05 ಸಂಚಿಕೆ: 127 ಪುಟಗಳು: 08 ಭಾನುವಾರ 20 ಜುಲೈ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಜಗತ್ತನ್ನು ಸುಧಾರಿಸಲು ಪ್ರಾರಂಭಿಸುವ ಮೊದಲು ಯಾರೂ ಒಂದೇ ಒಂದು ಕ್ಷಣ ಕಾಯಬೇಕಾಗಿಲ್ಲ



## ಕಮಲ ಅಪಪ್ರಚಾರ ಕೈ ನಾಯಕರ ಅಬ್ಬರ...

ವಿಷ್ಣು ಹಾಡಿಗೆ ಸಿದ್ದು ಗ್ರ್ಯಾಂಡ್ ಎಂಟ್ರಿ



### ಇದು ಸಾಧನಾ ಸಮಾವೇಶ, ಶಕ್ತಿ ಪ್ರದರ್ಶನ ಅಲ್ಲ: ಸಿಎಂ

• ಉದಯವಾಹಿನಿ, ಮೈಸೂರು

ಸುಳ್ಳು ಅಪಪ್ರಚಾರ ಮಾಡುತ್ತಿರುವ ಬಿಜೆಪಿಗೆ ಉತ್ತರ ನೀಡಲು ನಾವು ಸಮಾವೇಶ ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಮೈಸೂರು ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಭಿವೃದ್ಧಿಗೆ ದುಡ್ಡಿಲ್ಲ ಎಂದು ಬಿಜೆಪಿ ಹೇಳುತ್ತಿದೆ. ನಾವು ಸಾವಿರಾರು ಕೋಟಿ ಹಣವನ್ನು ಒಂದೇ ನಗರಕ್ಕೆ ಮಂಜೂರು ಮಾಡಿದ್ದೇವೆ. ಇದನ್ನು ಜನರಿಗೆ ಹೇಳಲು ಸಮಾವೇಶ ಮಾಡುತ್ತಿದ್ದೇವೆ. ಇದು ಸಾಧನಾ ಸಮಾವೇಶವೇ ಹೊರತು ಶಕ್ತಿ ಪ್ರದರ್ಶನವಲ್ಲ ಎಂದು ಸ್ಪಷ್ಟಪಡಿಸಿದರು.

1 ಸರ್ಕಾರದ ಸಾಧನಾ ಸಮಾವೇಶದಲ್ಲಿ ಡಿಕೆಶಿ ಸ್ವಾಗತಿಸುವುದನ್ನು ಮರೆತ ಸಿದ್ದರಾಮಯ್ಯ

2 ಕಾರ್ಯಕ್ರಮ ಮಾಡಿರುವುದು ಚುನಾವಣೆಗಾಗಿ ಅಲ್ಲ ನೀವು ಕೊಟ್ಟ ಶಕ್ತಿಯಿಂದ ನಿಮ್ಮ ಋಣ ತೀರಿಸಲು ಎಂದ ಡಿಕೆಶಿ

3 ಮೈಸೂರಿನಲ್ಲಿ ಸಾಧನಾ ಸಮಾವೇಶದಲ್ಲಿ ಡಿಕೆಶಿ ಮಾತು

ಸಿದ್ದು ಅಭಿವೃದ್ಧಿಯ ಸದ್ದು

ಕಾಂಗ್ರೆಸ್ ಸರ್ಕಾರದ ಬಗ್ಗೆ ಬಿಜೆಪಿ ಅಪಪ್ರಚಾರ ಮಾಡುತ್ತಿದೆ. ಮೈಸೂರಿನಲ್ಲಿ ನಡೆಯುತ್ತಿರುವ ಸಮಾವೇಶ, ಕಾಂಗ್ರೆಸ್ ಸರ್ಕಾರ ಮಾಡಿರುವ ಜನಪರ ಕೆಲಸವನ್ನು ಜನರ ಮುಂದಿಡುವ ಕಾರ್ಯಕ್ರಮವಾಗಿದೆ. ಸುಮಾರು 2,600 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತಿದೆ ಎಂದು ಹೇಳಿದರು.

ನಗರ ಪ್ರದೇಶದ ಮತದಾರರಲ್ಲಿ ಕಾಂಗ್ರೆಸ್ ಪರವಾದ ಒಲವು ಕಡಿಮೆ ಆಗುತ್ತಿದೆಯಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಮೈಸೂರು ಜಿಲ್ಲೆಯಲ್ಲಿ ಎರಡು ಕ್ಷೇತ್ರಗಳನ್ನು ಕಾಂಗ್ರೆಸ್ ತನ್ನದಾಗಿಸಿಕೊಂಡಿದೆ. ಬೆಂಗಳೂರು ನಗರದಲ್ಲಿ ನಡೆದ ಉಪ ಚುನಾವಣೆಯಲ್ಲಿ ಮೂರು ಕ್ಷೇತ್ರಗಳನ್ನು ಕಾಂಗ್ರೆಸ್ ಗೆದ್ದಿದೆ ಎಂದರು.

**ಕೃಷ್ಣಾ ನದಿ ನೀರು ಹಂಚಿಕೆ; ಕೇಂದ್ರವಿನ್ನೂ ಅಧಿಸೂಚನೆ ಹೊರಡಿಸಿಲ್ಲ:** ಕೃಷ್ಣಾ ಜಲವಿವಾದ ನ್ಯಾಯಾಧೀಕರಣದ ಅವಧಿಯನ್ನು ವಿಸ್ತರಿಸಿರುವ ಬಗ್ಗೆ ಯಾವುದೇ ವಿರೋಧವಿಲ್ಲ. ಆದರೆ, ನೀರು ಹಂಚಿಕೆಯ ಬಗ್ಗೆ ಕೇಂದ್ರ ಸರ್ಕಾರ ಇದುವರೆಗೆ ಅಧಿಸೂಚನೆ ಹೊರಡಿಸಿಲ್ಲ. ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯದ ನಡುವೆ ಅಂತರ ರಾಜ್ಯ ಜಲ ವಿವಾದವಿದ್ದು, ನಮ್ಮ ರಾಜ್ಯಕ್ಕೆ ಸಂಬಂಧಿಸಿದಂತೆ ನೀರು ಹಂಚಿಕೆಯ ಅಧಿಸೂಚನೆ ಹೊರಡಿಸಲು ಕೇಂದ್ರಕ್ಕೆ ಯಾವುದೇ ಅಡ್ಡಿಯಿರುವುದಿಲ್ಲ. ತೀರ್ಪಿನನ್ವಯ ನೀರಿನ ಹಂಚಿಕೆಯಲ್ಲಿ ರಾಜ್ಯಕ್ಕೆ ಯಾವುದೇ ನಷ್ಟವೂ ಆಗುವುದಿಲ್ಲ. ಆಲಮಟ್ಟಿ ಜಲಾಶಯದ ಎತ್ತರವನ್ನು 524.26 ಮೀ ಗಳಿಗೆ ಹೆಚ್ಚಿಸಲು ಅನುಮತಿ ನೀಡಿದ್ದಾರೆ ಎಂದು ಮುಖ್ಯಮಂತ್ರಿ ತಿಳಿಸಿದರು.

**ದಲಿತರನ್ನು ಪ್ರಧಾನಿ ಮಾಡಿ:** ದಲಿತರಿಗೆ ನಾಯಕತ್ವ ನೀಡುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಕಾಂಗ್ರೆಸ್ ಮಾತ್ರ ಸಂವಿಧಾನದ ಆಶಾಯ ಎತ್ತಿ ಹಿಡಿದು ದಲಿತರಿಗೆ ನ್ಯಾಯ ಕೊಟ್ಟಿದೆ. ಖರ್ಗೆ ನಮ್ಮ ಎಐಸಿಸಿ ಅಧ್ಯಕ್ಷರಾಗಿದ್ದಾರೆ. ಬಿಜೆಪಿಯವರು ಈಗ ನರೇಂದ್ರ ಮೋದಿ ಬದಲು ಬೇರೊಬ್ಬ ದಲಿತರನ್ನು ಪ್ರಧಾನಿ ಮಾಡಲಿ ನೋಡೋಣ. ವಿಜಯೇಂದ್ರ ಅವರೇ ತಮ್ಮ ಅಧ್ಯಕ್ಷ ಸ್ಥಾನವನ್ನು ದಲಿತರಿಗೆ ಬಿಟ್ಟು ಕೊಡಲಿ ಎಂದು ಸವಾಲು ಹಾಕಿದರು.

**ಡಿಕೆಶಿ ಅಬ್ಬರದ ಭಾಷಣ:** ಡಿಸಿಎಂ ಡಿಕೆಶಿ ಅಬ್ಬರ ಭಾಷಣ ಮಾಡಿದ್ರು. ಚುನಾವಣೆ ವೇಳೆ ನಾನು ಹೇಳಿದ್ದು, ಕಮಲ ಕೇಸರಲ್ಲಿದ್ದರೆ ಚೆನ್ನ, ತೆನೆ ಗದ್ದೆಯಲಿದ್ದಾರೆ ಚೆನ್ನ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದಾರೆ ಚೆನ್ನ. ನಾವು ಹೇಳಿದಂತೆ, ಅದೇ ಕೆಲಸವನ್ನು ಮಾಡಿದ್ದೇವೆ. ನಾವು ಮಾಡುವ ಕೆಲಸಗಳನ್ನು ನೀವು ನೋಡಿ ಆಶೀರ್ವಾದ ಮಾಡಿದ್ದೀರಾ. ನಾವು ನಿಮ್ಮ ಬಳಿ ಜೈಕಾರ ಹಾಕಿಸಿಕೊಳ್ಳಲು ಬಂದಿಲ್ಲ, ನಿಮ್ಮ ಋಣ ತೀರಿಸಲು ಬಂದಿದ್ದೇವೆ. ಈ ಹಿಂದೆ ಚಾಮುಂಡೇಶ್ವರಿ ಬಳಿ ಗ್ಯಾರಂಟಿ ಯೋಜನೆಗಳ ಬಗ್ಗೆ ಹರಕೆ ಹೊತ್ತು, ತಾಯಿಗೆ ಕಾಣಿಕೆ ಹಾಕಿ ಬಂದಿದ್ದೇವೆ. ಅದೇ ರೀತಿ ನಡೆದುಕೊಳ್ಳುತ್ತಿದ್ದೇವೆ. ಈಗ ನಮ್ಮ ಗ್ಯಾರಂಟಿಗಳನ್ನು ಬಿಜೆಪಿ ಕಾಪಿ ಮಾಡಿದೆ, ಎಂದು ಡಿಕೆಶಿ ಕಿಡಿಕಾರಿದ್ರು.

### ಜೆಡಿಎಸ್ ಏಕೆ ಹೆಚ್ಚು ಸ್ಥಾನ ಗೆದ್ದಿಲ್ಲ ದೇವೇಗೌಡ್ರೇ

ಸಿದ್ದರಾಮಯ್ಯ ಶಕ್ತಿ ಪ್ರದರ್ಶನಕ್ಕಾಗಿ ಸಾಧನಾ ಸಮಾವೇಶ ಆಯೋಜನೆ ಮಾಡಿದ್ದಾರೆ ಎಂದು ಬಿಜೆಪಿ ಜೆಡಿಎಸ್ ನವರು ಅಪಪ್ರಚಾರ ಮಾಡಿದ್ದಾರೆ ಎಂದು ಹೇಳಿದ್ದಾರೆ. ಬಿಜೆಪಿ ಜೆಡಿಎಸ್ ನವರು ನಮ್ಮ ಸಾಧನೆಯನ್ನು ಸಹಿಸಿಕೊಳ್ಳಲಾಗದೇ ಆರೋಪ ಮಾಡ್ತಿದಾರೆ. ಬಿಜೆಪಿ ಎಂದೂ ಸಹ ಸ್ವಂತ ಬಲದಿಂದ ಅಧಿಕಾರಕ್ಕೆ ಬರಲಿಲ್ಲ. ಆಪರೇಷನ್ ಕಮಲದ ಮೂಲಕ ಬಿಜೆಪಿ ಅಧಿಕಾರಕ್ಕೆ ಬಂತು. ಚುನಾವಣೆಯಿಂದ ಚುನಾವಣೆಗೆ ಜೆಡಿಎಸ್ ಸ್ಥಾನಗಳ ಸಂಖ್ಯೆ ಕಡಿಮೆಯಾಗ್ತಿದೆ. ನಾನು ಜೆಡಿಎಸ್ ನಲ್ಲಿದ್ದಾಗ 59 ಸ್ಥಾನ ಗೆದ್ದಿತ್ತು. ಆ ನಂತರ ಜೆಡಿಎಸ್ ಏಕೆ ಹೆಚ್ಚು ಸ್ಥಾನ ಗೆದ್ದಿಲ್ಲಾ ದೇವೇಗೌಡ್ರೇ ಕುಮಾರಸ್ವಾಮಿಯವರೇ ಜೆಡಿಎಸ್ ಇನ್ನೆಂದೂ ಅಧಿಕಾರಕ್ಕೆ ಬರೋದಿಲ್ಲ. ಬಿಜೆಪಿ ಜೆಡಿಎಸ್ ಒಂದಾಗಿದ್ದರೂ ನಮ್ಮನ್ನು ಸೋಲಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.



ಸಿದ್ದರಾಮಯ್ಯನವರೇ, ಯಾವ ಸಾಧನೆ ಮಾಡಿದ್ದೀರಿ ಎಂದು ಈ ಸಾಧನಾ ಸಮಾವೇಶ ಮಾಡುತ್ತಿದ್ದೀರಿ. ಕುರ್ಚಿ ಗ್ಯಾರಂಟಿ ಇಲ್ಲದ ಲಾಟರಿ ಸಿಎಂ ಸಿದ್ದರಾಮಯ್ಯ ಅವರಿಂದ ಕುರ್ಚಿ ಉಳಿಸಿಕೊಳ್ಳಲು ಸಾಧನಾ ಸಮಾವೇಶ ಎಂಬ ಮತ್ತೊಂದು ಹಗಲುವೇಷ. ಸರ್ಕಾರದ ಕಿರುಕುಳ, ಕಮಿಷನ್ ದಾಹಕ್ಕೆ ಬಲಿಯಾದ ಪ್ರಾಮಾಣಿಕ ಅಧಿಕಾರಿಗಳು, ಗುತ್ತಿಗೆದಾರರ ಸಾವನ್ನು ಸಂಭ್ರಮಿಸುವ ಸಮಾವೇಶ ಇದಾಗಿದೆ.

**-ಆರ್. ಅಶೋಕ, ವಿರೋಧ ಪಕ್ಷದ ನಾಯಕ**

### 2578 ಕೋಟಿಗಳ ಅನುದಾನ

**ಸಿಎಂ ಸಿದ್ದರಾಮಯ್ಯ ಕೊಡುಗೆ ಏನು..?**
ಸ್ವಂತ ಜಿಲ್ಲೆಗೆ ಏನು ಮಾಡಿಲ್ಲ ಎಂದು ಟೀಕಿಸುತ್ತಿದ್ದ ವಿಪಕ್ಷಗಳಿಗೆ ಸಿಎಂ ಸಿದ್ದರಾಮಯ್ಯ 2578 ಕೋಟಿ ರೂ.ಗಳ ಶಂಕುಸ್ಥಾಪನೆ ,ಉದ್ಘಾಟನೆ ಕಾರ್ಯಕ್ರಮ ಮಾಡುವ ಮೂಲಕ ಟಾಂಗ್ ನೀಡಿದ್ದಾರೆ. ಇತ್ತೀಚಿಗೆ ಸಿಎಂ ಬದಲಾವಣೆ ಅನ್ನುತ್ತಿದ್ದ ಸ್ವಪಕ್ಷದ ನಾಯಕರಿಗೆ ವಿಪಕ್ಷದ ನಾಯಕರಿಗೂ ಸಿದ್ದರಾಮಯ್ಯ ಶಕ್ತಿ ಪ್ರದರ್ಶನದ ಮೂಲಕ ನನ್ನನ್ನು ಬದಲಾವಣೆ ಮಾಡೋದು ಅಷ್ಟು ಸುಲಭವಲ್ಲ ಎಂಬ ಸಂದೇಶ ರವಾನೆ ಮಾಡಿದ್ದಾರೆ. ಮೈಸೂರಿನ ಮಹಾರಾಜ ಗ್ರೌಂಡ್‌ನಲ್ಲಿ ಕಾಂಗ್ರೆಸ್ ಸರ್ಕಾರದ ಎರಡು ವರ್ಷದ ಸಾಧನೆ ಹಾಗೂ ಮೈಸೂರಿಗೆ ಸಾವಿರಾರು ರೂಪಾಯಿಗಳ ಅನುದಾನದ ಅಭಿವೃದ್ಧಿಗೆ ಕಾರ್ಯಕ್ರಮಕ್ಕೆ ಸಿಎಂ ಚಾಲನೆ ನೀಡಿದ್ದಾರೆ .

## ಕಸ ನಿರ್ವಹಣೆಯಲ್ಲಿ ವಿಫಲ ಬೆಂಗಳೂರಿಗೆ 36ನೇ ಸ್ಥಾನ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿಯು ಕಸದ ನಿರ್ವಹಣೆಗೆ ವಾರ್ಷಿಕ ನೂರಾರು ಕೋಟಿ ವ್ಯಯಿಸುತ್ತಿದ್ದರೂ ಸ್ವಚ್ಛ ನಗರಗಳ ಸಮೀಕ್ಷೆಯಲ್ಲಿ ಬೆಂಗಳೂರು ನಗರದ ಕಳಪೆ ಸಾಧನೆ ಮುಂದುವರಿದಿದೆ. 10 ಲಕ್ಷಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ 44 ನಗರಗಳ ಪೈಕಿ ಉದ್ಯಾನ ನಗರಿ 36ನೇ ಸ್ಥಾನ ಪಡೆದಿದ್ದು, ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಗೆ ಕಪ್ಪು ಚುಕ್ಕೆಯಾಗಿ ಪರಿಣಮಿಸಿದೆ. ಬೆಂಗಳೂರಿನಲ್ಲಿ ಎಲ್ಲಿ ನೋಡಿದರೂ ಕಸದ ಸಮಸ್ಯೆ ನಿವಾರಣೆಗೆ ಹೆಣಗಾಡುತ್ತಿರುವ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಕಂಪನಿಯು ಆಟೊ ಟಿಪ್ಪರ್‌ಗಳ ಮೂಲಕ ನಿತ್ಯ ಮನೆ-ಮನೆ ಭೇಟಿ ನೀಡಿ ತ್ಯಾಜ್ಯ ಸಂಗ್ರಹಿಸುತ್ತಿದೆ. ಆದರೆ, ಸಾರ್ವಜನಿಕರು ಆಟೊ ಟಿಪ್ಪರ್‌ಗಳಿಗೆ ತ್ಯಾಜ್ಯ ನೀಡದೆ ಎಲ್ಲೆಂದರಲ್ಲಿ ಕಸ ಬಿಸಾಡುತ್ತಿದ್ದಾರೆ. ಇದರಿಂದ ನಗರದ ಸ್ವಚ್ಛತೆಗೆ ಧಕ್ಕೆಯುಂಟಾಗಿದೆ ಎಂದು ಪರಿಸರ ತಜ್ಞರು ತಿಳಿಸಿದರು. ಈ ಹಿಂದೆ ಇಂದೋರ್‌ಗೆ ಬಿಬಿಎಂಪಿ ನಿಯೋಗ ಭೇಟಿ ನೀಡಿ, ಅಲ್ಲಿನ ಕಸ ವಿಲೇವಾರಿ ವ್ಯವಸ್ಥೆ ಬಗ್ಗೆ ಅಧ್ಯಯನ ನಡೆಸಿತ್ತು. ಆಯ್ದ ಐದು ವಾರ್ಡ್‌ಗಳಲ್ಲಿ ಇಂದೋರ್ ಮಾದರಿಯಲ್ಲಿ ತ್ಯಾಜ್ಯ ವಿಲೇವಾರಿ ಯೋಜನೆ ಜಾರಿಗೊಳಿಸುವ ಪ್ರಯತ್ನವನ್ನೂ ಮಾಡಿತು. ಆದರೆ, ಅದು ಸಾಧ್ಯವಾಗಲಿಲ್ಲ.

## ಬಿಕ್ಲು ಶಿವು ಕೊಲೆ ಪ್ರಕರಣ: ಮೂರು ತಾಸು ಬೈರತಿ ಬಸವರಾಜ್ ವಿಚಾರಣೆ

• ಉದಯವಾಹಿನಿ, ಬೆಂಗಳೂರು

ರೌಡಿ ಶೀಟರ್ ಶಿವ ಪ್ರಕಾಶ್ ಅಲಿಯಾಸ್ ಬಿಕ್ಲು ಶಿವು ಕೊಲೆ ಪ್ರಕರಣದ ಐದನೇ ಆರೋಪಿ, ಕೆಆರ್ ಪುರ ಕ್ಷೇತ್ರದ ಬಿಜೆಪಿ ಶಾಸಕ ಬೈರತಿ ಬಸವರಾಜ್ ಅವರು ಭಾರತಿನಗರ ಠಾಣೆಯಲ್ಲಿ ಶನಿವಾರ ಮಧ್ಯಾಹ್ನ ವಿಚಾರಣೆಗೆ ಹಾಜರಾಗಿ, ತನಿಖಾಧಿಕಾರಿಗಳ ಎದುರು ತಮ್ಮ ಹೇಳಿಕೆ ದಾಖಲಿಸಿದರು. ಪ್ರಕರಣಕ್ಕೆ ಸಂಬಂಧಿಸಿದಂತೆ 'ನನ್ನ ವಿರುದ್ಧ ಭಾರತಿನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ರದ್ದು ಪಡಿಸಬೇಕು' ಎಂದು ಕೋರಿ ಬೈರತಿ ಬಸವರಾಜ್ ಅವರು ಹೈಕೋರ್ಟ್‌ನಲ್ಲಿ ಸಲ್ಲಿಸಿದ್ದ ತುರ್ತು ಅರ್ಜಿಯ ವಿಚಾರಣೆ ನಡೆಸಿದ್ದ ಏಕಸದಸ್ಯ ಪೀಠವು, ಶನಿವಾರ ವಿಚಾರಣೆಗೆ ಹಾಜರಾಗುವಂತೆ ಆರೋಪಿಗೆ ಸೂಚಿಸಿತ್ತು. ಹೈಕೋರ್ಟ್ ಸೂಚನೆಯ ಬೆನ್ನಲ್ಲೇ ಠಾಣೆಗೆ ಬಂದ ಶಾಸಕರನ್ನು ಕೆ.ಜಿ.ಹಳ್ಳಿ ಉಪ ವಿಭಾಗದ ಎಸಿಪಿ ಪ್ರಕಾಶ್ ರಾಥೋಡ್ ನೇತೃತ್ವದ ತಂಡವು ಮೂರು ತಾಸು ವಿಚಾರಣೆ ನಡೆಸಿತು. ಜಾಗದ ವಿಚಾರವಾಗಿ ಜಗದೀಶ್, ಕಿರಣ್, ವಿಮಲ್, ಅನಿಲ್ ಮತ್ತು ಇತರರು ಶಾಸಕ ಬೈರತಿ ಬಸವರಾಜ್ ಅವರ ಕುಮ್ಮಕ್ಕಿನಿಂದ ಕೊಲೆ ಮಾಡಿದ್ದಾರೆ ಎಂದು ಆರೋಪಿ ಶಿವಪ್ರಕಾಶ್ ತಾಯಿ ವಿಜಯಲಕ್ಷ್ಮಿ ದೂರು ನೀಡಿದ್ದರು. ದೂರು ಆಧರಿಸಿ ಎಫ್‌ಐಆರ್ ದಾಖಲಾಗಿತ್ತು.

## ಸಿದ್ದರಾಮಯ್ಯ ಪ್ರಧಾನಿ ಅಭ್ಯರ್ಥಿ ಆಗಲಿ: ಛಲವಾದಿ

• ಉದಯವಾಹಿನಿ, ಬೆಂಗಳೂರು


'ಸಿದ್ದರಾಮಯ್ಯ ಅವರೇ ಕಾಂಗ್ರೆಸ್‌ನ ಪ್ರಧಾನಿ ಅಭ್ಯರ್ಥಿಯಾಗಲಿ' ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ದಲಿತರ ಹಕ್ಕುಗಳ ರಕ್ಷಣೆಯ ವಕ್ತಾರರು ಎಂದು ಹೇಳಿಕೊಳ್ಳುವ ಕಾಂಗ್ರೆಸ್ಸಿಗರು, ಆ ಸಮುದಾಯಕ್ಕೆ ಸೇರಿದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪ್ರಧಾನಿ ಅಭ್ಯರ್ಥಿ ಎಂದು ಘೋಷಿಸಲಿ ಎಂದು ಬಿ.ವೈ. ವಿಜಯೇಂದ್ರ ಅವರು ಹೇಳಿದ್ದರು. ಅದರಲ್ಲಿ ತಪ್ಪೇನಿದೆ' ಎಂದು ಪ್ರಶ್ನಿಸಿದರು. 'ಕಾಂಗ್ರೆಸ್ಸಿಗೆ ದಲಿತರು ಕೇವಲ ಮತಬ್ಯಾಂಕ್. ಅವರನ್ನು ಕಾಂಗ್ರೆಸ್ ಪಕ್ಷ ಗುಲಾಮರೆಂದು ತಿಳಿದಿದೆ. ದಲಿತ ನಾಯಕರಾದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪ್ರಧಾನಿ ಅಭ್ಯರ್ಥಿಯಾಗಿ ಘೋಷಿಸಲು ಕಾಂಗ್ರೆಸ್ಸಿಗೆ ಮನಸ್ಸು ಇಲ್ಲದೇ ಇದ್ದರೆ, ಹಿಂದುಳಿದ ವರ್ಗಗಳ ನಾಯಕರಾದ ಸಿಎಂ ಸಿದ್ದರಾಮಯ್ಯ ಅವರನ್ನೇ ಪ್ರಧಾನಿ ಅಭ್ಯರ್ಥಿ ಎಂದು ಘೋಷಿಸಲಿ' ಎಂದರು.

## ವ್ಯಾಪಾರಿಗಳಿಗೆ ಜಿಎಸ್‌ಟಿ ನೋಟಿಸ್ ಸಿ.ಎಂ ಪರಿಹಾರ ಸೂಚಿಸಲಿ

• ಉದಯವಾಹಿನಿ, ಬೆಂಗಳೂರು

'ಜಿಎಸ್‌ಟಿ ಪಾವತಿಸಿ ಎಂದು ಸಣ್ಣ ವ್ಯಾಪಾರಿಗಳಿಗೆ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ. ವ್ಯಾಪಾರಿಗಳು ಇದರಿಂದ ತುಂಬಾ ಗಾಬರಿಗೊಂಡಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಧ್ಯಪ್ರವೇಶಿಸಿ ಪರಿಹಾರ ಒದಗಿಸಬೇಕು' ಎಂದು ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. 'ಸಣ್ಣ ಮತ್ತು ಅತಿಸಣ್ಣ ವ್ಯಾಪಾರಿಗಳ ವಿಚಾರದಲ್ಲಿ ಅಧಿಕಾರಿಗಳು ದುಡುಕಿನ ಕ್ರಮ ತೆಗೆದುಕೊಂಡಿದ್ದಾರೆ. ಹಲವಾರು ವರ್ಷದ ತೆರಿಗೆ ಬಾಕಿ. ಬಡ್ಡಿ ಮತ್ತು ದಂಡವನ್ನು ಸೇರಿಸಿ ದೊಡ್ಡ ಮೊತ್ತದ ಬಾಕಿ ಪಾವತಿ ಮಾಡಿ ಎಂದು ಸೂಚಿಸಿದ್ದಾರೆ. ಸಣ್ಣ ವ್ಯಾಪಾರಿಗಳು ಅಷ್ಟು ಹಣ ಎಲ್ಲಿಂದ ತರುತ್ತಾರೆ' ಎಂದು ಪ್ರಶ್ನಿಸಿದ್ದಾರೆ. 'ಸಣ್ಣ ವ್ಯಾಪಾರಿಗಳು ಹೆದರಿದ್ದಾರೆ. ಅವರ ಪ್ರತಿನಿಧಿಗಳನ್ನು ಕರೆದು ಚರ್ಚೆ ಮಾಡಿ. ಇತರ ತೆರಿಗೆದಾರರಿಗೆ ಕರ ಸಮಾಧಾನ ಯೋಜನೆ ಅಡಿಯಲ್ಲಿ ರಿಯಾಯಿತಿ ನೀಡಲಾಗುತ್ತದೆಯೋ, ಇವರಿಗೂ ನೀಡಿ. ಬೇರೆ ರಾಜ್ಯಗಳಲ್ಲಿ ಈ ವಿಚಾರದಲ್ಲಿ ಯಾವ ಕ್ರಮ ತೆಗೆದುಕೊಂಡಿದ್ದಾರೆ ಎಂದರು.

## ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ, ತೆರೆ ಮರೆಯಲ್ಲೇ ಬಿಎಸ್‌ವೈ ತಂತ್ರಗಾರಿಕೆ



• ಉದಯವಾಹಿನಿ, ಬೆಂಗಳೂರು

ಬೆಂಗಳೂರು: ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ವಿಚಾರ ಕಮಲ ಪಾಳಯದಲ್ಲಿ ಗೊಂದಲಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಈ ನಡುವೆ ಬಿಎಸ್ ಯಡಿಯೂರಪ್ಪ ಆಪ್ತರ ದೆಹಲಿ ಪ್ರಯಾಣ ಹಾಗೂ ಪ್ರಮುಖರ ಭೇಟಿಯೂ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಮಾತ್ರ ಬೆಂಗಳೂರಿನಲ್ಲೇ ಕುಳಿತುಕೊಂಡು ತೆರೆಮರೆಯಲ್ಲಿ ತಂತ್ರಗಾರಿಕೆ ನಡೆಸುತ್ತಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬದಲಾವಣೆ ವಿಚಾರವಾಗಿ ಒಂದು ಬಣ ಪಟ್ಟು ಹಿಡಿದಿದೆ. ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ, ಬಿ ಪಿ ಹರೀಶ್, ಅರವಿಂದ ಲಿಂಬಾವಳಿ ಸೇರಿದಂತೆ ರೆಬೆಲ್ ತಂಡದ ನಾಯಕರು ತಮ್ಮೊಳಗೆ ತಂತ್ರಗಾರಿಕೆ ನಡೆಸುತ್ತಿದ್ದಾರೆ. ಈ ತಂಡದ ಕೆಲವರು ಈಗಾಗಲೇ ದೆಹಲಿಗೆ ತೆರಳಿ ಕೆಲವು ನಾಯಕರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದರು.


**ದೆಹಲಿಗೆ ತೆರಳಿದ್ದ ವಿಜಯೇಂದ್ರ ಆಪ್ತ:** ಈ ಬೆಳವಣಿಗೆಯ ನಡುವೆ ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಅವರು ದೆಹಲಿಗೆ ತೆರಳಿದ್ದರು. ದೆಹಲಿಯಲ್ಲಿ ಬಿಜೆಪಿ ಕೇಂದ್ರ ಶಿಸ್ತು ಸಮಿತಿಯ ಕಾರ್ಯದರ್ಶಿಗಳಾದ ಓಂ ಪಾಠಕ್ ಅವರನ್ನು ಭೇಟಿ ಮಾಡಿ ರಾಜ್ಯದಲ್ಲಿನ ಬಿಜೆಪಿಯ ಸ್ಥಿತಿಗತಿ ಹಾಗೂ ಇತರ ವಿದ್ಯಮಾನಗಳ ಬಗ್ಗೆ ಚರ್ಚೆ ನಡೆಸಿದ್ದರು.

ರೇಣುಕಾಚಾರ್ಯ ದೆಹಲಿ ಭೇಟಿ ಕುತೂಹಲ

ದೆಹಲಿಯಿಂದ ವಾಪಸ್ ಆಗಿದ್ದ ರೇಣುಕಾಚಾರ್ಯ ಮಾಜಿ ಸಿಎಂ ಡಿವಿ ಸದಾನಂದ ಗೌಡ ಅವರನ್ನು ಭೇಟಿ ಮಾಡಿದ್ದರು. ಡಿಸಿಎಂ ತಟಸ್ಥ ಬಣದಲ್ಲಿ ಗುರುತಿಸಿಕೊಂಡಿದ್ದಾರೆ. ಸದಾನಂದ ಗೌಡರ ಜೊತೆಗೆ ರೇಣುಕಾಚಾರ್ಯ ಕೆಲಹೊತ್ತು ಮಾತುಕತೆ ನಡೆಸಿದರು.

ಇದಾದ ಬಳಿಕ ಸಂಸದ ಗೋವಿಂದ ಕಾರಜೋಳ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಜತೆಗೆ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ದೆಹಲಿಯಲ್ಲಿ ನಡೆದ ಬೆಳವಣಿಗೆಗಳ ಬಗ್ಗೆ ಮಾಹಿತಿ ನೀಡಿದರು.

**ಬಿಎಸ್‌ವೈ ಸೈಲೆಂಟ್:** ರಾಜ್ಯ ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷ ಬದಲಾವಣೆ ವಿಚಾರವಾಗಿ ಇಷ್ಟೆಲ್ಲಾ ಚರ್ಚೆಗಳು ನಡೆಯುತ್ತಿದ್ದರೂ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರು ಮಾತ್ರ ಮೌನಕ್ಕೆ ಶರಣಾಗಿದ್ದಾರೆ. ಯಾವುದೇ ಹೇಳಿಕೆಗಳನ್ನು ನೀಡುತ್ತಿಲ್ಲ. ವಿಜಯೇಂದ್ರ ಅವರು ಮಾತ್ರ ನನಗೇ ರಾಜ್ಯಾಧ್ಯಕ್ಷ ಸ್ಥಾನ ಸಿಗುವ ವಿಶ್ವಾಸ ಇದೆ ಎಂದು ಹೇಳಿಕೊಂಡಿದ್ದಾರೆ.



**ಬಿಎಸ್‌ವೈ ತಂತ್ರಗಾರಿಕೆ ಏನು?:** ಬಿಎಸ್ ಯಡಿಯೂರಪ್ಪ ಸೈಲೆಂಟಾಗಿದ್ದು ಏನು ತಂತ್ರಗಾರಿಕೆ ಪ್ರಯೋಗ ಮಾಡುತ್ತಿದ್ದಾರೆ ಎಂಬುವುದು ಕುತೂಹಲಕ್ಕೆ ಎಡೆಮಾಡಿಕೊಟ್ಟಿದೆ. ಈ ನಡುವೆ ಅವರು ಪಕ್ಷದ ಕಚೇರಿಗೂ ನಿತ್ಯ ಬರುತ್ತಿದ್ದಾರೆ. ಈ ಹಿಂದೆ ಸರ್ಕಾರದ ವಿರುದ್ಧ ಬಿಜೆಪಿ ನಡೆಸಿದ್ದ ಹೋರಾಟದಲ್ಲೂ ಸಕ್ರಿಯವಾಗಿ ಭಾಗಿಯಾಗಿದ್ದರು. ಆದರೆ ಹೈಕಮಾಂಡ್ ಮಾತ್ರ ಯಾವುದೇ ತಕ್ಷಣದ ತೀರ್ಮಾನಕ್ಕೆ ಬರುವ ಲಕ್ಷಣಗಳು ಗೋಚರಿಸುತ್ತಿಲ್ಲ.

## ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಯೋಜನೆಗಳು ಜನರ ಕಣ್ಣಿಗೆ ಕಾಣುತ್ತಿವೆ

### ● ನಮ್ಮ ಗ್ಯಾರಂಟಿ ಟೀಕಿಸಿದ್ದ ಬಿಜೆಪಿ ಬೇರೆ ರಾಜ್ಯಗಳಲ್ಲಿ ಅದನ್ನೇ ನಕಲು ಮಾಡುತ್ತಿದೆ: ಡಿಸಿಎಂ ಡಿಕೆ ಶಿವಕುಮಾರ್

• ಉದಯವಾಹಿನಿ, ಮೈಸೂರು

ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಯೋಜನೆಗಳು ಜನರ ಕಣ್ಣಿಗೆ ಕಾಣುತ್ತಿವೆ. ನಮ್ಮ ಗ್ಯಾರಂಟಿ ಟೀಕಿಸಿದ್ದ ಬಿಜೆಪಿ ಬೇರೆ ರಾಜ್ಯಗಳಲ್ಲಿ ಅದನ್ನೇ ನಕಲು ಮಾಡುತ್ತಿದೆ. ಆದರೆ ವಿರೋಧ ಪಕ್ಷಗಳ ಟೀಕೆಗಳು ಸಾಯುತ್ತವೆ, ನಮ್ಮ ಕೆಲಸ ಉಳಿಯುತ್ತವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಮೈಸೂರಿನಲ್ಲಿ ಶನಿವಾರ ನಡೆದ ವಿವಿಧ ಇಲಾಖೆಗಳ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ನಮ್ಮ ಗ್ಯಾರಂಟಿ ಯೋಜನೆಗಳು ದೇಶಕ್ಕೇ ಮಾದರಿ. ಈ ಗ್ಯಾರಂಟಿ ಯೋಜನೆಗಳು ಸುಳ್ಳು, ಇದರಿಂದ ರಾಜ್ಯ ದಿವಾಳಿಯಾಗುತ್ತದೆ ಎಂದು ಪ್ರಧಾನಮಂತ್ರಿಗಳಿಂದ ಹಿಡಿದು ರಾಜ್ಯದ ಬಿಜೆಪಿ ನಾಯಕರವರೆಗೂ ಎಲ್ಲರೂ ಟೀಕೆ ಮಾಡಿದರು. ನಂತರ ನಡೆದ ಮಧ್ಯಪ್ರದೇಶ, ಮಹಾರಾಷ್ಟ್ರ, ದೆಹಲಿ, ಹರಿಯಾಣ ಸೇರಿದಂತೆ ಬೇರೆ ರಾಜ್ಯಗಳ ಚುನಾವಣೆಯಲ್ಲಿ ಕಾಂಗ್ರೆಸ್ ಗಿಂತ ಮೊದಲೇ ಗ್ಯಾರಂಟಿ ಯೋಜನೆ ಘೋಷಣೆ ಮಾಡಿದ್ದಾರೆ. ಇತ್ತೀಚೆಗೆ ಬಿಹಾರದಲ್ಲೂ ನಮ್ಮದೇ ಗ್ಯಾರಂಟಿ ಯೋಜನೆ ನಕಲು ಮಾಡಿದ್ದಾರೆ ಎಂದು ಟೀಕಿಸಿದರು.


ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ. ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿರುವ ಕಾರಣ ಜನರ ಬದುಕಿಗಾಗಿ ಐದು ಗ್ಯಾರಂಟಿ ಯೋಜನೆಗಳನ್ನು ನೀಡಲಾಗಿದೆ. ಆ ಮೂಲಕ ರಾಜ್ಯದ ಜನರ ಋಣ ತೀರಿಸಲಾಗುತ್ತಿದೆ ಎಂದರು.

ಬಿಹಾರದಲ್ಲೂ ನಮ್ಮದೇ ಗ್ಯಾರಂಟಿ ನಕಲು

ಐದು ಬೆರಳು ಸೇರಿ ಕೈ ಮುಷ್ಟಿಯಾಯಿತು, ಐದು ಗ್ಯಾರಂಟಿ ಸೇರಿ ಕೈ ಗಟ್ಟಿಯಾಯಿತು. ನಾವು ಮಾಡಿದ ಕೆಲಸಗಳು ಜನರ ಕಣ್ಣಿಗೆ ಕಾಣುತ್ತಿವೆ. ನಾವು ಇಲ್ಲಿಗೆ ಜನರಿಂದ ಜೈಕಾರ ಹಾಕಿಸಿಕೊಳ್ಳಲು ಬಂದಿಲ್ಲ. ನಿಮ್ಮ ಋಣ ತೀರಿಸಲು ಬಂದಿದ್ದೇವೆ.

ನಮ್ಮ ಸರ್ಕಾರ ಬಂದ ನಂತರ ನಾನು ಹಾಗೂ ಸಿದ್ದರಾಮಯ್ಯ ಅವರು ತಾಯಿ ಚಾಮುಂಡೇಶ್ವರಿ ದೇವಾಲಯಕ್ಕೆ ಹೋಗಿ ಐದು ವರ್ಷದ ಗೃಹಲಕ್ಷ್ಮೀ ಯೋಜನೆ ಹಣವನ್ನು ತಾಯಿಯ ಪಾದಕ್ಕೆ ಅರ್ಪಿಸಿ ಆಶೀರ್ವಾದ ಪಡೆದೆವು ಎಂದು ಹೇಳಿದರು.

ರಾಹುಲ್ ಗಾಂಧಿ ಅವರು ಭಾರತ ಜೋಡೋ ಯಾತ್ರೆ ನಡೆಸಿದರು. ನಮ್ಮ ರಾಜ್ಯದಲ್ಲಿ ರಾಹುಲ್ ಗಾಂಧಿ ಯಾತ್ರೆ ನಡೆಸಿದ ಎಲ್ಲಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆದ್ದಿದ್ದಾರೆ. ಇದೇ ಸಂದರ್ಭದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಎಐಸಿಸಿ ಅಧ್ಯಕ್ಷರಾಗಿ ಆಯ್ಕೆಯಾದರು ಎಂದರು.



### ಹಸ್ತ ಜನರ ಬದುಕಿಗೆ ಆಸರೆಯಾಗಿದೆ

ಹಸ್ತ ಟೀಕೆ ಮಾಡುವ ವಿರೋಧಿಗಳ ಬಾಯಿ ಮುಚ್ಚಿಸಿದೆ, ರೈತರನ್ನು ಉಳಿಸಿದೆ, ಮಹಿಳೆಯರಿಗೆ ಶಕ್ತಿ ತುಂಬಿದೆ, ಬೆಲೆ ಏರಿಕೆ ಸಮಸ್ಯೆಗೆ ಪರಿಹಾರ ಕೊಟ್ಟಿದೆ. ಪ್ರತಿ ತಿಂಗಳು ಸುಮಾರು 5 ಸಾವಿರದಷ್ಟು ಆರ್ಥಿಕವಾಗಿ ಶಕ್ತಿ ನೀಡುತ್ತಿದೆ ಎಂದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗೆಲ್ಲಾ ಉಳುವವನಿಗೆ ಭೂಮಿ, ಬಡವರಿಗೆ ಮನೆ, ನಿವೇಶನ, ವಿವಿಧ ಪಿಂಚಣಿ ಯೋಜನೆ, ಅಂಗನವಾಡಿ, ಆದಿವಾಸಿಗಳಿಗೆ ಭೂಮಿ, ಶೈಕ್ಷಣಿಕ ಹಕ್ಕು, ಆಹಾರ ಭದ್ರತೆ, ಉದ್ಯೋಗ ಖಾತರಿ ಹೀಗೆ ಅನೇಕ ಯೋಜನೆಗಳನ್ನು ಜಾರಿ ಮಾಡಿದೆ. ರಾಹುಲ್ ಗಾಂಧಿ ಅವರೊಂದಿಗೆ ಪಾದಯಾತ್ರೆಯಲ್ಲಿ ಸಾಗುವಾಗ ವಯಸ್ಸಾದ ಮಹಿಳೆ ಸೌತೆಕಾಯಿ ತಂದು ರಾಹುಲ್ ಗಾಂಧಿ ಅವರಿಗೆ ಕೊಟ್ಟು, ಇದು ನಿಮ್ಮ ಅಜ್ಜಿ ಕೊಟ್ಟ ಭೂಮಿಯಲ್ಲಿ ಬೆಳೆದಿದ್ದೇನೆ ಎಂದರು. ಇಂತಹ ಯಾವುದಾದರೂ ಒಂದು ಕಾರ್ಯಕ್ರಮವನ್ನು ಬಿಜೆಪಿ ಅಥವಾ ಜೆಡಿಎಸ್ ಕೊಟ್ಟಿದೆಯೇ ಎಂದು ಸವಾಲೆಸೆದರು.


**ವಿರೋಧ ಪಕ್ಷಗಳ ಅಪಪ್ರಚಾರಕ್ಕೆ ಉತ್ತರ ಸಿಕ್ಕಿದೆ:** ರಾಜ್ಯದಲ್ಲಿ ಅಭಿವೃದ್ಧಿ ಆಗುತ್ತಿಲ್ಲ, ಸರ್ಕಾರದಲ್ಲಿ ಹಣವಿಲ್ಲ ಎಂದು ವಿರೋಧ ಪಕ್ಷಗಳು ಅಪಪ್ರಚಾರ ಮಾಡುತ್ತಿವೆ. ಕಲ್ಯಾಣ ಕರ್ನಾಟಕಕ್ಕೆ ನಮ್ಮ ಸರ್ಕಾರ ಪ್ರತಿ ವರ್ಷ 5 ಸಾವಿರ ಕೋಟಿ ಅನುದಾನ ನೀಡುತ್ತಿದೆ. ಬೀದರ್ ನಲ್ಲಿ 2025 ಕೋಟಿ ಮೊತ್ತದ ಯೋಜನೆಗೆ ಚಾಲನೆ ನೀಡಿದ್ದೇವೆ. ಇತ್ತೀಚೆಗೆ ಇಂಡಿಯಲ್ಲಿ 3400 ಕೋಟಿ ಮೊತ್ತದ ಯೋಜನೆಗಳಿಗೆ ಚಾಲನೆ ನೀಡಿದೆವು. ಇಂದು ಮೈಸೂರಿನಲ್ಲಿ 2 ಸಾವಿರ ಕೋಟಿಗೂ ಹೆಚ್ಚಿನ ಅನುದಾನದಲ್ಲಿ 74 ಯೋಜನೆಗಳಿಗೆ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದ್ದೇವೆ ಎಂದರು.

ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ಮಾಡಿ, 3 ಸಾವಿರ ಕೋಟಿಗೂ ಹೆಚ್ಚು ಮೊತ್ತದ ಯೋಜನೆ, ವಿಜಯನಗರದಲ್ಲಿ 2 ಸಾವಿರ ಕೋಟಿಗೂ ಹೆಚ್ಚು ಮೊತ್ತದ ಯೋಜನೆಗಳು, ನಂದಿ ಬೆಟ್ಟದಲ್ಲಿ ಸುಮಾರು 2 ಸಾವಿರ ಕೋಟಿಗೂ ಹೆಚ್ಚು ಮೊತ್ತದ ಕಾಮಗಾರಿಗಳಿಗೆ ಅನುಮೋದನೆ ನೀಡಿದ್ದೇವೆ. ನಾವು ಭಾವನೆ ಮೇಲೆ ರಾಜಕೀಯ ಮಾಡುವುದಿಲ್ಲ, ಬದುಕಿನ ಮೇಲೆ ರಾಜಕೀಯ ಮಾಡುತ್ತೇವೆ ಎಂದು ತಿಳಿಸಿದರು. ನಮ್ಮ ಸರ್ಕಾರ ದೇವಾಲಯವಿದ್ದಂತೆ. ಆರೋಗ್ಯ, ನೆಮ್ಮದಿಯ ಬದುಕು, ಉತ್ತಮ ಬೆಳೆ, ಆರ್ಥಿಕ ಪ್ರಗತಿ ಹೊಂದಲು ದೇವರಲ್ಲಿ ಪ್ರಾರ್ಥಿಸಲು ನಾವು ದೇವಾಲಯಕ್ಕೆ ಹೋಗುತ್ತೇವೆ. ಕಳೆದ 92 ವರ್ಷಗಳ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಕಾವೇರಿ ತಾಯಿ ಜೂನ್ ತಿಂಗಳಲ್ಲಿ ತುಂಬಿದ್ದಾಳೆ ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,004/Gram24ct ₹9,170/Gram22ct ಬೆಳ್ಳಿ: ₹116.00/Gram

## ಕರ್ನಾಟಕ ಶಾಸ್ತ್ರೀಯ ಸಂಗೀತ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಮಲ್ಲೇಶ್ವರಂ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಭಾನುವಾರ ಸಂಜೆ 6-15ಕ್ಕೆ ಕರ್ನಾಟಕ ಶಾಸ್ತ್ರೀಯ ಸಂಗೀತ. ಗಾಯನ ವಿದುಷಿ ಸುಮಾ ವೆಂಕಟೇಶ್, ಪಿಟೀಲು ವಿದುಷಿ ಪ್ರೇಮಾ ವಿವೇಕ್, ಮೃದಂಗ ವಿದ್ವಾನ್ ಫಣೀಂದ್ರ ಭಾಸ್ಕರ್, ಘಟ ವಿದ್ವಾನ್ ಸಚಿನ್ ದೇವಿಪ್ರಸಾದ್. ಸ್ಥಳ ಶ್ರೀ ರಾಮ ಮಂದಿರ, ಈಸ್ಟ್ ಪಾರ್ಕ್ ರಸ್ತೆ, ಅಂಚೆ ಕಚೇರಿ ಹತ್ತಿರ, ಮಲ್ಲೇಶ್ವರಂ, ಬೆಂಗಳೂರು-560003

## ಡಿಕೆಶಿ ಅವರ ಪೈಲಟ್ ವಾಹನ ಅಪಘಾತ, ನಾಲ್ವರು ಪೊಲೀಸರಿಗೆ ಗಾಯ

• ಉದಯವಾಹಿನಿ, ಬೆಂಗಳೂರು

ಮೈಸೂರಿನಲ್ಲಿ ನಡೆದ ರಾಜ್ಯ ಸರ್ಕಾರದ ಎರಡು ವರ್ಷದ ಸಾಧನಾ ಸಮಾವೇಶದಲ್ಲಿ ಪಾಲ್ಗೊಂಡು ನಗರಕ್ಕೆ ಮರಳುತ್ತಿದ್ದ ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಪೈಲಟ್ ವಾಹನ ಶ್ರೀರಂಗಪಟ್ಟಣದ ಕೋಡಿಶೆಟ್ಟಿಪುರ ಬಳಿ ಹೆದ್ದಾರಿಯಲ್ಲಿ ಪಲ್ಟಿಯಾಗಿ ನಾಲ್ವರು ಪೊಲೀಸರು ಗಾಯಗೊಂಡಿರುವ ಘಟನೆ ಶನಿವಾರ ನಡೆದಿದೆ. ಮಧ್ಯಾಹ್ನ 2.30 ಗಂಟೆ ಸಮಯದಲ್ಲಿ ಬೆಂಗಳೂರು-ಮೈಸೂರು ರಾಷ್ಟ್ರೀಯ ಶ್ರೀರಂಗಪಟ್ಟಣದ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಗೆ ಬರುವ ಕೋಡಿಶೆಟ್ಟಿಪುರದ ಬಳಿ ಬರುತ್ತಿದ್ದಾಗ ಪೈಲಟ್ ಜೀಪು ಅಪಘಾತಕ್ಕೀಡಾಗಿದೆ. ವೇಗವಾಗಿ ಬರುತ್ತಿದ್ದ ಪೊಲೀಸ್ ವಾಹನ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಸುದ್ದಿ ತಿಳಿದ ಶ್ರೀರಂಗಪಟ್ಟಣ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಗಾಯಗೊಂಡಿರುವ ಪೊಲೀಸರನ್ನು ಸ್ಥಳೀಯ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಕ್ಷಣ ಕಾರನ್ನು ನಿಲ್ಲಿಸಿ, ಸ್ಥಳ ಪರಿಶೀಲಿಸಿ ಪೊಲೀಸರಿಗೆ ಸಲಹೆ, ಸೂಚನೆ ನೀಡಿ ನಂತರ ಬೆಂಗಳೂರಿಗೆ ಪ್ರಯಾಣ ಬೆಳೆಸಿದರು.

## ರೌಡಿ ಬಿಕ್ಲು ಶಿವ ಕೊಲೆ ಪ್ರಕರಣ ವಿಚಾರಣೆಗೆ ಹಾಜರಾದ ಶಾಸಕ

• ಉದಯವಾಹಿನಿ, ಬೆಂಗಳೂರು

ಕೊಲೆ ಪ್ರಕರಣವೊಂದರಲ್ಲಿ ಆರೋಪಿಯಾಗಿರುವ ಶಾಸಕ ಭೈರತಿ ಬಸವರಾಜು ಅವರು ವಿಚಾರಣೆಗೆ ತನಿಖಾಧಿಕಾರಿ ಮುಂದೆ ಹಾಜರಾದರು. ಈ ಹಿನ್ನೆಲೆಯಲ್ಲಿ ಭಾರತಿನಗರ ಪೊಲೀಸ್ ಠಾಣೆ ಮುಂಭಾಗ ಬ್ಯಾರಿಕೇಡ್‌ಗಳನ್ನು ಹಾಕಿ ಬಿಗಿ ಬಂದೋಬಸ್ತ್ ಮಾಡಲಾಗಿದೆ. ರೌಡಿ ಶಿವಪ್ರಕಾಶ್ ಅಲಿಯಾಸ್ ಬಿಕ್ಲು ಶಿವ ಕೊಲೆ ಪ್ರಕರಣದಲ್ಲಿ ಭೈರತಿಬಸವರಾಜು ಅವರು ಐದನೇ ಆರೋಪಿ. ಈಗಾಗಲೇ ಈ ಪ್ರಕರಣದಲ್ಲಿ ನಾಲ್ಕು ಮಂದಿ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದು, ಉಳಿದವರಿಗಾಗಿ ಶೋಧ ಮುಂದುವರೆಸಿದ್ದಾರೆ.

ರೌಡಿ ಶಿವಪ್ರಕಾಶ್ ಕೊಲೆ ಪ್ರಕರಣ ಸಂಬಂಧ ಎಫ್‌ಐಆರ್‌ನಲ್ಲಿ ಭೈರತಿಬಸವರಾಜು ಅವರ ಹೆಸರು ನಮೂದಿಸಿರುವುದರಿಂದ ಹೆಣ್ಣೂರು ಸಮೀಪದ ಭೈರತಿಯಲ್ಲಿರುವ ಅವರ ಮನೆಗೆ ಪೊಲೀಸರು ಹೋಗಿ ಎರಡು ದಿನದೊಳಗೆ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ನೀಡಿ ಬಂದಿದ್ದರು. ಈ ಹಿನ್ನೆಲೆಯಲ್ಲಿ ಅವರು ಶನಿವಾರ ಮಧ್ಯಾಹ್ನ ವಿಚಾರಣೆಗೆ ಹಾಜರಾದರು. ಕಳೆದ ಮಂಗಳವಾರ ರಾತ್ರಿ ನಗರದ ಹಲಸೂರು ಕೆರೆ ಬಳಿ ತನ್ನ ಮನೆಯ ಮುಂದೆ ರೌಡಿಶೀಟರ್ ಶಿವಪ್ರಕಾಶ್ ಅಲಿಯಾಸ್ ಬಿಕ್ಲು ಶಿವ ನಿಂತಿದ್ದಾಗ ಸ್ಯಾಂಟ್ರೋ ಕಾರಿನಲ್ಲಿ ಬಂದಿದ್ದ ಏಳೆಂಟು ಮಂದಿ ದುಷ್ಕರ್ಮಿಗಳು ಅಟ್ಟಾಡಿಸಿಕೊಂಡು ಮಾರಕಾಸ್ತ್ರಗಳಿಂದ ಮನಬಂದಂತೆ ಹಲ್ಲೆ ನಡೆಸಿ ಕೊಚ್ಚಿ ಕೊಲೆ ಮಾಡಿದ್ದರು. ಈ ಬಗ್ಗೆ ಭಾರತಿನಗರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಎಫ್‌ಐಆರ್ ನಲ್ಲಿ ಐದನೇ ಆರೋಪಿಯಾಗಿ ಭೈರತಿಬಸವರಾಜು ಅವರ ಹೆಸರನ್ನು ನಮೂದಿಸಿದ್ದಾರೆ. ಕಿತ್ತಗಾನಹಳ್ಳಿ ಜಮೀನಿನ ವಿಚಾರದಲ್ಲಿ ಈ ಕೊಲೆ ನಡೆದಿದೆ ಎಂಬುವುದು ಪೊಲೀಸರ ಇದುವರೆಗಿನ ತನಿಖೆಯಿಂದ ತಿಳಿದುಬಂದಿದೆ.

## ಕೇಂದ್ರದ ವಿರುದ್ಧ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಪಕ್ಷಕ್ಕೆ ಕೆಟ್ಟ ಹೆಸರು ತರುವ ಸಲುವಾಗಿ ಸಂಸದೆ ಪ್ರಿಯಾಂಕ ಗಾಂಧಿ ಅವರ ಪತಿ ರಾಬರ್ಟ್ ವಾದ್ರಾ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದ್ದಾರೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ರಾಬರ್ಟ್ ವಾದ್ರಾ ಅವರ ಬೆಂಬಲಕ್ಕಿದೆ ಎಂದು ಹೇಳಿದರು. ಲ್ಯಾಂಡ್ ಜಿಹಾದ್ ಬಗ್ಗೆ ನನಗೆ ಗೊತ್ತಿಲ್ಲ, ನನ್ನ ವಿರುದ್ಧ ಕ್ರಮ ಕೈಗೊಳ್ಳುವುದಾದರೆ ಅದನ್ನು ಸ್ವಾಗತಿಸುತ್ತೇನೆ. ಅವರು ಯಾವಾಗ ಕ್ರಮ ಕೈಗೊಳ್ಳುತ್ತಾರೋ, ಆಗ ಉತ್ತರ ನೀಡುತ್ತೇನೆ ಎಂದು ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ರಾಬರ್ಟ್ ವಾದ್ರಾ ವಿರುದ್ಧದ ಕ್ರಿಮಿನಲ್ ಪ್ರಕರಣ ದಾಖಲು ಮಾಡಿರುವುದು ಒಬ್ಬ ವ್ಯಕ್ತಿಯ ಮೇಲೆ ದ್ವೇಷ ಸಾಧಿಸಲು, ಕಾಂಗ್ರೆಸ್ ಪಕ್ಷದ ಮೇಲೆ ಗೂಬೆ ಕೂರಿಸಲು, ಕೆಟ್ಟ ಹೆಸರು ತರಲು ಈ ರೀತಿ ಮಾಡುತ್ತಿದ್ದಾರೆ. ಅದು ಸಾಧ್ಯವಿಲ್ಲ. ದೇಶದಲ್ಲಿ ನ್ಯಾಯಾಲಯಗಳಿವೆ ಎಂದು ಹೇಳಿದರು. ರಾಬರ್ಟ್ ವಾದ್ರಾ ಅವರಿಗೆ ತೊಂದರೆ ನೀಡುತ್ತಿರುವುದು ಸರಿಯಲ್ಲ. ನಾವೆಲ್ಲಾ ಆತನ ಒಳ್ಳೆಯ ಕೆಲಸಕ್ಕೆ ಬೆಂಬಲ ನೀಡುತ್ತೇವೆ ಎಂದರು. ವಿಧಾನಪರಿಷತ್‌ನ ಸದಸ್ಯರ ನೇಮಕಾತಿಗೆ ಸಂಬಂಧಪಟ್ಟಂತೆ ಪರಿಶೀಲನೆ ನಡೆಸುವುದಾಗಿ ಇದೇ ಸಂದರ್ಭದಲ್ಲಿ ತಿಳಿಸಿದರು.

# ಭೈರತಿ ಬಸವರಾಜ್ ವಿರುದ್ಧ ರಾಜಕೀಯ ಪ್ರೇರಿತವಾಗಿ ಕ್ರಮ ಕೈಗೊಂಡಿಲ್ಲ

• ಉದಯವಾಹಿನಿ, ಬೆಂಗಳೂರು

ಕೆ.ಆರ್.ಪುರಂನ ಕ್ಷೇತ್ರದ ಶಾಸಕ ಭೈರತಿ ಬಸವರಾಜ್ ಅವರ ವಿರುದ್ಧ ರಾಜಕೀಯ ಪ್ರೇರಿತವಾಗಿ ಕ್ರಮ ಕೈಗೊಂಡಿಲ್ಲ, ಹೆಣ್ಣುಮಗಳು ಕೊಲೆ ಪ್ರಕರಣದಲ್ಲಿ ಶಾಸಕರ ಹೆಸರು ಹೇಳಿದ್ದರಿಂದಾಗಿ ವಿಚಾರಣೆ ನಡೆಸಲಾಗುತ್ತಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ವಿಚಾರಣೆಗೆ ನೋಟಿಸ್ ಕೊಟ್ಟಿದ್ದಾರೆ. ಹೇಳಿಕೆಯನ್ನು ದಾಖಲಿಸಿದ್ದಾರೆ. ತನಿಖೆ ಮುಂದುವರೆಯುತ್ತದೆ. ಕೊಲೆ ಪ್ರಕರಣದಲ್ಲಿರುವ ಆರೋಪಿಗಳಿಗೂ, ಶಾಸಕರಿಗೂ ಸಂಬಂಧ ಇದೆಯೇ?, ಅನುಯಾಯಿಗಳ ನಡುವೆ ಬೇರೆ ರೀತಿಯ ಸಂಪರ್ಕ ಇರಬಹುದು. ಆದರೆ ಕೊಲೆ ಪ್ರಕರಣದಲ್ಲಿ ಅವರ ಸಂಪರ್ಕವಿದೆಯೇ ಎಂಬುದನ್ನು ತನಿಖೆ ನಡೆಸಲಾಗುತ್ತಿದೆ ಎಂದರು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷಗಳಾಗಿವೆ. ರಾಜಕೀಯಪ್ರೇರಿತವಾಗಿ ನಾವು ಯಾವ ಪ್ರಕರಣವನ್ನೂ ದಾಖಲಿಸಿಲ್ಲ. ಬಸವರಾಜ್ ಪ್ರಕರಣದಲ್ಲಿ ಯಾವುದೇ ರಾಜಕೀಯ ಇಲ್ಲ. ಕೊಲೆಗೆ ಸಂಬಂಧಪಟ್ಟಂತೆ ದೂರು ನೀಡಿರುವ ಮಹಿಳೆಯೊಬ್ಬರು ಶಾಸಕರ ಹೆಸರು ಹೇಳಿದ್ದಾರೆ. ಹೀಗಾಗಿ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಅದನ್ನು ಯಾವ ರೀತಿ ರಾಜಕೀಯ ಪ್ರೇರಿತ ಎಂದು ಹೇಳಲು ಸಾಧ್ಯ ಎಂದರು. ಧರ್ಮಸ್ಥಳದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪ್ರಾಥಮಿಕ ತನಿಖೆ ನಡೆಯುತ್ತಿದೆ. ಇದು ಠಾಣೆಗೆ ಸೀಮಿತ ಪಟ್ಟಂತಹ ವಿಚಾರ. ಒಬ್ಬ ವ್ಯಕ್ತಿ ಹೇಳಿಕೆ ನೀಡಿ ನಂತರ ದೂರು ದಾಖಲಿಸಿದ್ದಾನೆ. ಅದರಲ್ಲಿನ ಸತ್ಯಾಸತ್ಯತೆಗಳನ್ನು ಸ್ಥಳೀಯ ಠಾಣಾ ಹಂತದಲ್ಲಿಯೇ ಪರಿಶೀಲಿಸಲಾಗುತ್ತಿದೆ. ಹೆಚ್ಚಿನ ತನಿಖೆ ಅಗತ್ಯ ಇದೆ ಎಂದಾದರೆ ಸರ್ಕಾರ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದರು. ಪ್ರಾಥಮಿಕ ಹಂತದಲ್ಲೇ ಎಸ್‌ಐಟಿ ತನಿಖೆ ಮಾಡಿ ಎಂದು ಒತ್ತಾಯಿಸುವುದಾದರೆ ನಮ ಪೊಲೀಸ್ ಇಲಾಖೆ ಇರುವುದಾದರೆ ಏಕೆ ಎಂದು ಪ್ರಶ್ನಿಸಿದರು. ವಕೀಲರ ತಂಡ ತಮ ಬಳಿ, ಮುಖ್ಯಮಂತ್ರಿಯವರ ಬಳಿ ಚರ್ಚೆ ನಡೆಸಿದೆ. ತಾವೂ ಕೂಡ ಈ ಬಗ್ಗೆ ಮುಖ್ಯಮಂತ್ರಿಯವರ ಜೊತೆ ಚರ್ಚೆ ಮಾಡಿದ್ದೇವೆ. ಅಗತ್ಯವಿದ್ದರೆ ಎಸ್‌ಐಟಿ ಮಾಡುತ್ತೇವೆ. ಯಾರೋ ಹೇಳಿದರು ಎಂಬ ಕಾರಣಕ್ಕೆ ಎಸ್‌ಐಟಿ ಮಾಡುವುದು ಪೊಲೀಸರ ಸಂಪ್ರದಾಯವಲ್ಲ ಎಂದರು.



> ಶಾಸಕರ ಅನುದಾನ ಹಂಚಿಕೆಯಲ್ಲಿ ಯಾವುದೇ ತಾರತಮ್ಯ ಮಾಡಿಲ್ಲ. ಈ ಹಿಂದೆ ಬಿಜೆಪಿ ಆಡಳಿತದಲ್ಲಿದ್ದಾಗ ಅವರ ಪಕ್ಷದ ಶಾಸಕರಿಗೆ 50 ಕೋಟಿ ನೀಡಿದ್ದರೆ, ನಮ ಪಕ್ಷದ ಶಾಸಕರಿಗೆ 12 ಕೋಟಿ ಮಾತ್ರ ಕೊಡುತ್ತಿದ್ದರು. ನಾವು ಅದನ್ನೇ ಅನುಸರಿಸುತ್ತಿದ್ದೇವೆ. ಕೆಲವು ಕ್ಷೇತ್ರಗಳಲ್ಲಿ ಅಭಿವೃದ್ಧಿಯಾಗಿರುತ್ತದೆ, ಆ ಕ್ಷೇತ್ರಕ್ಕೆ ಕಡಿಮೆ ಹಣ ಕೊಡುತ್ತಾರೆ. ಅಭಿವೃದ್ಧಿಯಲ್ಲಿ ಹಿಂದುಳಿದವರ ಕ್ಷೇತ್ರಕ್ಕೆ ಹೆಚ್ಚಿನ ಹಣ ನೀಡುವ ಮಾನದಂಡವನ್ನು ಅನುಸರಿಸಲಾಗುವುದು. ಪೂರ್ತಿ ಪ್ರಮಾಣದ ಹಣ ನೀಡುವುದಿಲ್ಲ ಎಂದು ಹೇಳಿಲ್ಲ, ಯಾವುದೇ ದ್ವೇಷದ ರಾಜಕೀಯ ಮಾಡಿಲ್ಲ
>
> -ಡಾ.ಜಿ.ಪರಮೇಶ್ವರ್, ಗೃಹಸಚಿವ

# ರಾರಾಜಿಸಲಿವೆ ಜಾಹೀರಾತು ಫಲಕಗಳು

## ಬೆಂಗಳೂರಿನ ಸಾರ್ವಜನಿಕ ಸ್ಥಳಗಳು, ರಸ್ತೆಗಳಲ್ಲಿ ಜಾಹೀರಾತು ಪ್ರದರ್ಶನಕ್ಕೆ ಅವಕಾಶ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯಲ್ಲಿ ವಾಣಿಜ್ಯ ಜಾಹೀರಾತು ಪ್ರದರ್ಶನಕ್ಕಿದ್ದ ನಿರ್ಬಂಧಕ್ಕೆ ತಿಲಾಂಜಲಿ ಇಟ್ಟಿರುವ ರಾಜ್ಯ ಸರಕಾರ, ಸಾರ್ವಜನಿಕ ಸ್ಥಳಗಳು, ರಸ್ತೆಗಳಲ್ಲಿ ಜಾಹೀರಾತು ಪ್ರದರ್ಶನಕ್ಕೆ ಅವಕಾಶ ಕಲ್ಪಿಸುವ ಬಿಬಿಎಂಪಿ ಜಾಹೀರಾತು ಬೈಲಾ-2024 ಜಾರಿಗೆ ಅಂತಿಮ ಅಧಿಸೂಚನೆ ಹೊರಡಿಸಿದೆ.

ಜಾಹೀರಾತು ಮಾಫಿಯಾಗೆ ಮಣಿದಿರುವ ರಾಜ್ಯ ಸರಕಾರ, 7 ವರ್ಷಗಳ ಬಳಿಕ ನಗರದಲ್ಲಿ ಮತ್ತೆ ಖಾಸಗಿ ಜಾಹೀರಾತು ಏಜೆನ್ಸಿಗಳು ಬೇಕಾಬಿಟ್ಟಿ ಹೋರ್ಡಿಂಗ್ಸ್ ಅಳವಡಿಸಲು ಅನುವು ಮಾಡಿಕೊಡುತ್ತಿದೆ. ಈ ನಿಯಮವು ಬಿಬಿಎಂಪಿಯು 2018ರಲ್ಲಿ ಸ್ವತಃ ಅಂಗೀಕರಿಸಿದ್ದ ಹೊರಾಂಗಣ ಜಾಹೀರಾತು ಮತ್ತು ಸಾರ್ವಜನಿಕ ಸಂದೇಶ ಬೈಲಾದ ಆಶಯಗಳಿಗೆ ತದ್ವಿರುದ್ಧವಾಗಿದೆ. ಇದು ನಗರದ ಹಿತಕ್ಕಿಂತಲೂ ಹೆಚ್ಚಾಗಿ ಜಾಹೀರಾತುದಾರರ ಹಿತಕಾಯುವಂತಿದೆ. ಹೈಕೋರ್ಟ್ ಸೂಚನೆ ಮೇಲೆ ಜಾರಿಗೊಳಿಸಲಾದ ಹೋರ್ಡಿಂಗ್ ನಿಷೇಧ ತೆರವುಗೊಳಿಸುವ ಧೈರ್ಯವನ್ನು 2018ರ ಬಳಿಕ ಯಾವುದೇ ಸರಕಾರವೂ ತೋರಿರಲಿಲ್ಲ. ಆಗಿನಿಂದಲೂ ಹೋರ್ಡಿಂಗ್ಸ್ ಅಳವಡಿಕೆಗೆ ಅವಕಾಶ ನೀಡುವಂತೆ ಜಾಹೀರಾತು ಏಜೆನ್ಸಿಗಳು ಒತ್ತಡ ಹೇರುತ್ತಲೇ ಇದ್ದವು. ಇದೀಗ ಮತ್ತೆ ಜಾಹೀರಾತು ಹಾವಳಿಗೆ ಅವಕಾಶ ಕಲ್ಪಿಸಿಕೊಡಲಾಗುತ್ತಿದೆ. ಸಾರ್ವಜನಿಕ ಪ್ರದೇಶಗಳು ಅಂದಗೆಡದಂತೆ ನೋಡಿಕೊಳ್ಳಲು ಕಾರಣವಾಗಿದ್ದ ಬಿಬಿಎಂಪಿ ಹೊರಾಂಗಣ ಜಾಹೀರಾತು ಮತ್ತು ಸಾರ್ವಜನಿಕ ಸಂದೇಶ ಬೈಲಾ-2018ರ ಆಶಯವನ್ನೇ ಬುಡಮೇಲು ಮಾಡಲಾಗಿದೆ. ನೂತನ ಬೈಲಾದಲ್ಲಿ ನೆಲದಲ್ಲಿ ಅಳವಡಿಸುವ ಹೋರ್ಡಿಂಗ್ ಮಾತ್ರವಲ್ಲ, ಕಟ್ಟಡದ ಮೇಲಿನ ಹೋರ್ಡಿಂಗ್, ಒಂದರ ಹಿಂದೆ ಒಂದರಂತೆ ಅಳವಡಿಸುವ ಸ್ಯಾಂಡ್ವಿಚ್, ಕಿಯೋಸ್ಕ್ ಹಾಗೂ ನಿಯಾನ್ ಸೈನ್ ಹೋರ್ಡಿಂಗ್‌ಗಳಿಗೂ ಅವಕಾಶ ಕಲ್ಪಿಸಲಾಗುತ್ತಿದೆ. ಅವುಗಳ ಗಾತ್ರಗಳಿಗೆ ಸಂಬಂಧಿಸಿ ಕೆಲವು ನಿರ್ಬಂಧ ಹೇರಿದ್ದು, ನಿಗದಿತ ವಿಸ್ತೀರ್ಣದ ರಸ್ತೆಗಳಲ್ಲಷ್ಟೆ ಜಾಹೀರಾತು ಪ್ರದರ್ಶನಕ್ಕೆ ಅನುಮತಿ ನೀಡಲಾಗಿದೆ.

**7 ವರ್ಷಗಳ ಬಳಿಕ ಅಸ್ತು**

ಕೆಲ ಪ್ರಮುಖ ರಸ್ತೆಗಳಲ್ಲಿಜಾಹೀರಾತು ಪ್ರದರ್ಶನವನ್ನು ನಿಷೇಧಿಸಲಾಗಿದೆ. 18 ರಿಂದ 24 ಮೀಟರ್‌ವರೆಗಿನ ವಿಸ್ತೀರ್ಣದ ರಸ್ತೆಗಳಲ್ಲಿಪ್ರತಿ 200 ಮೀಟರ್ ಉದ್ದದವರೆಗೆ 800 ಚ.ಅಡಿ (ಎರಡೂ ಬದಿ ಸೇರಿ), 24 ಮೀಟರ್‌ನಿಂದ 30 ಮೀ.ವರೆಗಿನ ರಸ್ತೆಗಳಲ್ಲಿ1000 ಚ.ಅಡಿ, 30 ರಿಂದ 60 ಮೀ.ವರೆಗಿನ ರಸ್ತೆಗಳಲ್ಲಿ1100 ಚ.ಅಡಿ, 60 ಮೀಟರ್ ಮೇಲ್ಪಟ್ಟ ರಸ್ತೆಗಳಲ್ಲಿ 1200 ಚ.ಅಡಿ ಹಾಗೂ 1 ಲಕ್ಷ ಚ.ಅಡಿ ವಿಸ್ತೀರ್ಣದ ಸರ್ಕಲ್ ಗಳಲ್ಲಿ3000 ಚ.ಅಡಿಯಷ್ಟು ಜಾಹೀರಾತು ಪ್ರದರ್ಶನಕ್ಕೆ ಅನುವು ಮಾಡಿಕೊಡಲಾಗಿದೆ. ರಸ್ತೆಯು 12 ಮೀಟರ್‌ಗಿಂತ ಹೆಚ್ಚು ಅಗಲದ ರಸ್ತೆಗಳಲ್ಲಿ 200 ಮೀಟರ್‌ವರೆಗೆ 600 ಚ.ಅಡಿ, 6 ಮೀಟರ್ ಮೇಲ್ಪಟ್ಟ ಅಗಲದ ರಸ್ತೆಗಳಲ್ಲಿ500 ಚ.ಅಡಿಯಷ್ಟು ವಿಸ್ತೀರ್ಣದ ಜಾಹೀರಾತು ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

**ಕಣ್ಣಿಗೆ ರಾಚುವ ಜಾಹೀರಾತುಗಳಿಗೆ ಬ್ರೇಕ್:** ನಿಯಮದಲ್ಲಿ ಓದಲು ಕ್ಲಿಷ್ಟಕರವಾದ ಮತ್ತು ಕಣ್ಣಿಗೆ ರಾಚುವ ಜಾಹೀರಾತುಗಳಿಗೆ ಬ್ರೇಕ್ ಬೀಳುತ್ತದೆ. ಯಾವುದೇ ಸಂದರ್ಭದಲ್ಲೂಜಾಹೀರಾತು ಸಾಧನದಲ್ಲಿಒಳಗೊಂಡಿರುವ ಮಾಹಿತಿಯ ಪಠ್ಯ, ವಸ್ತುವಿನ ಗಾತ್ರವು ಚಾಲಕನು, ಪ್ರಯಾಣಿಕರು ಚಲಿಸುವ ವಾಹನಗಳಿಗೆ ಅಡ್ಡಿಯಾಗುವ ಅಥವಾ ಚಾಲಕನ ಏಕಾಗ್ರತೆಗೆ ಭಂಗವನ್ನುಂಟು ಮಾಡುವ ಜಾಹೀರಾತುಗಳಿಗೆ ನಿಷೇಧ ವಿಧಿಸಲಾಗಿದೆ. ಈಗಾಗಲೇ ಅಸ್ತಿತ್ವದಲ್ಲಿರುವ ಸಾರ್ವಜನಿಕ ಖಾಸಗಿ ಯೋಜನೆಯಡಿಯಲ್ಲಿರುವ ಸ್ಕೈವಾಕ್, ಬಸ್ ತಂಗುದಾಣಗಳು, ಇ-ಶೌಚಾಲಯಗಳಲ್ಲಿನ ಜಾಹೀರಾತು ಪ್ರದರ್ಶನಕ್ಕೆ ವಿನಾಯಿತಿ ಇದೆ.

**ಬಿಎಂಟಿಸಿ ಬಸ್ಸಿಗೂ ಶುಲ್ಕ:** ಬಿಎಂಟಿಸಿ ಬಸ್‌ಗಳು, ಸರಕಾರಿ, ಅರೆ ಸರಕಾರಿ, ಖಾಸಗಿ ಸಂಸ್ಥೆಗಳಿಗೆ ಸೇರಿದ ವಾಹನಗಳಲ್ಲಿ ಜಾಹೀರಾತು ಪ್ರದರ್ಶಿಸಲು ಬಿಬಿಎಂಪಿಗೆ ಜಾಹೀರಾತು ಶುಲ್ಕ ಪಾವತಿಸಬೇಕಿದೆ. ವಾಹನಗಳ ನೋಂದಣಿ ಸಂಖ್ಯೆ, ಪ್ರದರ್ಶನದ ಉದ್ದೇಶಿತ ಅವಧಿಯ ಮಾಹಿತಿ ನೀಡಿ ಅನುಮತಿ ಪಡೆಯಬೇಕಿದೆ.

**ಜಂಕ್ಷನ್‌ನಿಂದ 10 ಮೀಟರ್‌ನೊಳಗೆ:** ಯಾವುದೇ ಸಂಚಾರಿ ಪ್ರದರ್ಶನ ವಾಹನ ನಿಲ್ಲಿಸುವಂತಿಲ್ಲ. ವಸತಿ ಪ್ರದೇಶ, ಕಟ್ಟಡ ಎಂದು ಆಸ್ತಿ ತೆರಿಗೆ ಪಾವತಿಸುತ್ತಿರುವ ಸ್ಥಳಗಳಲ್ಲಿಜಾಹೀರಾತು ಪ್ರದರ್ಶಿಸಿದರೆ, ಆಸ್ತಿ ತೆರಿಗೆಯ ಶೇ 10ರಷ್ಟು ದಂಡ ಹಾಕಲಾಗುತ್ತದೆ. 'ಬಿ' ಖಾತಾ ಆಸ್ತಿಗಳಲ್ಲಿ ಜಾಹೀರಾತು ಪ್ರದರ್ಶಿಸಿದರೆ ಆಸ್ತಿ ತೆರಿಗೆಯ ಶೇ 100 ರಷ್ಟು ದಂಡವನ್ನು ಆಸ್ತಿ ಮಾಲೀಕರು ಪಾವತಿಸಬೇಕಾಗುತ್ತದೆ. ಆಸ್ತಿಗೆ ಯಾವುದೇ ರೀತಿಯ ಖಾತೆ ಹೊಂದಿಲ್ಲದಿದ್ದರೆ, ಆಸ್ತಿ ತೆರಿಗೆಯ ಎರಡು ಪಟ್ಟು ಮೊತ್ತವನ್ನು ದಂಡವನ್ನು ಮಾಲೀಕರು ಪಾವತಿಸಬೇಕು.

**ಪರವಾನಗಿ ಕಡ್ಡಾಯ:** ಬಿಬಿಎಂಪಿಯಲ್ಲಿ ನೋಂದಣಿಯಾಗಿ ಪರವಾನಗಿ ಹೊಂದಿರುವ ಜಾಹೀರಾತು ಏಜೆನ್ಸಿಗಳಷ್ಟೇ ಜಾಹೀರಾತು ಪ್ರದರ್ಶನಕ್ಕೆ ಆಹ್ವಾನಿಸುವ ಟೆಂಡರ್‌ನಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ನೋಂದಣಿಗೆ 5 ಲಕ್ಷ ರೂ. ಶುಲ್ಕ ಪಾವತಿಸಬೇಕು. ಅರ್ಹರಿಗೆ ಮೂರು ವರ್ಷ ಪರವಾನಗಿ ನೀಡಲಾಗುತ್ತದೆ.



ಉದಯವಾಹಿನಿ ಚಿತ್ರ

### ಜಾಹೀರಾತಿಗೆ ದುಪ್ಪಟ್ಟು ದಂಡ

**ಅನಧಿಕೃತ ಜಾಹೀರಾತು ಪ್ರದರ್ಶಿಸಿದಲ್ಲಿ ನಿವೇಶನ ಮಾಲೀಕರು ಮತ್ತು ಜಾಹೀರಾತು ಏಜೆನ್ಸಿಗಳು ಟೆಂಡರ್‌ನಲ್ಲಿನಿಗದಿಪಡಿಸಿದ ದರದ ಎರಡು ಪಟ್ಟು ದಂಡ ಪಾವತಿಸಬೇಕು. ಜಾಹೀರಾತು ಶುಲ್ಕ ಪಾವತಿಸಲು ವಿಫಲವಾದಲ್ಲಿ ಬಿಬಿಎಂಪಿಯು ಚರಾಸ್ತಿ ವಶಪಡಿಸಿಕೊಳ್ಳುವ, ಬ್ಯಾಂಕ್ ಖಾತೆ ಮುಟ್ಟುಗೋಲು ಹಾಕಿಕೊಳ್ಳುವ ಹಕ್ಕು ಹೊಂದಿರುತ್ತದೆ. ಕ್ರಿಮಿನಲ್ ಪ್ರಕರಣವನ್ನೂ ದಾಖಲಿಸಲಿದೆ.**

### ಬಿಎಂಆರ್‌ಸಿಎಲ್‌ನೊಂದಿಗೆ ಆದಾಯ ಹಂಚಿಕೆ

**ಬಿಬಿಎಂಪಿಯ ರಸ್ತೆಗಳಲ್ಲಿರುವ ಬಿಎಂಆರ್ ಸಿಎಲ್ ಸ್ವತ್ತುಗಳಿಂದ ಬರುವ ಜಾಹೀರಾತು ಆದಾಯವನ್ನು ಬಿಬಿಎಂಪಿ, ಬಿಎಂಆರ್‌ಸಿಎಲ್ ನಡುವೆ ಸಮಾನವಾಗಿ ಹಂಚಿಕೊಳ್ಳಬೇಕಿದೆ. ಸಾರ್ವಜನಿಕ ವಲಯದ ಘಟಕ ಅಥವಾ ಸರಕಾರಿ ಸ್ವಾಮ್ಯದ ಏಜೆನ್ಸಿಗಳು ಕೂಡ ಸಾರ್ವಜನಿಕ ಪ್ರದೇಶಗಳಲ್ಲಿ ಜಾಹೀರಾತು ಪ್ರದರ್ಶಿಸಲು ಟೆಂಡರ್ ಮೂಲಕವೇ ಜಾಹೀರಾತು ಹಕ್ಕು ಪಡೆಯಬೇಕು. ಶುಲ್ಕವನ್ನು ಸಂಪೂರ್ಣವಾಗಿ ಬಿಬಿಎಂಪಿಗೆ ಪಾವತಿಸಬೇಕು.**

### ಸುಸ್ತಿದಾರರಿಗಿಲ್ಲ ಅವಕಾಶ

**ಜಾಹೀರಾತು ಶುಲ್ಕ ಬಾಕಿ ಉಳಿಸಿಕೊಂಡಿರುವ ಖಾಸಗಿ ಏಜೆನ್ಸಿಗಳಿಗೆ ನಿಗದಿತ ರಸ್ತೆ, ಜಂಕ್ಷನ್, ವೃತ್ತಗಳಲ್ಲಿ ಜಾಹೀರಾತು ಪ್ರದರ್ಶನಕ್ಕೆ ಆಹ್ವಾನಿಸುವ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವಿಲ್ಲ.**

## ಮನೆ ಮನೆಗೆ ಭೇಟಿ, ಆರೋಗ್ಯ ತಪಾಸಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ದೇವನಹಳ್ಳಿ

ತಾಲ್ಲೂಕಿನ ಬೀರಸಂದ್ರದಲ್ಲಿರುವ ಜಿಲ್ಲಾಡಳಿತ ಭವನದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸರ್ವೇಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ ಗೃಹ ಆರೋಗ್ಯ ಯೋಜನೆ ಕಾರ್ಯಗಾರ, ಜಿಲ್ಲೆಯಾದ್ಯಂತ ಗೃಹ ಆರೋಗ್ಯ ಯೋಜನೆ ವಿಸ್ತರಣೆ ಮತ್ತು ಆಶಾ ಕೈಪಿಡಿ ಬಿಡುಗಡೆ ಉದ್ಘಾಟನಾ ಕಾರ್ಯಕ್ರಮ ಶುಕ್ರವಾರ ನಡೆಯಿತು. ಗೃಹ ಆರೋಗ್ಯ ಯೋಜನೆಯಡಿ ಆರೋಗ್ಯಾಧಿಕಾರಿಗಳು ಜಿಲ್ಲೆಯಾದ್ಯಂತ ಮನೆ ಮನೆ ಭೇಟಿ ನೀಡಿ 30 ವರ್ಷ ಮೇಲ್ಪಟ್ಟವರಿಗೆ ಆರೋಗ್ಯ ತಪಾಸಣೆ ನಡೆಸಲಿದ್ದಾರೆ ಎಂದು ಜಿ.ಪಂ ಸಿಇಒ ಕೆ.ಎನ್.ಅನುರಾಧ ಅವರು ತಿಳಿಸಿದರು. ಈ ಯೋಜನೆಯು ಅಗತ್ಯ ಆರೋಗ್ಯ ಸೇವೆಗಳನ್ನು ನೇರವಾಗಿ ಸಾರ್ವಜನಿಕರ ಮನೆ ಬಾಗಿಲಿಗೆ ಒದಗಿಸುತ್ತದೆ. ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ಮನೆ ಬಾಗಿಲಿಗೆ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ರೂಪಿಸಲಾಗಿದೆ. ಸಾಂಕ್ರಾಮಿಕವಲ್ಲದ ರೋಗಗಳ ಆರಂಭಿಕ ಪತ್ತೆ ಮಾಡಿ ಅದನ್ನು ತಡೆಗಟ್ಟಲು ಈ ಯೋಜನೆ ರೂಪಿಸಲಾಗಿದೆ.

ಯೋಜನೆಯಲ್ಲಿ 30 ವರ್ಷ ಮೇಲ್ಪಟ್ಟ ಎಲ್ಲರಿಗೂ ಉಚಿತವಾಗಿ ತಪಾಸಣೆ ನಡೆಸಲಾಗುತ್ತದೆ. ಮಧುಮೇಹ, ರಕ್ತದೊತ್ತಡ, ಬಾಯಿ, ಸ್ತನ, ಗರ್ಭಕಂಠದ ಕ್ಯಾನ್ಸರ್ ರೋಗಗಳ ತಪಾಸಣೆ ಮಾಡಲಾಗುವುದು ಎಂದು ತಿಳಿಸಿದರು. ಆಶಾ ಕಾರ್ಯಕರ್ತೆಯರು ಪ್ರತಿ ಮನೆ ಮನೆಗೆ ತೆರಳಿ ಜನರಿಗೆ ರೋಗಗಳ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ ರಕ್ತದೊತ್ತಡ, ಮಧುಮೇಹ ಕಾಯಿಲೆಯವರಿಗೆ ಔಷಧಿಯನ್ನು ಒದಗಿಸಲಾಗುವು. ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಿ ಎಂದರು. ಡಾ.ಸುಷ್ಮಾ ಮಾತನಾಡಿ, ಕಾಯಿಲೆಗಳ ಬಗ್ಗೆ ಮನೆ ಮನೆಗೆ ತೆರಳಿ ಚಿಕಿತ್ಸೆ ನೀಡುವುದರ ಜೊತೆಗೆ ವ್ಯಾಯಾಮ, ಆರೋಗ್ಯ ಪದ್ಧತಿ ಕುರಿತು ಮಾಹಿತಿ ನೀಡಬೇಕು ಎಂದು ತಿಳಿಸಿದರು.


## ಪೋಸ್ಟ್ ಡಿಪ್ಲೊಮಾ ಇನ್ ಟೂಲ್ ಡಿಸೈನ್ ಕೋರ್ಸ್‌ಗಾಗಿ ಅರ್ಜಿ ಆಹ್ವಾನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದಲ್ಲಿ 2025-26ನೇ ಸಾಲಿನ ಪೋಸ್ಟ್ ಡಿಪ್ಲೊಮಾ ಇನ್ ಟೂಲ್ ಡಿಸೈನ್ ಕೋರ್ಸ್‌ಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಡಿಎಂಇ, ಡಿಟಿಡಿಎಂ, ಬಿಇ ಮೆಕ್ಯಾನಿಕಲ್, ಇಂಡಸ್ಟ್ರಿಯಲ್ ಎಂಜಿನಿಯರಿಂಗ್ ಆ್ಯಂಡ್ ಮ್ಯಾನುಫ್ಯಾಕ್ಚರಿಂಗ್, ಇಂಡಸ್ಟ್ರಿಯಲ್ ಪ್ರೊಡಕ್ಷನ್, ಆಟೊಮೊಬೈಲ್ ಎಂಜಿನಿಯರಿಂಗ್ ತೇರ್ಗಡೆಯಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಎಂ.ಟೆಕ್ ಇನ್ ಟೂಲ್ ಎಂಜಿನಿಯರಿಂಗ್: ಎಂ-ಟೆಕ್ ಇನ್ ಟೂಲ್ ಎಂಜಿನಿಯರಿಂಗ್ ಕೋರ್ಸ್‌ಗೆ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೆಕ್ಯಾನಿಕಲ್, ಆಟೊಮೊಬೈಲ್, ಆಟೊಮೇಷನ್ ಆ್ಯಂಡ್ ರೊಬೊಟಿಕ್, ಇಂಡಸ್ಟ್ರಿಯಲ್ ಆ್ಯಂಡ್ ಪ್ರೊಡಕ್ಷನ್, ಟೂಲ್, ಮೆಕಟ್ರಾನಿಕ್ಸ್ ವಿಷಯಗಳಲ್ಲಿ ಎಂಜಿನಿಯರಿಂಗ್ ಪದವಿ ಪಡೆದಿರುವವರು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು, ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು ಪಿಜಿ, ಪಿಡಿ ಸ್ಟಡೀಸ್ ಕೇಂದ್ರ, ರಾಜಾಜಿನಗರ, ಬೆಂಗಳೂರು. 9141629584, 9880217473, 8310987353 ಇಲ್ಲಿಗೆ ಸಂಪರ್ಕಿಸಬಹುದು.

## ಭೂಮಿ, ವಸತಿ ಹಕ್ಕಿಗಾಗಿ ಪ್ರತಿಭಟನಾ ಧರಣಿ

• ಉದಯವಾಹಿನಿ, ಹೊಸಕೋಟೆ


ಉದಯವಾಹಿನಿ ಚಿತ್ರ

ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಸಂಘಟನೆಯ ತಾಲ್ಲೂಕು ಘಟಕದ ವತಿಯಿಂದ ದಲಿತರ ಭೂಮಿ, ವಸತಿ ಹಕ್ಕು ಹಾಗೂ ಇತರೆ ಹಕ್ಕೊತ್ತಾಯಗಳಿಗಾಗಿ ಆಗ್ರಹಿಸಿ ನಗರದ ತಾಲ್ಲೂಕು ಕಚೇರಿ ಮುಂಭಾಗ ಒಂದು ದಿನದ ಪ್ರತಿಭಟನಾ ಧರಣಿ ನಡೆಯಿತು.

ಸ್ವಾಭಿಮಾನ ಬದುಕಿಗಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ರಚಿಸಿದ್ದರೂ ಬಹುತೇಕ ದಲಿತರಿಗೆ ಸ್ವಂತ ಮನೆ ಇಲ್ಲದ ಸ್ಥಿತಿಯಲ್ಲಿದ್ದಾರೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಸಂಘಟನೆಯ ಜಿಲ್ಲಾ ಪ್ರಧಾನ ಸಂಚಾಲಕ ಕೊರಳೂರು ಶ್ರೀನಿವಾಸ್ ವಿಷಾದಿಸಿದರು. ತಾಲ್ಲೂಕಿನಾದ್ಯಂತ ವಸತಿ, ಭೂ ರಹಿತ ದಲಿತರಿಗೆ ಆಗುತ್ತಿರುವ ಅನ್ಯಾಯವನ್ನು ಕೂಡಲೇ ಸರಿಪಡಿಸಬೇಕು. ಜೊತೆಗೆ ಹಲವು ಗ್ರಾಮಗಳಲ್ಲಿ ಮೇಲ್ವರ್ಗದವರು ದಲಿತರ ಭೂಮಿಗೆ ನಕಲಿ ದಾಖಲೆ ಸೃಷ್ಟಿಸಿ ಮೋಸ ಮಾಡುತ್ತಿದ್ದಾರೆ. ಭೂಮಿ ಕಳೆದುಕೊಂಡವರು ಕಚೇರಿಗೆ ಅಲೆದು ಸುಸ್ತಾಗುತ್ತಿದ್ದಾರೆ. ಹಾಗಾಗಿ ಆದಷ್ಟು ಬೇಗ ಈ ಸಮಸ್ಯೆ ಸರಿಪಡಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

> **ತಾಲ್ಲೂಕಿನ ಬಹುತೇಕ ಎಲ್ಲಾ ಗ್ರಾಮಗಳಲ್ಲಿ ವಸತಿ ಮತ್ತು ಭೂ ರಹಿತರಿದ್ದಾರೆ. ಇವರು ತಮ್ಮ ವಸತಿ ಮತ್ತು ಭೂ ಹಕ್ಕಿಗಾಗಿ ಸರ್ಕಾರಕ್ಕೆ ಅರ್ಜಿ ಸಲ್ಲಿಸಿ ಜಾತಕ ಪಕ್ಷಿಗಳಂತೆ ಕಾಯುತ್ತಿದ್ದಾರೆ. ಆದರೆ, ಅಧಿಕಾರಿಗಳು ಮಾತ್ರ ಗೌಪ್ಯವಾಗಿ ತಮಗೆ ಬೇಕಾದವರಿಂದ ಅರ್ಜಿ ಹಾಕಿಸಿ ಅವರಿಗೆ ಭೂಮಿ ನೀಡುತ್ತಿದ್ದಾರೆ. ನಿಜವಾದ ಭೂ, ವಸತಿ ರಹಿತರ ಕನಸು ಕನಸಾಗಿಯೇ ಉಳಿದಿದೆ ಎಂದರು.**

## ಪ್ರಾಣ ಕೊಟ್ಟೇವು ಕೆಐಎಡಿಬಿಗೆ ಭೂಮಿ ಕೊಡೆವು

• ಉದಯವಾಹಿನಿ, ಆನೇಕಲ್

ತಾಲ್ಲೂಕಿನ ಸರ್ಜಾಪುರ ಹೋಬಳಿಯಲ್ಲಿ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆ ವಿರೋಧಿಸಿ ತಾಲ್ಲೂಕು ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ವತಿಯಿಂದ ಬೈಕ್ ರ‍್ಯಾಲಿ ನಡೆಯಿತು. ಆನೇಕಲ್ ತಾಲ್ಲೂಕಿನ ಕೊಮ್ಮಸಂದ್ರದ ಬಯಲು ಬಸವೇಶ್ವರ ಸ್ವಾಮಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ ರ‍್ಯಾಲಿ ಆರಂಭಿಸಿದ ರೈತರು ಫ್ರೀಡಂಪಾರ್ಕ್ ವರೆಗೂ ಬೈಕ್, ಕಾರು, ಬಸ್‌ಗಳಲ್ಲಿ ತೆರಳಿ ಬೃಹತ್ ಪ್ರತಿಭಟನೆ ನಡೆಸಿದರು. ಶಾಸಕ ಬಿ.ಶಿವಣ್ಣ, ವಿಧಾನ ಪರಿಷತ್ ಸದಸ್ಯ ಗೋಪಿನಾಥರೆಡ್ಡಿ, ಬಮೂಲ್ ನಿರ್ದೇಶಕ ಆರ್.ಕೆ.ರಮೇಶ್ ಸೇರಿದಂತೆ ಸಾವಿರಾರು ಮಂದಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಹಸಿರು ಶಾಲು ಹೊದ್ದ ರೈತರು ಜೈ ಜವಾನ್ ಜೈ ಕಿಸಾನ್, ಪ್ರಾಣ ಕೊಟ್ಟೇವು ಭೂಮಿ ಕೊಡೆವು ಎಂಬ ಘೋಷವಾಕ್ಯಗಳು ಮೊಳಗಿದವು. ಪ್ರತಿಭಟನೆಯಿಂದಾಗಿ ಮುತ್ತಾನಲ್ಲೂರು, ದೊಮ್ಮಸಂದ್ರ ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿತ್ತು. ವಾಹನ ನಿಯಂತ್ರಣಕ್ಕೆ ಪೊಲೀಸರು ಹರಸಾಹಸಪಟ್ಟರು.


ಉದಯವಾಹಿನಿ ಚಿತ್ರ

**ಮಹಿಳಾ ರೈತರಿಂದ ಪಂಜಿನ ಮೆರವಣಿಗೆ:** ಕೆಐಎಡಿಬಿಯಿಂದ ಭೂಸ್ವಾಧೀನ ಪ್ರಕ್ರಿಯೆಯನ್ನು ವಿರೋಧಿಸಿ ರೈತರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ತಾಲ್ಲೂಕಿನ ಹಂದೇನಹಳ್ಳಿಯಲ್ಲಿ ಮಹಿಳೆಯರು ಪಂಜಿನ ಮೆರವಣಿಗೆ ನಡೆಸಿ ಜಾಗೃತಿ ಮೂಡಿಸಿದರು. ಶಾಸಕ ಬಿ.ಶಿವಣ್ಣ ಮಾತನಾಡಿ, ಆನೇಕಲ್ ತಾಲ್ಲೂಕಿನಲ್ಲಿ ಈಗಾಗಲೇ ವಿವಿಧ ಕಾರಣಗಳಿಂದಾಗಿ ಭೂಸ್ವಾಧೀನ ಹೆಚ್ಚಾಗಿದೆ. ಈಗ ಮತ್ತೆ ಕೈಗಾರಿಕೆಗಳ ಕಾರಣದಿಂದಾಗಿ ಕೃಷಿ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳುತ್ತಿರುವ ಕ್ರಮ ಖಂಡನೀಯ. ರೈತರ ವಿಶ್ವಾಸ ಪಡೆದು ಅಧಿಕಾರಿಗಳು ಕ್ರಮ ವಹಿಸಬೇಕು. ಭೂಸ್ವಾಧೀನ ಪ್ರಕ್ರಿಯೆಯಿಂದ ರೈತರಿಗಾಗುವ ತೊಂದರೆ ಬಗ್ಗೆ ಸರ್ಕಾರಕ್ಕೆ ತಿಳಿಸಲಾಗುವುದು ಎಂದರು. ವಿಧಾನ ಪರಿಷತ್ ಸದಸ್ಯ ಎಚ್.ಎಸ್.ಗೋಪಿನಾಥರೆಡ್ಡಿ ಮಾತನಾಡಿ, ಆನೇಕಲ್ ತಾಲ್ಲೂಕಿನಲ್ಲಿರುವ ಐದು ಕೈಗಾರಿಕಾ ಪ್ರದೇಶಗಳಲ್ಲಿಯೇ ಸರಿಯಾದ ಮೂಲ ಸೌಲಭ್ಯ ನೀಡುತ್ತಿಲ್ಲ. ಈಗ ಮತ್ತೊಂದು ಕೈಗಾರಿಕಾ ಪ್ರದೇಶ ಸ್ಥಾಪಿಸುವಲ್ಲಿ ಯಾವುದೇ ಅರ್ಥವಿಲ್ಲ. ಬೆಂಗಳೂರು ನೂರು ಕಿಮೀ ವ್ಯಾಪ್ತಿಯಲ್ಲಿ ಆನೇಕಲ್ ತಾಲ್ಲೂಕು ಹೊರತುಪಡಿಸಿ ಹಲವಾರು ಸ್ಥಳಗಳಿವೆ.

ಈ ಬಗ್ಗೆ ಸರ್ಕಾರ ಮರುಪರಿಶೀಲನೆ ನಡೆಸಬೇಕು. ಕೆಐಎಡಿಬಿಯು ಕೈಗಾರಿಕಾ ಪ್ರದೇಶ ಸ್ಥಾಪನೆಯ ವೇಳೆ ಯಾವ ಅಭಿಪ್ರಾಯ ಪಡೆಯದೆ ಏಕಾಏಕಿ ರೈತರ ಭೂಮಿ ಕಸಿಯುವುದು ಒಳ್ಳೆಯ ಬೆಳವಣಿಗೆಯಲ್ಲ. ರೈತರನ್ನು ಒಕ್ಕಲೆಬ್ಬಿಸಲು ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ಸಮತೋಲನ ಕಾಪಾಡಲು ಕೈಗಾರಿಕೆಗಳ ಜೊತೆಗೆ ಕೃಷಿ ಭೂಮಿಯೂ ಅಗತ್ಯ ಎಂದು ತಿಳಿಸಿದರು.

# ರೋಹಿಂಗ್ಯಾಗಳ ಗಡೀಪಾರಿಗೆ ಆಗ್ರಹ

## ತಗಡಿನಲ್ಲಿ ನೂರಾರು ಶೆಡ್‌ಗಳನ್ನು ನಿರ್ಮಿಸಿಕೊಂಡು ವಾಸ

• ಉದಯವಾಹಿನಿ, ಬೆಂಗಳೂರು

**ಸರ್ಕಾರಕ್ಕೆ ಸೂಟ್‌ಕೇಸ್ ಕೊಡ್ತು?**

ರಾಜಧಾನಿ ಬೆಂಗಳೂರು ಮತ್ತಿತರ ಕಡೆ ನಕಲಿ ಆಧಾರ್ ಕಾರ್ಡ್ ಪಡೆದುಕೊಂಡು ಕಾನೂನುಬಾಹಿರವಾಗಿ ವಾಸಮಾಡುತ್ತಿರುವ ರೋಹಿಂಗ್ಯಾಗಳನ್ನು ತಕ್ಷಣವೇ ರಾಜ್ಯದಿಂದ ಗಡೀಪಾರು ಮಾಡಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ. ಹೆಬ್ಬಾಳ ಕೆಂಪಾಪುರ ಬಳಿ ಇರುವ ಕೊಳಚೆ ಪ್ರದೇಶದಲ್ಲಿ ವಾಸವಿರುವ ಅಕ್ರಮ ವಲಸಿಗರ ಪ್ರದೇಶಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಭೇಟಿ ನೀಡಿ ಅಕ್ರಮ ವಲಸಿಗರ ಆಧಾರ್ ಕಾರ್ಡ್, ವೋಟರ್ ಕಾರ್ಡ್ ಪರಿಶೀಲನೆ ನಡೆಸಿದರು.

ಕಳೆದ ಹತ್ತು ವರ್ಷಗಳಿಂದ ರೋಹಿಂಗ್ಯಾಗಳು ನಕಲಿಆಧಾರ್ ಕಾರ್ಡ್ ಪಡೆದು ಇಲ್ಲಿಯೇ ವಾಸ ಮಾಡುತ್ತಿದ್ದಾರೆ. ತಗಡಿನಲ್ಲಿ ನೂರಾರು ಶೆಡ್‌ಗಳನ್ನು ನಿರ್ಮಿಸಿಕೊಂಡು ವಾಸ ಮಾಡುತ್ತಿದ್ದಾರೆ. ಇದನ್ನು ಪರಿಶೀಲನೆ ನಡೆಸಿದ ವೇಳೆ ಇದು ನಕಲಿ ಎಂಬುದು ಸಾಬೀತಾಗಿದೆ ಎಂದು ಆರೋಪಿಸಿದರು. ನಂತರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಇಲ್ಲಿ ಸಾವಿರಾರು ಅಕ್ರಮ ವಲಸಿಗರಿದ್ದಾರೆ. ಇವರ ಬಗ್ಗೆ ಪೊಲೀಸರು ಪರಿಶೀಲನೆ ಮಾಡಿ ಗಡಿಪಾರು ಮಾಡಬೇಕು. ಇವರ ಸಂಬಂಧ ನಾನು ಎನ್ ಐಎ, ಕೇಂದ್ರಕ್ಕೂ ಪತ್ರ ಬರೆಯುತ್ತೇನೆ ಎಂದು ಹೇಳಿದರು. ಹೆಬ್ಬಾಳದ ಬಳಿ ಇರುವ ಜಾಗ ಎಸ್.ಎಂ.ಕೃಷ್ಣ ಸರ್ಕಾರ ಇದ್ದಾಗ ಕೆಐಎಡಿಬಿ ಮೂಲಕ ರೈತರಿಂದ ವಶಪಡಿಸಿಕೊಂಡಿತ್ತು. ಇದುವರೆಗೆ ರೈತರಿಗೆ ಪರಿಹಾರ ಸಿಕ್ಕಿಲ್ಲ. ಈ ಜಮೀನು ಖಾಲಿಯಾಗಿಯೇ ಇದೆ. ಇಲ್ಲಿ ಕಸ ತುಂಬಿಕೊಂಡಿದೆ. ಈಗ ಉಳಿದುಕೊಂಡಿರುವ 48 ಎಕರೆ ಮೆಟ್ರೋಗೆ ಕೊಡಬೇಕು. ಇದೇ ಮಾರ್ಗದಲ್ಲಿ ವಿಮಾನ ನಿಲ್ದಾಣಕ್ಕೆ ಮೆಟ್ರೋ ಹಾದು ಹೋಗುತ್ತದೆ. ಇಲ್ಲಿಂದ ಹೋಗುವವರಿಗೆ ಹೋಗೋರಿಗೆ ಇಲ್ಲೇ ಬೋರ್ಡಿಂಗ್ ಪಾಸ್, ಇಮಿಗ್ರೇಷನ್ ಕಚೇರಿ ಮಾಡಿಕೊಡಬೇಕು, ಆಗ ಅನುಕೂಲ ಆಗುತ್ತದೆ ಎಂದು ಒತ್ತಾಯಿಸಿದರು.

ಕಳೆದ ಮೇ 1 ರಂದು ಕಾಂಗ್ರೆಸ್ ಸರ್ಕಾರ, 48 ಎಕರೆ ಮೆಟ್ರೋಗೆ ಕೊಡುವ ತೀರ್ಮಾನ ಮಾಡಿತ್ತು . ಆದರೆ, ಒಂದೇ ತಿಂಗಳಿಗೆ ಯೂಟರ್ನ್ ಹೊಡೆದಿದೆ. ಯಾವ ರಿಯಲ್ ಎಸ್ಟೇಟ್ ಕಂಪನಿ ಸರ್ಕಾರಕ್ಕೆ ಸೂಟ್‌ಕೇಸ್ ಕೊಡ್ತು? ಸರ್ಕಾರ ಯಾಕೆ ತನ್ನ ನಿರ್ಣಯ ತಾನೇ ಕೈಬಿಡಲು ಹೊರಟಿದೆ? ಸರ್ಕಾರ ಇದಕ್ಕೆ ಸ್ಪಷ್ಟೀಕರಣ ಕೊಡಬೇಕು ಎಂದು ಮನವಿ ಮಾಡಿದರು.

ಸರ್ಕಾರಕ್ಕೆ 45 ಎಕರೆ ಭೂಮಿಗೆ ಮೆಟ್ರೋದಿಂದ ಬೇಡಿಕೆ ಇಟ್ಟಿದ್ದು, ಆದರೆ 9 ಎಕರೆ ಜಾಗ ಮಾತ್ರ ಕೊಡುವುದಾಗಿ ಸರ್ಕಾರ ಹೇಳಿದ್ದು, ಇದರಿಂದಾಗಿ ಜಟಾಪಟಿ ಸೃಷ್ಟಿಯಾಗಿದೆ. ಸರ್ಕಾರ ಖಾಸಗಿ ಡೆವೆಲಪರ್ ಗೆ ಭೂಮಿ ಕೊಡ್ತಿದೆ ಎಂಬುದು ಬಿಜೆಪಿ ಆರೋಪವಾಗಿದೆ. ಹೆಬ್ಬಾಳದ ಬಳಿ ನಮ ಮೆಟ್ರೋ ಕಾಮಗಾರಿಗೆ ರಾಜ್ಯ ಸರ್ಕಾರದಿಂದ ಭೂಮಿ ವಿಳಂಬ ವಿಚಾರವಾಗಿ ಸ್ಥಳಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಮೆಟ್ರೋ ಅಧಿಕಾರಿಗಳೂ ಉಪಸ್ಥಿತರಿದ್ದರು.



### ಎರಡೆರಡು ಎಫ್‌ಐಆರ್

**ವಿಜಯಲಕ್ಷ್ಮೀ ಅವರನ್ನೇ ಈಗ ಹೋಗಿ ಕೇಳಿದರೂ ಅವರು ಭೈರತಿ ಹೆಸರು ಹೇಳಿಲ್ಲ ಎನ್ನುತ್ತಾರೆ. ಸ್ಥಳದಲ್ಲಿ ಭೈರತಿ ಬಸವರಾಜು ಇರಲಿಲ್ಲ ಎಂದು ಅವರೇ ಸ್ಪಷ್ಟ ಮಾಡಿದ್ದಾರೆ. ಹಾಗಿದ್ದರೆ ಒಂದು ಠಾಣೆಯಲ್ಲಿ ಎರಡೆರಡು ಎಫ್‌ಐಆರ್ ಹೇಗೆ ದಾಖಲಾದವು? ಯಾಕೆ ದಾಖಲಾಯಿತು? ಇದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ಭೈರತಿ ಬಸವರಾಜು ಅವರನ್ನು ಉದ್ದೇಶಪೂರ್ವಕವಾಗಿ ಸಿಲುಕಿಸಲು ಎರಡೆರಡು ಎಫ್‌ಐಆರ್ ಹಾಕಿದ್ದಾರೆ. ಇದು ಸರ್ಕಾರದ ಮಸಲತ್ತು ಎಂದು ಅನುಮಾನ ವ್ಯಕ್ತಪಡಿಸಿದರು.**

## ಸಿದ್ದು ಅವರೇ, ನೀವು ಕಾಂಗ್ರೆಸ್ ಗೆದ್ದ ಕ್ಷೇತ್ರಗಳಿಗೆ ಮಾತ್ರ ನೀವು ಮುಖ್ಯಮಂತ್ರಿನಾ?

# ಕೈ ಕ್ಷೇತ್ರಗಳಿಗೆ 50 ಕೋಟಿ ರೂ. ಬಿಡುಗಡೆ

• ಉದಯವಾಹಿನಿ, ಬೆಂಗಳೂರು



**ಲಜ್ಜೆಗೆಟ್ಟ ಕಾಂಗ್ರೆಸ್ ಪಕ್ಷ**

ಆಡಳಿತರೂಢ ಕಾಂಗ್ರೆಸ್ ಪಕ್ಷದ ಶಾಸಕರ ಕ್ಷೇತ್ರಗಳಿಗೆ 50 ಕೋಟಿ ರೂ. ಬಿಡುಗಡೆ ಮಾಡಿರುವ ಸಿಎಂ ಸಿದ್ದರಾಮಯ್ಯ ಧೋರಣೆಗೆ ಆಕ್ರೋಶ ವ್ಯಕ್ತಪಡಿಸಿರುವ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್, ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿರುವವರು ಮಾತ್ರ ಕರ್ನಾಟಕದ ಪ್ರಜೆಗಳಾ? ಕಾಂಗ್ರೆಸ್ ಶಾಸಕರನ್ನು ಗೆಲ್ಲಿಸಿರುವ ಕ್ಷೇತ್ರಗಳಿಗೆ ಮಾತ್ರ ತಾವು ಮುಖ್ಯಮಂತ್ರಿನಾ? ಕನ್ನಡಿಗರಿಗೆ ದ್ರೋಹ ಬಗೆಯುತ್ತಿರುವ ಲಜ್ಜೆಗೆಟ್ಟ ಕಾಂಗ್ರೆಸ್ ಪಕ್ಷಕ್ಕೆ ನಾಚಿಕೆಯಾಗಬೇಕು ಎಂದು ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ತಮ್ಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸರ್ಕಾರದ ವಿರುದ್ಧ ಸಾಲು ಸಾಲು ಪೋಸ್ಟ್ ಮಾಡಿರುವ ಅವರು, ಸೂಪರ್ ಸಿಎಂ ರಣಜಿತ್ ಸಿಂಗ್ ಸುರ್ಜೇವಾಲ ಅವರು ಶಾಸಕರೊಂದಿಗೆ ನಡೆಸಿದ ಸಭೆ ನಂತರ ಬಹಿರಂಗವಾಗಿರುವ ಅಸಮಾಧಾನಕ್ಕೆ ಬೆಚ್ಚಿ ಬಿದ್ದಿರುವ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಕುರ್ಚಿ ಉಳಿಸಿಕೊಳ್ಳಲು ಕಾಂಗ್ರೆಸ್ ಶಾಸಕರಿಗೆ ತಲಾ 50 ಕೋಟಿ ರೂ. ಅನುದಾನ ನೀಡಲು ಮುಂದಾಗಿದ್ದಾರೆ ಎಂದು ಆರೋಪಿಸಿದ್ದಾರೆ.

ಸಿದ್ದರಾಮಯ್ಯನವರೇ, ಮಾತೆತ್ತಿದರೆ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ತೋರುತ್ತಿದೆ ಎಂದು ಬೊಬ್ಬೆ ಹೊಡೆಯುತ್ತೀರಲ್ಲ, ಕಾಂಗ್ರೆಸ್ ಶಾಸಕರ ಕ್ಷೇತ್ರಗಳಿಗೆ 50 ಕೋಟಿಯ ರೂ.ಗಳ ಬೆಣ್ಣೆ ಹಚ್ಚಿ, ವಿಪಕ್ಷ ಶಾಸಕರ ಕ್ಷೇತ್ರಗಳಿಗೆ ದೊಡ್ಡ ಸೊನ್ನೆ ಸುತ್ತಿ ಸುಣ್ಣ ಹಚ್ಚಿದ್ದೀರಲ್ಲ, ಇದು ಮಲತಾಯಿ ಧೋರಣೆ ಅಲ್ಲವೇ? ಎಂದು ಪ್ರಶ್ನೆ ಮಾಡಿದ್ದಾರೆ. ಮತ್ತೊಂದು ಪೋಸ್ಟ್ ನಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರೇ, ಕ್ಷೇತ್ರದ ಅನುದಾನಕ್ಕಾಗಿ ವಿಪಕ್ಷದ ಶಾಸಕರು ತಾಳ್ಮೆಯಿಂದ ಕಾಯಬೇಕು ಎಂದರೆ ಏನು ಸ್ವಾಮಿ? ತಾವು ಈ ಮೊದಲೇ ಹೇಳಿರುವಂತೆ ಶಾಸಕರು ತಮ್ಮ ಬಳಿ ತಗ್ಗಿ-ಬಗ್ಗಿ ನಡೆಯಬೇಕು ಎನ್ನುವುದು ನಿಮ್ಮ ಮಾತಿನ ಅರ್ಥಾನಾ? ಅಥವಾ ತಾಳ್ಮೆಯಿಂದ ಇರದಿದ್ದರೆ ನಟ್ಟು-ಬೋಲ್ಟು ಟೈಟು ಮಾಡುತ್ತೇನೆ ಎನ್ನುವ ಧಮ್ಕಿನಾ? ಎಂದು ಪ್ರಶ್ನಿಸಿದ್ದಾರೆ. ತಮಗೆ ಇಷ್ಟ ಬಂದ ಹಾಗೆ ಬರೀ ಕಾಂಗ್ರೆಸ್ ಶಾಸಕರಿಗೆ ಮಾತ್ರ ಅನುದಾನ ಕೊಡೋಕೆ ರಾಜ್ಯ ಸರ್ಕಾರದ ಖಜಾನೆ ನಿಮ್ಮ ಪಕ್ಷದ ಪಾರ್ಟಿ ಫಂಡ್ ಅಲ್ಲ ಡಿ.ಕೆ.ಶಿವಕುಮಾರ್ ಅವರೇ, ಅದು ಆರೂವರೆ ಕೋಟಿ ಕನ್ನಡಿಗರ ಬೆವರಿನ ತೆರಿಗೆ ಹಣ. ಈ ಮಲತಾಯಿ ಧೋರಣೆ ನಿಲ್ಲಿಸಿ, ಎಲ್ಲಾ ಕ್ಷೇತ್ರಗಳಿಗೂ ಅನುದಾನ ಬಿಡುಗಡೆ ಮಾಡಿ ಎಂದು ಒತ್ತಾಯಿಸಿದ್ದಾರೆ. ಕಳೆದ 26 ತಿಂಗಳುಗಳಲ್ಲಿ ತಮ್ಮದೇ ಪಕ್ಷದ ಸರ್ಕಾರದಿಂದ ನಯಾ ಪೈಸೆ ಅನುದಾನ ಪಡೆಯಲಾಗದೆ ತಮ್ಮ ಕ್ಷೇತ್ರಗಳಲ್ಲಿ ತಲೆ ಎತ್ತಿಕೊಂಡು ಓಡಾಡಲಾಗದ ಪರಿಸ್ಥಿತಿ ಎದುರಿಸುತ್ತಿದ್ದ ಕಾಂಗ್ರೆಸ್ ಶಾಸಕರು, ಸೂಪರ್ ಸಿಎಂ ಸುರ್ಜೇವಾಲ ಅವರ 6 ದಿನಗಳ ಸಭೆಯ ಪರಿಣಾಮದಿಂದ, ಸಿಎಂ ಸಿದ್ದರಾಮಯ್ಯ ಅವರ ಬಳಿ ತಲಾ 50 ಕೋಟಿ ರೂ. ಅನುದಾನ ಗಿಟ್ಟಿಸಿಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.

> **ಸೂಪರ್ ಸಿಎಂ ಸುರ್ಜೇವಾಲ ಅವರೇ, ಕಾಂಗ್ರೆಸ್ ಶಾಸಕರ ಕ್ಷೇತ್ರಗಳಿಗೆ ಅನುದಾನ ಕೊಡಿಸಿಕೊಟ್ಟ ತಮಗೆ ಅಭಿನಂದನೆಗಳು. ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಶಾಸಕರ ಕ್ಷೇತ್ರಗಳಿಗೂ ಅನುದಾನ ಕೊಡಿಸಿ ಪುಣ್ಯ ಕಟ್ಟಿಕೊಳ್ಳಿ ಸ್ವಾಮಿ. ನಿಮ್ಮ ಸೂಚನೆಯ ಫಲವಾಗಿ ನಮ್ಮ ಪಕ್ಷದ ಶಾಸಕರ ಕ್ಷೇತ್ರಗಳಿಗೂ ಅನುದಾನ ಸಿಕ್ಕರೆ ತಮಗೆ ವಿಶೇಷ ಸನ್ಮಾನ ಮಾಡಿ ಅಭಿನಂದನೆ ಸಲ್ಲಿಸುತ್ತೇವೆ. ಕೊಡಿಸುತ್ತೀರಲ್ಲ?**
>
> -ಆರ್. ಅಶೋಕ್
> ವಿಧಾನಸಭೆಯ ಪ್ರತಿಪಕ್ಷದ ನಾಯಕ

### ಹೊಂಗನೂರಿನ ಶ್ರೀಮತಿ ಚನ್ನಮ್ಮ ಮಂಚೇಗೌಡ ಕರ್ನಾಟಕ ಪಬ್ಲಿಕ್ ಶಾಲೆ ಕಟ್ಟಡ ಉದ್ಘಾಟನೆ

# ಶಾಲೆಯಲ್ಲಿ ಹಳೆ ವಿದ್ಯಾರ್ಥಿಗಳ ಸಂಘ ರಚನೆಗೆ ಆದೇಶಿಸಿ

• ಉದಯವಾಹಿನಿ, ಚನ್ನಪಟ್ಟಣ

ರಾಜ್ಯದ ಎಲ್ಲಾ ಶಾಲೆಗಳಲ್ಲಿ ಹಳೆ ವಿದ್ಯಾರ್ಥಿಗಳ ಸಂಘವನ್ನು ಕಡ್ಡಾಯವಾಗಿ ರಚಿಸಲು ಆದೇಶ ಹೊರಡಿಸಿ. ಸಂಘಗಳಿಂದ ಸರ್ಕಾರಿ ಶಾಲೆಗಳಿಗೆ ಶಕ್ತಿ ತುಂಬುವ ಕೆಲಸವಾಗುತ್ತದೆ. ಅದಕ್ಕೆ ಬೇಕಾದ ಮಾರ್ಗದರ್ಶನವನ್ನು ನಾನು ನೀಡುತ್ತೇನೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಸಲಹೆ ನೀಡಿದರು.

ತಾಲ್ಲೂಕಿನ ಹೊಂಗನೂರಿನಲ್ಲಿ ಕಣ್ವ ಫೌಂಡೇಷನ್‌ನ ಡಾ. ಎಚ್.ಎಂ. ವೆಂಕಟಪ್ಪ ಅವರು 14 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಶ್ರೀಮತಿ ಚನ್ನಮ್ಮ ಮಂಚೇಗೌಡ ಕರ್ನಾಟಕ ಪಬ್ಲಿಕ್ ಶಾಲೆಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಸರ್ಕಾರಿ ಶಾಲೆಯಲ್ಲಿ ಓದಿ ದೊಡ್ಡಮಟ್ಟಕ್ಕೆ ಬೆಳೆದಿರುವವರು ತಮ್ಮ ಶಾಲೆ ಕಲ್ಯಾಣಕ್ಕೆ ನೆರವು ನೀಡುತ್ತಾರೆ. ಇದಕ್ಕೆ ಸಂಘಟನೆಯಾಗಬೇಕು ಎಂದರು. ಮನುಷ್ಯ ಹುಟ್ಟುವಾಗ ನಾಲ್ಕು ಋಣದಲ್ಲಿ ಹುಟ್ಟುತ್ತಾನೆ. ತಂದೆ-ತಾಯಿ, ದೇವರು, ಗುರು ಹಾಗೂ ಸಮಾಜದ ಋಣಗಳನ್ನು ಧರ್ಮದಿಂದ ತೀರಿಸಬೇಕು. ಡಾ. ವೆಂಕಟಪ್ಪ ಮತ್ತು ಅವರ ಕುಟುಂಬದವರು ಈ ಎಲ್ಲಾ ಋಣವನ್ನು ಧರ್ಮದಿಂದ ತೀರಿಸುತ್ತಿದ್ದಾರೆ. ಅವರು ಬಿತ್ತಿರುವ ಬೀಜ ಮುಂದೆ ಹೆಮ್ಮರವಾಗಿ ಬೆಳೆದು ರಾಜ್ಯಕ್ಕೆ ಮಾದರಿಯಾಗಲಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಟ್ಟಡ ನಿರ್ಮಾಣಕ್ಕೆ ಶ್ರಮಿಸಿದವರನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಹೊಂಗನೂರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಡಾ. ವೆಂಕಟಪ್ಪ ಅವರನ್ನು ಸನ್ಮಾನಿಸಿದರು. ಆದಿಚುಂಚನಗಿರಿ ಸಂಸ್ಥಾನ ಮಠದ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಚನ್ನಪಟ್ಟಣ ಶಾಸಕ ಸಿ.ಪಿ. ಯೋಗೇಶ್ವರ್ ಅಧ್ಯಕ್ಷತೆ ವಹಿಸಿದ್ದರು.



ಉದಯವಾಹಿನಿ ಚಿತ್ರ

**ಸಿಎಸ್‌ಆರ್‌ನಡಿ 2 ಸಾವಿರ ಶಾಲೆ**

**ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ರಾಜ್ಯದಲ್ಲಿ 2 ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ನಿರ್ಮಿಸಲು ಸರ್ಕಾರ ಸಂಕಲ್ಪ ಮಾಡಿದೆ. ನನಗೆ ಉತ್ತಮ ಶಿಕ್ಷಣ ಕೊಡಿಸಲು ನಮ್ಮ ತಂದೆ-ತಾಯಿ ನನ್ನನ್ನು ಬೆಂಗಳೂರಿನಲ್ಲಿ ಶಾಲೆಗೆ ಸೇರಿಸಿದರು. ನಾನು ಕಲಿತ ಸ್ವಲ್ಪ ವಿದ್ಯೆಯಿಂದ ಇಲ್ಲಿಯವರೆಗೂ ಬೆಳೆದಿದ್ದೇನೆ. ಸ್ಥಳೀಯವಾಗಿಯೇ ಗುಣಮಟ್ಟದ ಶಿಕ್ಷಣ ಸಿಕ್ಕರೆ ಶಿಕ್ಷಣಕ್ಕಾಗಿ ವಲಸೆ ತಪ್ಪಿಸಬಹುದು. ಸಿಎಸ್ ಆರ್ ನಿಧಿಯಡಿ ಜಿಲ್ಲೆಯ ಕನಕಪುರ ತಾಲ್ಲೂಕಿನಲ್ಲಿ 9 ಚನ್ನಪಟ್ಟಣದಲ್ಲಿ 5 ಮಾಗಡಿ 3 ರಾಮನಗರ 4 ಹಾಗೂ ಹಾರೋಹಳ್ಳಿಯಲ್ಲಿ 4 ಸೇರಿದಂತೆ ಜಿಲ್ಲೆಯಲ್ಲಿ 24 ಶಾಲೆಗಳನ್ನು ನಿರ್ಮಿಸಲಾಗುತ್ತಿದೆ.**

**-ಡಿ.ಕೆ. ಶಿವಕುಮಾರ್, ಡಿಸಿಎಂ**

**ಕ್ಯಾನ್ಸರ್ ಮಕ್ಕಳಿಗೆ ಪ್ರತ್ಯೇಕ ಶಾಲೆ**

**ಕ್ಯಾನ್ಸರ್ ಪೀಡಿತ ಮಕ್ಕಳಿಗಾಗಿ ಇಲಾಖೆ ವತಿಯಿಂದ ಪ್ರತ್ಯೇಕವಾಗಿ ಶಾಲೆ ತೆರೆಯಲಾಗುವುದು. ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗಂಥಿ ಆಸ್ಪತ್ರೆ ಬಳಿ ಶಾಲೆ ತೆರೆಯಲು ತಯಾರಿ ನಡೆಸಲಾಗುತ್ತಿದೆ. ಇದು ದೇಶದಲ್ಲೇ ಮೊದಲ ಪ್ರಯೋಗವಾಗಿದೆ. ಹೊಂಗನೂರಿನ ಸುಸಜ್ಜಿತ ಶಾಲೆಗೆ ಅಗತ್ಯವಿರುವ 'ಡಿ' ಗ್ರೂಪ್ ಸಿಬ್ಬಂದಿಯನ್ನು ಹೊರಗುತ್ತಿಗೆ ಮೂಲಕ ಒದಗಿಸಲಾಗುವುದು. ನನಗೆ ಶಿಕ್ಷಣ ಇಲಾಖೆ ಸಿಗಲು ಡಿ.ಕೆ. ಶಿವಕುಮಾರ್ ಅವರು ಕಾರಣ. ನನ್ನ ತಂದೆಯನ್ನು ಅವರು ನನ್ನ ಗುರುಗಳು ಎಂದು ಹೇಳುತ್ತಿರುತ್ತಾರೆ. ಇಲಾಖೆಯಲ್ಲಿ ಬದಲಾವಣೆ ತರಲು ಶ್ರಮಿಸುತ್ತಿದ್ದೇನೆ.**

**ಮಧು ಬಂಗಾರಪ್ಪ,**
**ಶಾಲಾ ಶಿಕ್ಷಣ, ಸಾಕ್ಷರತೆ ಇಲಾಖೆ ಸಚಿವ**

**ಒಂದೇ ಸೂರಿನಡಿ ಶಿಕ್ಷಣ ಕಲ್ಪಿಸುವ ಪರಿಕಲ್ಪನೆಯ ಕರ್ನಾಟಕ ಪಬ್ಲಿಕ್ ಶಾಲೆಗಳು ಬೇರೆ ಬೇರೆ ಕಡೆ ಇರದೆ ಒಂದೇ ಕಾಂಪೌಂಡ್‌ನಲ್ಲಿರಬೇಕು. ವಿದ್ಯಾರ್ಥಿಗಳಿಗೆ ಪ್ರತ್ಯೇಕ ಸಮವಸ್ತ್ರ ಮಾಡಬೇಕು. ಪ್ರತಿ ತರಗತಿಗೆ ಒಬ್ಬರು ಶಿಕ್ಷಕರನ್ನು ನೇಮಿಸಬೇಕು.**

**-ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸಭಾಪತಿ**

**ಶಾಲೆಗಳಲ್ಲಿ ಸ್ವಚ್ಛತಾ ಕೆಲಸಕ್ಕೆ 'ಡಿ' ಗ್ರೂಪ್ ಸಿಬ್ಬಂದಿ ಇಲ್ಲದಿರುವುದರಿಂದ ವಿದ್ಯಾರ್ಥಿಗಳು ಅಥವಾ ಶಿಕ್ಷಕರೇ ಶೌಚಾಲಯ ಸೇರಿದಂತೆ ಇಡೀ ಶಾಲೆಯ ಸ್ವಚ್ಛತಾ ಕೆಲಸ ನಿರ್ವಹಿಸಬೇಕಿದೆ. ಅದನ್ನು ತಪ್ಪಿಸಲು ಸರ್ಕಾರ ಪ್ರತಿ ಶಾಲೆಗೆ ಒಂದು ಹುದ್ದೆ ಸೃಷ್ಟಿಸಬೇಕು.**

**-ಡಾ. ಸಿ.ಎನ್. ಮಂಜುನಾಥ್ ಸಂಸದ**

**ಶೇ. 100 ಫಲಿತಾಂಶ ಬಂದರೆ ಸಿಂಗಪುರ ಪ್ರವಾಸ:** ಸರ್ಕಾರಿ ಶಾಲೆ ಕಟ್ಟಿಸಿರುವುದರಿಂದ ನಿನಗೇನು ಲಾಭ ಎಂದು ಹಲವರು ಕೇಳುತ್ತಾರೆ. ಈ ಶಾಲೆಯಲ್ಲಿ ಓದಿದವರು ವೈದ್ಯರು ಎಂಜಿನಿಯರ್‌ಗಳು ಸೇರಿದಂತೆ ದೊಡ್ಡ ಅಧಿಕಾರಿಗಳಾಗಿ ಸಮಾಜದಲ್ಲಿ ಉತ್ತಮ ಸ್ಥಾನಮಾನ ಪಡೆಯಬೇಕು. ಪ್ರತಿ ವರ್ಷ ಎಸ್‌ಎಸ್‌ಎಲ್‌ಸಿಯಲ್ಲಿ ಶೇ 100ರಷ್ಟು ಫಲಿತಾಂಶ ಬಂದರೆ ಅದೇ ನನಗೆ ದೊಡ್ಡ ಲಾಭ. ಶೇ 100ರಷ್ಟು ಫಲಿತಾಂಶ ಬಂದರೆ ಶಿಕ್ಷಕರನ್ನು ಸಿಂಗಪುರ ಪ್ರವಾಸಕ್ಕೆ ಕಳಿಸುವೆ. ನಾನು ಕೇವಲ ಕಟ್ಟಡವನ್ನಷ್ಟೇ ಕಟ್ಟಿಸದೆ ಖಾಸಗಿ ಶಾಲೆಗಳಿಗೆ ಸರಿಸಮಾನವಾದ ಗುಣಮಟ್ಟದ ಶಿಕ್ಷಣಕ್ಕೂ ಅಗತ್ಯ ಸೌಲಭ್ಯ ಒದಗಿಸಿದ್ದೇನೆ ಎಂದು ಡಾ. ಎಚ್.ಎಂ. ವೆಂಕಟಪ್ಪ ತಮ್ಮ ಪ್ರಾಸ್ತಾವಿಕ ಮಾತುಗಳಲ್ಲಿ ಹೇಳಿದರು.

## ತ್ಯಾಜ್ಯ ಸಂಗ್ರಹಣೆಗೆ ಸ್ವಿಗ್ಗಿ, ಜುಮೊಟೊ ಮಾದರಿಯ ಹೊಸ ಯೋಜನೆ

• ಉದಯವಾಹಿನಿ, ತುಮಕೂರು

ರಾಜಧಾನಿಗೆ ಉಪನಗರದಂತೆ ಬೆಳೆಯುತ್ತಿರುವ ಸ್ಮಾರ್ಟ್‌ಸಿಟಿ ತುಮಕೂರಿನಲ್ಲೂ ಸಹ ತ್ಯಾಜ್ಯದ ಸಮಸ್ಯೆ ಬಿಗಡಾಯಿಸಿದ್ದು, ಇದಕ್ಕೆ ಮುಕ್ತಿ ನೀಡಲು ಮಹಾನಗರ ಪಾಲಿಕೆ ಸ್ವಿಗ್ಗಿ, ಜುಮೊಟೊ, ಬಿಂಕ್ಲಿಟ್ ಮಾದರಿಯಲ್ಲಿ ಮನೆಮನೆ ಕಸ ಸಂಗ್ರಹಿಸಲು ಪ್ರಾಯೋಗಿಕ ಯೋಜನೆಯನ್ನು ಕೈಗೆತ್ತಿಕೊಂಡಿದೆ.

**ಏನಿದು ಯೋಜನೆ?:** ಈಗಾಗಲೇ ನಗರವ್ಯಾಪಕವಾಗಿ ವಿಸ್ತರಣೆಯಾಗಿದ್ದು, ತ್ಯಾಜ್ಯ ವಿಲೇವಾರಿ ಸಮಸ್ಯೆಯಾಗಿ ಪರಿಣಮಿಸಿದೆ. ಅದರಲ್ಲೂ ಕೆಲಸಕ್ಕೆ ಹೋಗುವವರು ಮನೆ ಬಳಿ ಬರುವ ಕಸ ಸಂಗ್ರಹಿಸುವ ವಾಹನಗಳಿಗೆ ನೀಡಲು ಸಾಧ್ಯವಾಗುತ್ತಿಲ್ಲ. ಇದನ್ನು ಮನಗಂಡ ಪಾಲಿಕೆ ಮಹತ್ವದ ಯೋಜನೆಯನ್ನು ಕೈಗೆತ್ತಿಕೊಂಡಿದ್ದು, ಒಂದು ಬಟನ್ ಒತ್ತಿದರೆ ಸಾಕು, ನಿಮ ಮನೆ ಬಳಿಗೆ ಡೆಲಿವರಿ ಬಾಯ್ಸ್ ಬಂದು ನಿಮ ಮನೆಯ ಕಸವನ್ನು ಸಂಗ್ರಹಿಸುತ್ತಾರೆ. ಈ ಯೋಜನೆ ಮುಂದಿನ ವಾರ ಕಾರ್ಯರೂಪಕ್ಕೆ ಬರಲಿದೆ. ಈಗಾಗಲೇ ಈ ಯೋಜನೆಗೆ ಸಂಬಂಧಿಸಿದಂತೆ ಮೊಬೈಲ್ ಆ್ಯಪ್ ಕೂಡ ಸಿದ್ಧಪಡಿಸಲಾಗಿದೆ. ಆ್ಯಪ್ ಮೂಲಕ ಆನ್‌ಲೈನ್‌ನಲ್ಲಿ ತ್ಯಾಜ್ಯ ವಿಲೇವಾರಿಗೆ ಬುಕ್


ಉದಯವಾಹಿನಿ ಚಿತ್ರ

ಮಾಡಿಕೊಂಡರೆ ಪಾಲಿಕೆ ಸಿಬ್ಬಂದಿಗಳು ಮನೆ ಬಾಗಿಲಿಗೆ ಬಂದು ತ್ಯಾಜ್ಯ ಸಂಗ್ರಹಿಸುತ್ತಾರೆ. ಇದಕ್ಕಾಗಿ ಈಗಾಗಲೇ ದ್ವಿಚಕ್ರ ವಾಹನಗಳನ್ನು ಕೂಡ ಪಾಲಿಕೆ ಖರೀದಿಸಿದೆ.

ತುಮಕೂರಿನಿಂದ ಮುಂಜಾನೆಯೇ ಬಹಳಷ್ಟು ಮಂದಿ ಕೆಲಸ ಕಾರ್ಯಗಳಿಗಾಗಿ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆ ಹಾಗೂ ತಾಲ್ಲೂಕುಗಳಿಗೆ ತೆರಳುತ್ತಾರೆ. ಈ ಸಮಯದಲ್ಲಿ ಮನೆಕೆಲಸದ ಜೊತೆಗೆ ತ್ಯಾಜ್ಯ ವಿಲೇವಾರಿ ಕಷ್ಟಸಾಧ್ಯವಾಗಿದೆ. ಮನೆ ಬಳಿ ಬರುವ ಪಾಲಿಕೆಯ ಕಸ ಸಂಗ್ರಹಿಸುವ ಆಟೋಗಳಿಗೆ ತ್ಯಾಜ್ಯ ನೀಡಲು ಸಾಧ್ಯವಾಗುತ್ತಿಲ್ಲ, ಕೆಲವರು ಪ್ಲಾಸ್ಟಿಕ್ ಕವರ್‌ಗಳಲ್ಲಿ ತಂದು ರಸ್ತೆಬದಿ ಕಸವನ್ನು ಎಸೆದು ಹೋಗುತ್ತಿದ್ದಾರೆ. ಇದರಿಂದ ಪರಿಸರ ಮಾಲಿನ್ಯ ಹಾಗೂ ಅದರ ಜೊತೆಗೆ ನಗರದ ಸೌಂದರ್ಯವೂ ಹದಗೆಡುತ್ತಿದೆ.

**ಮುಂದಿನ ವಾರದಿಂದ ಮನೆಮನೆಗೆ ಬೈಕ್‌ಗಳಲ್ಲಿ ತೆರಳಿ ತ್ಯಾಜ್ಯ ಸಂಗ್ರಹಿಸುವ ಯೋಜನೆ ಕೈಗೊಳ್ಳಲಾಗಿದ್ದು, ಪ್ರಾಯೋಗಿಕವಾಗಿ ಒಂದು ಪ್ರದೇಶವನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ. ಈ ಯೋಜನೆ ಸಮರ್ಪಕವಾಗಿ ಯಶಸ್ವಿಯಾದರೆ ಮುಂಬರುವ ದಿನಗಳಲ್ಲಿ ನಗರದ ಎಲ್ಲಾ ವಾರ್ಡ್‌ಗಳಿಗೂ ವಿಸ್ತರಿಸಲಾಗುವುದು. ಸದ್ಯ ಕೆಲದಿನಗಳ ಕಾಲ ತ್ಯಾಜ್ಯವನ್ನು ಉಚಿತವಾಗಿ ಸಂಗ್ರಹಣೆ ಮಾಡಲಾಗುವುದು. ನಂತರ ಸೇವೆಗೆ ಶುಲ್ಕ ವಿಧಿಸಲು ಚಿಂತನೆ ನಡೆದಿದೆ.**

**-ಬಿ.ವಿ.ಅಶ್ವಿಜ, ಪಾಲಿಕೆ ಆಯುಕ್ತ**

ಈ ಹಿನ್ನೆಲೆಯಲ್ಲಿ ತುಮಕೂರು ಮಹಾನಗರ ಪಾಲಿಕೆ ಪರಿಹಾರ ಕಂಡುಕೊಳ್ಳುವ ಸಲುವಾಗಿ ಆ್ಯಪ್ ಆಧಾರಿತ ಕಸ ಸಂಗ್ರಹ ಸೇವೆಯನ್ನು ಪ್ರಾಯೋಗಿಕವಾಗಿ ಆರಂಭಿಸಲು ಮುಂದಾಗಿದ್ದು, ದೇಶದಲ್ಲೇ ಈ ಯೋಜನೆ ಮೊದಲನೆಯದಾಗಿದೆ.

## ದಲಿತರಿಗೆ ಭೂಮಿ ನೀಡದೆ ವಂಚನೆ

• ಉದಯವಾಹಿನಿ, ರಾಮನಗರ

ಲಕ್ಷಾಂತರ ಎಕರೆ ಸರ್ಕಾರಿ ಭೂಮಿ ಇದ್ದರೂ ದಲಿತರಿಗೆ ಭೂಮಿ ನೀಡದೆ ಸರ್ಕಾರ ವಂಚಿಸುತ್ತಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪುನೀತ್ ರಾಜ್ ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ನಗರದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಮ್ಮಿಕೊಂಡಿದ್ದ ಪ್ರತಿಭಟನಾ ಧರಣಿಯಲ್ಲಿ ಭಾಗವಹಿಸಿ ಮಾತನಾಡಿ, ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ದಲಿತರ ಭೂಮಿ-ವಸತಿ ಹಕ್ಕು ಮತ್ತು ಇತರ ಹಕ್ಕೋತ್ತಾಯಗಳಿಗೆ ಆಗ್ರಹಿಸಿ ರಾಜ್ಯದ ಎಲ್ಲಾ ತಾಲ್ಲೂಕು ಕಚೇರಿಗಳ ಮುಂದೆ ಏಕಕಾಲದಲ್ಲಿ ಪ್ರತಿಭಟನಾ ಧರಣಿಯಲ್ಲಿ ನಡೆಸಲಾಗುತ್ತಿದೆ ಎಂದರು.

ಅಕ್ರಮ ಸಕ್ರಮದಡಿ ದಲಿತರು ಅರ್ಜಿ ಸಲ್ಲಿಸಿದರೂ ಅಧಿಕಾರಿಗಳು ಅರ್ಜಿ ತಿರಸ್ಕರಿಸಿ ಭೂಮಿಸಿಗದಂತೆ ಮಾಡುತ್ತಿದ್ದಾರೆ. ಸಮುದಾಯವು ಶೇ11ರಷ್ಟು ಭೂಮಿಯನ್ನು ಹೊಂದಿದ್ದಾರೆ. ಉಳ್ಳವರು ಎಲ್ಲಾ ಭೂಮಿಯ ಒಡೆಯರಾಗಿರುವುದು ಅನ್ಯಾಯ. ಎಲ್ಲರಿಗೂ ಸಮಪಾಲು ಸಮಬಾಳು ನೀತಿಯಡಿ ಸಂವಿಧಾನದಡಿ ಎಲ್ಲರಿಗೂ ಸಮಾನತೆ ಸಿಗಬೇಕೆಂಬ ಹೋರಾಟ ನಮ್ಮದಾಗಿದೆ ಎಂದರು. ಪರಭಾರೆ ಮಾಡಿಕೊಂಡಿರುವ


ಉದಯವಾಹಿನಿ ಚಿತ್ರ

**ಸರ್ಕಾರ ಎಚ್ಚರಿಸಲು ಅನಿರ್ದಿಷ್ಟಾವಧಿ ಧರಣಿ ಹಮ್ಮಿಕೊಳ್ಳಲಾಗಿದೆ. ಫಲವತ್ತಾದ ಭೂಮಿ ಶ್ರೀಮಂತರು ಹಾಗೂ ರಾಜಕಾರಣಿಗಳ ಪಾಲಾಗುತ್ತಿದೆ. ಸ್ವಾತಂತ್ರ್ಯ ಬಂದು ಇಷ್ಟು ವರ್ಷವಾದರೂ ಸಂವಿಧಾನದ ಆಶಯದಂತೆ ಜನರಿಗೆ ರಾಜಕೀಯ, ಆರ್ಥಿಕ, ಸಾಮಾಜಿಕ ನ್ಯಾಯ ಸಿಗುತ್ತಿಲ್ಲ. ದಲಿತ ಸಮುದಾಯಗಳಿಗೆ ಭೂಮಿ ಮಂಜೂರು ಮಾಡಬೇಕು.**

**- ಸೋಮಶೇಖರ್, ದಲಿತ ಮುಖಂಡ**


ದಲಿತರ ಜಮೀನು ವಾಪಸ್ ನೀಡಬೇಕು. ದೇವನಹಳ್ಳಿಯಲ್ಲಿ ರೈತರ ಭೂಮಿ ವಾಪಸ್ ನೀಡಿದೆ. ಅದರಂತೆ ಬಿಡದಿ ಸೇರಿದಂತೆ ರಾಜ್ಯದಲ್ಲಿ ದಲಿತರ ಜಮೀನು ಸ್ವಾಧೀನ ಪ್ರಕ್ರಿಯೆ ಕೈಬಿಡಬೇಕು ಎಂದು ಆಗ್ರಹಿಸಿದರು.

## ಕಾಫಿ ಮಂಡಳಿ ಕಚೇರಿಗೆ ಸೌಲಭ್ಯ ಒದಗಿಸಿ: ಸಂಸದ ಯದುವಿರ್ ಒಡೆಯರ್‌ಗೆ ಮನವಿ

• ಉದಯವಾಹಿನಿ, ಸೋಮವಾರಪೇಟೆ

ಜಿಲ್ಲೆಯ ಕಾಫಿ ಪ್ರಮುಖ ಬೆಳೆಯಾಗಿದ್ದು, ಸೋಮವಾರಪೇಟೆ ತಾಲ್ಲೂಕಿನ ಕಾಫಿ ಮಂಡಳಿ ಕಚೇರಿಗೆ ಸ್ವಂತ ಕಟ್ಟಡವಿಲ್ಲದಿರುವ ಹಿನ್ನೆಲೆ ಸ್ವಂತ ಕಚೇರಿ ಹಾಗೂ ಮೂಲ ಸೌಲಭ್ಯ ಕಲ್ಪಿಸಿಕೊಡಬೇಕೆಂದು ತಾಲ್ಲೂಕಿನ ಯಂಗ್ ಇಂಡಿಯನ್ ಫಾರ್ಮಸ್ ಅಸೋಶಿಯೇಷನ್ ವತಿಯಿಂದ ಸಂಸದ ಯದುವಿರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಸಂಸದರ ಕಚೇರಿಯಲ್ಲಿ ಮನವಿ ಸಲ್ಲಿಸಲಾಯಿತು.

ನಂತರ ಮಾತನಾಡಿದ ಅಧ್ಯಕ್ಷ ಶ್ರೀನಿಧಿ ಲಿಂಗಪ್ಪ, ಕಾಫಿ


ಉದಯವಾಹಿನಿ ಚಿತ್ರ

ಉತ್ಪತ್ತಿಯು ದೇಶೀಯ, ಜಾಗತಿಕ ಮಾರುಕಟ್ಟೆಯಲ್ಲಿ ಪ್ರಮುಖ ಸ್ಥಾನ ಪಡೆದಿದೆ. ಕೊಡಗು ಜಿಲ್ಲೆಯ ಶೇ90ಕ್ಕೂ ಹೆಚ್ಚಿನ ರೈತರು ಕಾಫಿ ಬೆಳೆಗಾರರಾಗಿದ್ದಾರೆ. ಆದರೆ ಸೋಮವಾರಪೇಟೆಯಲ್ಲಿ ಹಲವಾರು ದಶಕಗಳಿಂದ ಕಾರ್ಯನಿರ್ವಹಿಸುತ್ತಿರುವ ಕಾಫಿ ಮಂಡಳಿ ಕಚೇರಿಗೆ ಇನ್ನೂ ಸ್ವಂತ ಕಟ್ಟಡವಿಲ್ಲದೆ, ಖಾಸಗಿ ಕಟ್ಟಡದಲ್ಲಿ ಬಾಡಿಗೆ ಪಾವತಿಸಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು. ಕಾಫಿ ಕೃಷಿಕರ ಅನುಕೂಲ ಹಾಗೂ ಹಿತದೃಷ್ಟಿಯಿಂದ ಕಾಫಿ ಮಂಡಳಿಯನ್ನು ಉನ್ನತಿಕರಿಸಬೇಕಾದ ಅಗತ್ಯವಿದೆ. ಕಾಫಿ ಮಂಡಳಿ ಕಚೇರಿಗೆ ಸ್ವಂತ ಕಟ್ಟಡದೊಂದಿಗೆ ಅಧಿಕಾರಿಗಳ ವಸತಿ ಗೃಹ, ಪ್ರಯೋಗಾಲಯ, ಸಭಾಂಗಣ, ಅತಿಥಿ ಗೃಹ ಸೇರಿದಂತೆ ಮೂಲ ಸೌಲಭ್ಯಗಳನ್ನು ಒದಗಿಸಲು ಕಾಫಿ ಮಂಡಳಿಯೊಂದಿಗೆ ಚರ್ಚಿಸಿ ಇದರ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಂಸದರಿಗೆ ಮನವಿ ಮಾಡಿದರು. ಮನವಿ ಸ್ವೀಕರಿಸಿ ಮಾತನಾಡಿದ ಸಂಸದ, ಈ ಕುರಿತಾಗಿ ಶೀಘ್ರದಲ್ಲೇ ಸಂಬಂಧಿಸಿದ ಕಾಫಿ ಮಂಡಳಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದರು.

## ಬೀದಿ ದನ, ನಾಯಿ ನಿಯಂತ್ರಣಕ್ಕೆ ಒತ್ತಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೊಳ್ಳೇಗಾಲ

ನಗರದಲ್ಲಿ ಬೀದಿ ದನಗಳು, ನಾಯಿಗಳ ಹಾವಳಿಯನ್ನು ನಿಯಂತ್ರಿಸಬೇಕು ಎಂದು ಜಯ ಕರ್ನಾಟಕ ಜಿಲ್ಲಾ ಸಮಿತಿ ಅಧ್ಯಕ್ಷೆ ದೇವಿಕಾ ಅವರು ನಗರ ಸಭೆ ಉಪಾಧ್ಯಕ್ಷ ಎ.ಪಿ ಶಂಕರ್, ಆರೋಗ್ಯ ನಿರೀಕ್ಷಕ ಚೇತನ್ ಅವರಿಗೆ ಮನವಿ ಪತ್ರವನ್ನು ಸಲ್ಲಿಸಿದರು. ನಗರಸಭೆ ಕಚೇರಿಗೆ ಆಗಮಿಸಿದ 20ಕ್ಕೂ ಹೆಚ್ಚು ಪದಾಧಿಕಾರಿಗಳು ಸಂಘಟನೆ ಪರವಾಗಿ ಘೋಷಣೆ ಕೂಗಿ, ಉಪಾಧ್ಯಕ್ಷರ ಕೊಠಡಿಗೆ ಬಂದು ಮನವಿ ಸಲ್ಲಿಸಿದರು.

ದೇವಿಕಾ ಮಾತನಾಡಿ, ನಗರದಲ್ಲಿ ಬೀದಿ ನಾಯಿಗಳ ಹಾವಳಿ ಮಿತಿಮೀರಿದೆ. ಬಡಾವಣೆಗಳಲ್ಲಿ ಬೀದಿ ನಾಯಿಗಳ ಗುಂಪು ಅಲೆದಾಟ ಹೆಚ್ಚಿದೆ. ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿದೆ. ವಾರದ ಹಿಂದೆ ಬೀದಿ ನಾಯಿಗಳು ಬೈಕ್ ಸವಾರರನ್ನು ಅಟ್ಟಿಸಿಕೊಂಡು ಹೋಗಿದ್ದು, ಸವಾರರರು ಬಿದ್ದು ತೀವ್ರಗಾಯಗೊಂಡಿದ್ದರು. ಇವುಗಳು ಸಾರ್ವಜನಿಕರ ಮೇಲೆ ದಾಳಿ ಮಾಡುತ್ತಿವೆ. ಮಕ್ಕಳು ರಸ್ತೆಯಲ್ಲಿ ಓಡಾಡಲು ಭಯಪಡುತ್ತಿವೆ ಎಂದರು. ಬೀದಿ ದನಗಳ ಹಾವಳಿಯಿಂದ ವಾಹನ ದಟ್ಟಣೆ, ಸಂಚಾರಕ್ಕೆ ಅಡಚಣೆ ಉಂಟಾಗುತ್ತಿವೆ. ಅನೇಕ ಅಪಘಾತಗಳು ಸಹ ಸಂಭವಿಸಿವೆ.

ತರಕಾರಿ, ಸೊಪ್ಪುಗಳನ್ನು ಬಿಡಾಡಿ ದನಗಳು ಜನರಿಂದ ಕಿತ್ತು ತಿನ್ನುತ್ತಿವೆ. ವ್ಯಾಪಾರಿಗಳಿಗೂ ಜನರಿಗೆ ತೊಂದರೆ ನೀಡುತ್ತಿವೆ. ಇವುಗಳನ್ನು ಹಿಡಿದು ಪಿಂಜರ್ ಪೋಲ್‌ಗೆ ರವಾನಿಸಬೇಕು. ಅವುಗಳ ಮಾಲೀಕರಿಗೆ ದಂಡ ವಿಧಿಸಬೇಕು ಎಂದು ಮನವಿಪತ್ರದಲ್ಲಿ ಒತ್ತಾಯಿಸಲಾಗಿದೆ. ಒಂದು ವಾರದ ಒಳಗೆ ನಮ್ಮ ಕ್ರಮ ಕೈಗೊಳ್ಳದಿದ್ದರೆ ತೀವ್ರಾ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

## ವಿವಿಧ ಕಾಮಗಾರಿಗೆ ಭೂಮಿಪೂಜೆ

• ಉದಯವಾಹಿನಿ, ಗೌರಿಬಿದನೂರು

ತಾಲ್ಲೂಕಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಂಸದ ಡಾ.ಕೆ ಸುಧಾಕರ್ ಭೂಮಿಪೂಜೆ ನೆರವೇರಿಸಿದರು. ತಾಲ್ಲೂಕಿನಲ್ಲಿ 12 ಕಾಮಗಾರಿಗಳನ್ನು ಕೈಗೊಳ್ಳಲು ಕೇಂದ್ರ ಸರ್ಕಾರದ ಅನುದಾನ ನೀಡಿದೆ. ನಗರಸಭೆ ಆವರಣದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ, ಐಮಾಸ್ಟ್ ದೀಪಗಳನ್ನು ಅಳವಡಿಸುವಿಕೆ ಸೇರಿದಂತೆ ಒಟ್ಟು 12 ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದರು.

ಗೌರಿಬಿದನೂರು ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಹಾಗೂ ಹೈ ಮಾಸ್ಟ್ ದೀಪಗಳನ್ನು ಅಳವಡಿಸುವ ಒಟ್ಟು 12 ಕಾಮಗಾರಿ ಕೈಗೊಳ್ಳಲು 52 ಲಕ್ಷ ಅನುದಾನ ನೀಡಲಾಗಿದೆ. ಕೇಂದ್ರ ರಸ್ತೆ ನಿಧಿ ಅಡಿಯಲ್ಲಿ ರಾಷ್ಟ್ರೀಯ ಹೆದ್ದಾರಿ 94ರಿಂದ ನಕ್ಕಲಹಳ್ಳಿ ಕಾಟನಕಲ್ಲು ಜಿಲಾಕುಂಟೆ ಮಾರ್ಗವಾಗಿ ನಗರಗೆರೆ ಸೇರುವ 8 ಕಿ.ಮೀ ರಸ್ತೆ ಅಭಿವೃದ್ಧಿಗೆ 6ಕೋಟಿ ಅನುದಾನ ನೀಡಲಾಗಿದೆ ಎಂದರು. ಜಲಜೀವನ್ ಮಿಷನ್ ಯೋಜನೆಯಡಿ ತಾಲ್ಲೂಕಿನಾದ್ಯಂತ 296 ಗ್ರಾಮಗಳಲ್ಲಿ ಮನೆ ಮನೆಗೆ ಕುಡಿಯುವ ನೀರು ಸರಬರಾಜು ಕಾಮಗಾರಿ ಪ್ರಗತಿಯಲ್ಲಿದೆ. ಇದಕ್ಕಾಗಿ ಕೇಂದ್ರ ಸರ್ಕಾರದಿಂದ 102.50 ಕೋಟಿ ಅನುದಾನ ನೀಡಲಾಗಿದೆ. 2024-25ನೇ ಸಾಲಿನ ಅಮೃತ್ 2.0 ಯೋಜನೆಯಡಿ ಗೌರಿಬಿದನೂರು ನಗರ ನೀರು ಸರಬರಾಜು ಕಾಮಗಾರಿಗೆ 66.60 ಕೋಟಿ ಅನುದಾನ ಬಿಡುಗಡೆಯಾಗಿದೆ ಎಂದರು.


ಉದಯವಾಹಿನಿ ಚಿತ್ರ

ರಾಷ್ಟ್ರೀಯ ಹೆದ್ದಾರಿ 69 ಮಧುಗಿರಿ- ಮುಳಬಾಗಿಲಿನ ಗೌರಿಬಿದನೂರು ಚಿಕ್ಕಬಳ್ಳಾಪುರ ರಸ್ತೆ ಕಾಮಗಾರಿ ಪ್ರಗತಿಯಲ್ಲಿದೆ. ಇದಕ್ಕಾಗಿ ಕೇಂದ್ರ ಸರ್ಕಾರ 398.48 ಕೋಟಿ ಅನುದಾನ ಒದಗಿಸಿದೆ. ನಗರದ ಬೈಪಾಸ್ ರಸ್ತೆ ಅಭಿವೃದ್ಧಿಗೆ 40.68 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತಾಲ್ಲೂಕಿನಲ್ಲಿ 571 ಜನ ರೈತರಿಗೆ ರಾಗಿ ಬೆಳೆಗಾಗಿ 3 ಕೋಟಿ ಅನುದಾನ ಒದಗಿಸಿ 8497.50 ಕ್ವಿಂಟಲ್ ರಾಗಿ ಖರೀದಿಸಲಾಗಿದೆ ಎಂದರು. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಆದಿ ಆದರ್ಶ ಗ್ರಾಮ ಯೋಜನೆಯಡಿ ತಾಲ್ಲೂಕಿನ ಮಾಚೇನಹಳ್ಳಿ ಲಕ್ಕಸಂದ್ರ, ದೊಡ್ಡ ಮಲ್ಲೆಕೆರೆ ಗ್ರಾಮಗಳನ್ನು ಆಯ್ಕೆ ಮಾಡಿದ್ದು 2024-25ನೇ ಸಾಲಿನಲ್ಲಿ ತಲಾ ಒಟ್ಟು 61.14 ಲಕ್ಷ ಅನುದಾನ ನೀಡಲಾಗಿದೆ ಎಂದು ತಿಳಿಸಿದರು.

**ಆಸ್ಪತ್ರೆಗೆ ಸೌಲಭ್ಯ ಕಲ್ಪಿಸಿಲ್ಲ**

**ನಗರದಲ್ಲಿ ನಿರ್ಮಾಣ ಮಾಡಿರುವ ಸಾರ್ವಜನಿಕ ಆಸ್ಪತ್ರೆಗೆ ಕಾಂಗ್ರೆಸ್ ಸರ್ಕಾರ ಈವರೆಗೆ ಉಪಕರಣ ಮಾನವ ಸಂಪನ್ಮೂಲ ಒದಗಿಸಿಲ್ಲ ಎಂದು ಸಂಸದ ಕೆ.ಸುಧಾಕರ್ ಕಿಡಿ ಕಾರಿದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ 200 ಹಾಸಿಗೆಗಳ ಸಾರ್ವಜನಿಕ ಆಸ್ಪತ್ರೆ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಯಿತು. ಮಂಚೇನಹಳ್ಳಿಯಲ್ಲಿ ಸಾರ್ವಜನಿಕ ಆಸ್ಪತ್ರೆ ಮತ್ತು ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಒಂದೇ ಸಂಕೀರ್ಣದಲ್ಲಿ ನಿರ್ಮಿಸಲಾಗಿದೆ. ಕಟ್ಟಡ ಕಾಮಗಾರಿ ಬಹುತೇಕ ಮುಗಿಯುವ ಹಂತದಲ್ಲಿವೆ. ಆದರೆ ಕಾಂಗ್ರೆಸ್ ಸರ್ಕಾರ ಈವರೆಗೆ ಆಸ್ಪತ್ರೆಗೆ ಬೇಕಾದ ಉಪಕರಣ ಮತ್ತು ಮಾನವ ಸಂಪನ್ಮೂಲದ ಟೆಂಡರ್ ಪ್ರಕ್ರಿಯೆ ಮಾಡಿಲ್ಲ ಎಂದರು. ಟೆಂಡರ್ ಪ್ರಕ್ರಿಯೆ ಮುಗಿಸಿದರೆ ಆಸ್ಪತ್ರೆ ಕಾಮಗಾರಿ ಮುಗಿಯುವ ವೇಳೆಗೆ ಸಾರ್ವಜನಿಕರಿಗೆ ಮುಕ್ತವಾಗುತ್ತದೆ. ಈಗ ಆಸ್ಪತ್ರೆ ಕಟ್ಟಡದಲ್ಲಿ ಇಲಿ ಹೆಗ್ಗಣ ಓಡಾಡುವಂತಾಗಿವೆ. ಕಾಂಗ್ರೆಸ್ ಆಡಳಿತವು ಮಂದಗತಿಯಲ್ಲಿ ಸಾಗುತ್ತಿದೆ. ಕಾಂಗ್ರೆಸ್ ಸರ್ಕಾರ ರೂಪಿಸುವ ಯೋಜನೆ ಕೇವಲ ರಾಜಕೀಯ ಉದ್ದೇಶದಿಂದ ಕೂಡಿವೆ ಎಂದರು.**

# ಒಂದು ಲಕ್ಷಕ್ಕೂ ಅಧಿಕ ಮನೆಗಳಿಗೆ ಆರೋಗ್ಯ ಇಲಾಖೆ ತಂಡ ಭೇಟಿ

## ಗೃಹ ಆರೋಗ್ಯ ಕೊಡಗಿನಲ್ಲಿ ಆರಂಭ: ಮನೆ ಮನೆಗೆ ವೈದ್ಯರ ಭೇಟಿ

• ಉದಯವಾಹಿನಿ, ಮಡಿಕೇರಿ

ಸರ್ಕಾರದ ಮಹತ್ವಕಾಂಕ್ಷೆಯ 'ಗೃಹ ಆರೋಗ್ಯ' ಕಾರ್ಯಕ್ರಮಕ್ಕೆ ಶಾಸಕ ಡಾ.ಮಂತರ್‌ಗೌಡ ಇಲ್ಲಿ ಚಾಲನೆ ನೀಡಿದರು. ಈ ಮೂಲಕ 157 ಜನರ ತಂಡವು 1 ಲಕ್ಷಕ್ಕೂ ಅಧಿಕ ಮನೆಗಳಿಗೆ ತೆರಳಿ ಆರೋಗ್ಯ ತಪಾಸಣೆ ಮಾಡುವ ಅಭಿಯಾನವೂ ಆರಂಭಗೊಂಡಿತು. ಇನ್ನು ಮುಂದೆ ಮನೆಮನೆಗೆ ಭೇಟಿ ನೀಡುವ ಆರೋಗ್ಯ ಇಲಾಖೆಯ ತಂಡವು ಅಸಾಂಕ್ರಾಮಿಕ ರೋಗಗಳ ಆರೋಗ್ಯ ತಪಾಸಣೆ, ನಿರ್ವಹಣೆಯನ್ನು ಆರಂಭಿಕ ಹಂತದಲ್ಲಿಯೇ ಪತ್ತೆ ಹಚ್ಚಿ ಚಿಕಿತ್ಸೆ ನೀಡಲಿದೆ. ಇದರಿಂದ ರೋಗವು ಗಂಭೀರ ಅವಸ್ಥೆಗೆ ತಲುಪುವುದು ತಪ್ಪಲಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಸರ್ವೇಕ್ಷಣಾ ಘಟಕದ ವತಿಯಿಂದ ಇಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗೃಹ ಆರೋಗ್ಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ಡಾ.ಮಂತರ್‌ಗೌಡ, ಗೃಹ ಆರೋಗ್ಯವು ನಮ್ಮ ಮನೆಯಿಂದಲೇ ಆರಂಭವಾದಾಗ ಮಾತ್ರ ಇದಕ್ಕೆ ಅರ್ಥ ಬರಲಿದೆ. ಪ್ರತಿಯೊಬ್ಬರೂ ಪ್ರತೀದಿನ ವ್ಯಾಯಾಮ, ನಡಿಗೆ ಮಾಡಬೇಕು. ಇದರಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ರಕ್ತದೊತ್ತಡ, ಮಧುಮೇಹವನ್ನು ನಿಯಂತ್ರಿಸಬಹುದು ಎಂದು ಹೇಳಿದರು. 30 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರಿಗೆ


ಉದಯವಾಹಿನಿ ಚಿತ್ರ

**ಆರೋಗ್ಯ ಕಾಪಾಡುವುದು ಮುಖ್ಯ**

ಅಸಾಂಕ್ರಾಮಿಕ ರೋಗಗಳಾದ ಅಧಿಕ ರಕ್ತದೊತ್ತಡ, ಮಧುಮೇಹ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಗರ್ಭಕಂಠದ ಕ್ಯಾನ್ಸರ್, ರೆಟಿನೋಪತಿ, ಮಾನಸಿಕ ಆರೋಗ್ಯ, ಅಸ್ವಸ್ಥತೆ, ನರ ವೈಜ್ಞಾನಿಕ ಅಸ್ವಸ್ಥತೆ, ನಿದ್ರೆಯಲ್ಲಿ ಉಸಿರುಗಟ್ಟುವಿಕೆ, ದೀರ್ಘಕಾಲದ ಮೂತ್ರಪಿಂಡದ ಕಾಯಿಲೆ, ಶ್ವಾಸಕೋಶ ಕಾಯಿಲೆ, ಆಲ್ಕೋಹಾಲ್ ರಹಿತ ಕೊಬ್ಬಿನ ಪಿತ್ತಜನಕಾಂಗ ಕಾಯಿಲೆ, ರಕ್ತ ಹೀನತೆ ಆರೋಗ್ಯ ತಪಾಸಣೆಯನ್ನು ಆಯುಷ್ಮಾನ್ ಆರೋಗ್ಯ ಮಂದಿರದಲ್ಲಿ ಉಚಿತವಾಗಿ ತಪಾಸಣೆ ನಡೆಸಲಾಗುತ್ತದೆ ಎಂದು ಮಾಹಿತಿ ನೀಡಿದರು. ಆಶಾ ಕಾರ್ಯಕರ್ತರಲ್ಲಿ ಹೆಚ್ಚಿನ ಜವಾಬ್ದಾರಿಯಿದ್ದು, ತಮ್ಮ ಆರೋಗ್ಯದ ಜೊತೆಗೆ ಇತರರ ಆರೋಗ್ಯ ಕಾಪಾಡುವುದು ಅತೀ ಮುಖ್ಯವಾಗಿದೆ ಎಂದು ಕಿವಿಮಾತು ಹೇಳಿದರು. ಆಲೂರು ಸಿದ್ದಾಪುರ ಹಾಗೂ ಶನಿವಾರಸಂತೆ ವೈದ್ಯಾಧಿಕಾರಿಗಳಾದ ಡಾ.ಸುಪರ್ಣ ಮತ್ತು

**ಅಸಾಂಕ್ರಾಮಿಕ ರೋಗಗಳನ್ನು ಆರಂಭದಲ್ಲೇ ಪತ್ತೆ ಹಚ್ಚುವುದಕ್ಕೆ ಹಾಗೂ ಅದನ್ನು ನಿರ್ವಹಣೆ ಮಾಡುವುದಕ್ಕಾಗಿ ಗೃಹ ಆರೋಗ್ಯ ಕಾರ್ಯಕ್ರಮ ಆರಂಭಿಸಲಾಗಿದೆ.**

**- ಡಾ.ಸತೀಶ್ ಕುಮಾರ್,**
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ**

ಡಾ.ಅಶೋಕ್ ಅವರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿನ ಸಮಸ್ಯೆ ಬಗ್ಗೆ ಮಾತನಾಡಿದರು. ಇದೇ ವೇಳೆ ಮಂತರ್‌ಗೌಡ ಸರ್ಕಾರ ಹೊರ ತಂದಿರುವ ಗೃಹ ಆರೋಗ್ಯ ಪುಸ್ತಕನ್ನು ಬಿಡುಗಡೆ ಮಾಡಿದರು.

**ವೈದ್ಯಕೀಯ ತರಬೇತಿ ಕೇಂದ್ರ ಆರಂಭಕ್ಕೆ ಚಿಂತನೆ:** ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ವೈದ್ಯಕೀಯ ತರಬೇತಿ ಕೇಂದ್ರ ಆರಂಭಿಸಲು ಚಿಂತಿಸಲಾಗಿದೆ ಎಂದು ಶಾಸಕ ಡಾ.ಮಂತರ್‌ಗೌಡ ತಿಳಿಸಿದರು. ಸರ್ಕಾರ ಕುಶಾಲನಗರ ಸಮುದಾಯ ಆರೋಗ್ಯ ಕೇಂದ್ರವನ್ನು ತಾಲ್ಲೂಕು ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಿ 41 ಕೋಟಿ ಬಿಡುಗಡೆ ಮಾಡಿದೆ. ವಿರಾಜಪೇಟೆ ತಾಲ್ಲೂಕು ಆಸ್ಪತ್ರೆಯನ್ನು 400 ಹಾಸಿಗೆ ಮೇಲ್ದರ್ಜೆಗೇರಿಸಲಾಗುತ್ತಿದೆ. ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಸಿಟಿ ಸ್ಕ್ಯಾನ್ ಜೊತೆಗೆ ಎಂಆರ್‌ಐ ಸ್ಕ್ಯಾನ್ ಸಹ ಆರಂಭವಾಗಿದೆ. ಎಚ್‌ಐವಿ ಎಚ್‌ಬಿಪಿ ಮತ್ತಿತರ ಆರೋಗ್ಯ ಸೇವೆಗಳು ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿಯೇ ದೊರೆಯಲಿದೆ ಎಂದರು. ಜನರು ಹಿಂದೆ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರು ಮತ್ತು ದಕ್ಷಿಣ ಕನ್ನಡ ಜಿಲ್ಲೆಗೆ ತೆರಳುತ್ತಿದ್ದರು. ಈಗ ಸರ್ಕಾರ ಆದಷ್ಟು ಹೆಚ್ಚಿನ ಆರೋಗ್ಯ ಸೇವೆ ಕಲ್ಪಿಸಿದ್ದು ಮಡಿಕೇರಿಯಲ್ಲಿಯೇ ಚಿಕಿತ್ಸೆ ಪಡೆಯಬಹುದು ಎಂದು ಹೇಳಿದರು.

**30 ವರ್ಷ ದಾಟಿದವರು 2.52 ಲಕ್ಷ**

**ಜಿಲ್ಲಾ ಸರ್ವೇಕ್ಷಣಾಧಿಕಾರಿ, ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಶ್ರೀನಿವಾಸ್ ಮಾತನಾಡಿ ಜಿಲ್ಲೆಯಲ್ಲಿ 30 ವರ್ಷ ತುಂಬಿದ 2.52 ಲಕ್ಷ ಜನರಿದ್ದು ಅವರಲ್ಲಿ 53 ಸಾವಿರ ಜನರಿಗೆ ಅಧಿಕ ರಕ್ತದೊತ್ತಡ ಇದೆ. 33 ಸಾವಿರ ಜನರು ಮಧುಮೇಹವಿದೆ. ಗೃಹ ಆರೋಗ್ಯದಡಿ ಕೊಡಗು ಜಿಲ್ಲೆಯಲ್ಲಿ ಮನೆ ಮನೆಗೆ ಭೇಟಿ ನೀಡಲು 157 ತಂಡವನ್ನು ರಚಿಸಲಾಗಿದೆ. ಅದರಲ್ಲಿ ಈ ತಂಡವು 1 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ಭೇಟಿ ಆರೋಗ್ಯ ತಪಾಸಣೆ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದರು.**

## ಮಿನಿ ನ್ಯೂಸ್

### ಮಾದಪ್ಪನ ಹುಂಡಿಯಲ್ಲಿ 30 ದಿನದಲ್ಲಿ 2.36 ಕೋಟಿ ರೂ. ಕಾಣಿಕೆ ಸಂಗ್ರಹ

• ಉದಯವಾಹಿನಿ, ಹನೂರು

ತಾಲ್ಲೂಕಿನ ಪ್ರಸಿದ್ಧ ಪುಣ್ಯ ಕ್ಷೇತ್ರ ಮಲೆ ಮಹದೇಶ್ವರಬೆಟ್ಟ ಮಾದಪ್ಪನ ದೇಗುಲದಲ್ಲಿ ಹುಂಡಿ ಹಣ ಎಣಿಕೆ ನಡೆದಿದ್ದು, 30 ದಿನದಲ್ಲಿ 2.36 ಕೋಟಿ ರೂ. ಸಂಗ್ರಹವಾಗಿದೆ. ಸಾಲೂರು ಬೃಹನ್ಮಠಾಧ್ಯಕ್ಷ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಅವರ ಉಪಸ್ಥಿತಿಯಲ್ಲಿ ಮಹದೇಶ್ವರ ಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರಘು ಅವರ ನೇತೃತ್ವದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆದಿದ್ದು, 2,36,73,185.00/- ಕೋಟಿ ರೂ ನಗದು ರೂಪದಲ್ಲಿ (ಹುಂಡಿ ಮತ್ತು ಇ-ಹುಂಡಿ ಸೇರಿ) ಹಾಗೂ ಚಿನ್ನ 70ಗ್ರಾಂ, ಬೆಳ್ಳಿ 01 ಕೆ.ಜಿ 712 ಗ್ರಾಂ ಸಂಗ್ರಹವಾಗಿದೆ. ಪ್ರತಿಬಾರಿಯಂತೆ ಈ ಬಾರಿಯೂ 20 ವಿದೇಶಿ ನೋಟುಗಳು ಮತ್ತು 2 ಸಾವಿರ ಮುಖ ಬೆಲೆ 14 ನೋಟುಗಳು ಹುಂಡಿಯಲ್ಲಿ ದೊರೆತಿವೆ. ಭಕ್ತರಿಂದ ಹರಕೆ ರೂಪದಲ್ಲಿ ಇಷ್ಟೊಂದು ದೊಡ್ಡ ಮೊತ್ತದ ಕಾಣಿಕೆ ಸಂಧಿರುವುದು ಅಮಾವಾಸ್ಯೆ-ಹುಣ್ಣಿಮೆ, ರಜೆ ದಿನಗಳು, ಸರ್ಕಾರ ಶಕ್ತಿ ಯೋಜನೆ ಮಹಿಳೆಯರ ಉಚಿತ ಪ್ರಯಾಣ, ವಿದೇಶಿ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಕ್ಷೇತ್ರಕ್ಕೆ ಭೇಟಿ ನೀಡಿದ್ದರಿಂದ ಇಷ್ಟು ದೊಡ್ಡ ಮೊತ್ತದ ಸಂಗ್ರಹವಾಗಿದೆ. ಮಹದೇಶ್ವರ ಬೆಟ್ಟ ಬಸ್ ನಿಲ್ದಾಣದ ವಾಣಿಜ್ಯ ಕಟ್ಟಡದಲ್ಲಿ ಸಿಸಿ ಕ್ಯಾಮೆರಾ, ಪೊಲೀಸರ ಕಣ್ಗಾವಲಿನಲ್ಲಿ ಪ್ರಾಧಿಕಾರದ ಸಿಬ್ಬಂದಿಗಳು ಹಾಗೂ ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡ ಸ್ಥಳೀಯ ಶಾಖೆ ಸಿಬ್ಬಂದಿಗಳು ಹುಂಡಿ ಎಣಿಕೆ ಕಾರ್ಯದಲ್ಲಿ ತೊಡಗಿದ್ದರು.

### ತಲೆಯ ಮೇಲೆ ಸ್ಕೂಲ್ ಬಸ್ ಹರಿದು 7 ವರ್ಷದ ಮಗು ಸಾವು

• ಉದಯವಾಹಿನಿ, ಮಾಗಡಿ

ಖಾಸಗಿ ಶಾಲಾ ಬಸ್‌ನಿಂದ ಕೆಳಗೆ ಬಿದ್ದ ವಿದ್ಯಾರ್ಥಿ ತಲೆಯ ಮೇಲೆ ಬಸ್ ಹರಿದು ಸ್ಥಳದಲ್ಲಿಯೇ ಮೃತಪಟ್ಟಿರುವ ಘಟನೆ ಮಾಗಡಿ-ಕುಣಿಗಲ್ ರಸ್ತೆಯ ಹುಚ್ಚಹನುಮೇಗೌಡರ ಪಾಳ್ಯದ ಬಳಿ ನಡೆದಿದೆ. ಪಟ್ಟಣದ ಎನ್‌ಇಎಸ್ ಬಡಾವಣೆಯಲ್ಲಿ ಎಸ್‌ಬಿಎಸ್ ಪಬ್ಲಿಕ್ ಶಾಲೆಯ 3 ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ ರಜತ್ (7) ಮೃತ ವಿದ್ಯಾರ್ಥಿ. ಶಾಲೆಗೆ ದಾಖಲಾಗಿ ಒಂದುವರೆ ತಿಂಗಳಾಗಿತ್ತು. ಹನೂರು ಮೂಲದ ಗಾರೆ ಕೂಲಿಕಾರ್ಮಿಕರಾದ ಲೋಕೇಶ್ ಮತ್ತು ರಾಧ ಅವರ ಏಕೈಕ ಪುತ್ರ ರಜತ್. ಅಕ್ಕ ದುಷಿತಾ ಅವರೊಂದಿಗೆ ಎಸ್‌ಬಿಎಸ್ ಪಬ್ಲಿಕ್ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. ಮೃತ ವಿದ್ಯಾರ್ಥಿಯ ಪೋಷಕರು ಹೊಸಪಾಳ್ಯ ಜನತಾ ಕಾಲೊನಿಯಲ್ಲಿ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು. ಶಾಲಾ ಅವಧಿ ಮುಗಿಸಿಕೊಂಡು ಮಕ್ಕಳನ್ನು ಮನೆಗೆ ಬಿಡಲು ಹೋಗುತ್ತಿದ್ದ ಶಾಲಾ ಬಸ್ ಚಾಲಕ ಅತಿವೇಗವಾಗಿ ವಾಹನ ಚಲಾಯಿಸುತ್ತಿದ್ದ ಎನ್ನಲಾಗಿದೆ. ಬಸ್‌ನಲ್ಲಿ ಮಕ್ಕಳನ್ನು ಮನಗೆ ಬಿಡಲು ಹೊರಟಿದ್ದ ಶಾಲೆಯ ಸಹಾಯಕಿ ಕಲ್ಯಾಕಾಲೋನಿ ಬಳಿ ಇಳಿದು ಮನೆಗೆ ಹೋದರು. ಹುಚ್ಚಹನುಮೇಗೌಡರ ಪಾಳ್ಯದ ಬಸ್ ವೇಗವಾಗಿ ಚಲಿಸುತ್ತಿದ್ದ ಶಾಲಾ ಬಸ್‌ನ ಮುಂದಿನ ಬಾಗಿಲು ತೆರೆದುಕೊಂಡಿದೆ, ಬಸ್ ಚಾಲಕ ವಿದ್ಯಾರ್ಥಿ ರಜತ್‌ಗೆ ಬಸ್‌ನ ಬಾಗಿಲು ಮುಚ್ಚುವಂತೆ ತಿಳಿಸಿದ್ದಾನೆ. ಬಾಗಿಲು ಮುಚ್ಚಲು ಮುಂದಾದ ವಿದ್ಯಾರ್ಥಿ ಬಸ್‌ನಿಂದ ಕೆಳಗೆ ಬಿದ್ದಿದ್ದಾನೆ. ಕೆಳಗೆ ಬಿದ್ದ ವಿದ್ಯಾರ್ಥಿ ರಜತ್ ತಲೆಯ ಮೇಲೆ ಬಸ್‌ನ ಮುಂದಿನ ಚಕ್ರ ಹರಿದು ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಮಾಗಡಿ ಪೊಲೀಸರು ಪ್ರಕರಣ ದಾಖಲಿಸಿ ಚಾಲಕನನ್ನು ಬಂಧಿಸಿದ್ದು ತನಿಖೆ ಕೈಗೊಂಡಿದ್ದಾರೆ. ಸಿಇಒ ನಾರಾಯಣ್, ಸಿಆರ್‌ಸಿ ಲಕ್ಷ್ಮೀನಾರಾಯಣ ಸ್ಥಳಕ್ಕೆ ಭೇಟಿ ನೀಡಿದ್ದರು. ಪೋಷಕರ ಆಕ್ರಂದನ ಮುಗಿಲು ಮುಟ್ಟುವಂತಿತ್ತು. ವಿದ್ಯಾರ್ಥಿಯ ಶವವನ್ನು ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಇಡಲಾಗಿದೆ.

### 461 ಮಂದಿಗೆ ಇ-ಖಾತೆ ವಿತರಣೆ

• ಉದಯವಾಹಿನಿ, ಬಾಗೇಪಲ್ಲಿ

ಪಟ್ಟಣದ 23 ವಾರ್ಡ್‌ಗಳ ಪೈಕಿ 461 ಮಂದಿ ಫಲಾನುಭವಿಗಳಿಗೆ ಇ ಖಾತೆ ವಿತರಿಸಲಾಗಿದೆ ಎಂದು ಪುರಸಭೆ ಅಧ್ಯಕ್ಷ ಎ.ಶ್ರೀನಿವಾಸ್ ತಿಳಿಸಿದರು. ಪುರಸಭಾ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಇ ಖಾತಾ ಅಭಿಯಾನದಲ್ಲಿ ಫಲಾನುಭವಿಗಳಿಗೆ ಇ ಖಾತೆ ವಿತರಿಸಿ ಮಾತನಾಡಿದರು. 23 ವಾರ್ಡ್‌ಗಳಲ್ಲಿ ಈಗಾಗಲೇ ಕೆಲ ಅಂಗಡಿ, ಮನೆ, ನಿವೇಶನಗಳ ಮಾಲೀಕರು ಇ ಖಾತೆ ಮಾಡಿಸಿದ್ದಾರೆ.

ಒಂದು ಸಾವಿರಕ್ಕೂ ಹೆಚ್ಚು ಮಂದಿ ಫಲಾನುಭವಿಗಳು ಇ ಖಾತೆ ಪಡೆಯಲು ಅರ್ಜಿ ಸಲ್ಲಿಸಿದ್ದಾರೆ. ಬಾಕಿ ಉಳಿದ ಅರ್ಜಿಗಳ ಫಲಾನುಭವಿಗಳಿಗೆ ಮತ್ತೊಂದು ಸುತ್ತಿನಲ್ಲಿ ಆಗಸ್ಟ್ ಮೊದಲ, ಎರಡನೇ ವಾರದಲ್ಲಿ ವಿತರಣೆ ಮಾಡಲಾಗುವುದು ಎಂದು ತಿಳಿಸಿದರು. ಸರ್ಕಾರ ಇ ಖಾತೆ ಮಾಡಿಸಲು ಒಂದು ತಿಂಗಳ ಅವಕಾಶ ನೀಡಿದೆ. ಮನೆ, ನಿವೇಶನ, ಅಂಗಡಿಗಳ ಮಾಲೀಕರಿಗೆ ಕಡ್ಡಾಯವಾಗಿ ಇ ಖಾತೆ ಅಗತ್ಯ ಇದೆ. ಈ ಖಾತೆ ಪತ್ರ ಮಾಡಿಸದಿದ್ದಲ್ಲಿ ಕೂಡಲೇ ಅರ್ಜಿ ಜೊತೆ ದಾಖಲೆ ಸಲ್ಲಿಸಬೇಕು ಎಂದು ತಿಳಿಸಿದರು. ಪುರಸಭೆ ಉಪಾಧ್ಯಕ್ಷ ಸುಜಾತಾನಾಯ್ತು ಮಾತನಾಡಿ, ಅರ್ಹ ಫಲಾನುಭವಿಗಳಿಗೆ ಇ ಖಾತೆಗಳನ್ನು ತ್ವರಿತವಾಗಿ ವಿತರಿಸುವಂತೆ ಜಿಲ್ಲಾಧಿಕಾರಿ ಸೂಚನೆ ನೀಡಿದ್ದಾರೆ. ಕಚೇರಿಯಲ್ಲಿ ಅಧಿಕಾರಿಗಳು, ಸಿಬ್ಬಂದಿಯವರು ಕಡಿಮೆ ಇದ್ದರೂ, ಮುಖ್ಯಾಧಿಕಾರಿ, ಕಂದಾಯ ಅಧಿಕಾರಿಗಳು ಪ್ರತಿನಿತ್ಯ ಅರ್ಜಿಗಳನ್ನು ವಿಲೇವಾರಿ ಮಾಡುತ್ತಿದ್ದಾರೆ. ಹಂತ ಹಂತದಲ್ಲಿ ಅರ್ಹ ಫಲಾನುಭವಿಗಳಿಗೆ ಇ ಖಾತೆಗಳ ವಿತರಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

### ಯುವತಿ ಕರೆದೊಯ್ದಿದ್ದ ಯುವಕನ ಬಂಧನ

• ಉದಯವಾಹಿನಿ, ಪಾಂಡವಪುರ

ಮೂರು ವರ್ಷಗಳಿಂದ ಪ್ರೀತಿಸುತ್ತಿದ್ದ ಬಾಲಕಿಗೆ 18 ವರ್ಷ ತುಂಬುತ್ತಿದ್ದಂತೆ ಆಕೆಯನ್ನು ಪೋಷಕರಿಂದ ಬೇರ್ಪಡಿಸಿ ಕರೆದೊಯ್ದಿದ್ದ ಯುವಕನನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ವಶಕ್ಕೆ ಒಪ್ಪಿಸಿದ್ದಾರೆ. ಚಿನಕುರಳಿ ಗ್ರಾಮದ ಮುಜಾಸಿನ್ ಪಾಷ (27) ಬಂಧಿತ ಯುವಕ. ಅದೇ ಗ್ರಾಮದ ಬಾಲಕಿಯನ್ನು ಮೂರು ವರ್ಷಗಳಿಂದ ಪ್ರೀತಿಸುತ್ತಿದ್ದ. ಆಕೆಗೆ ಕಳೆದ ಏಪ್ರಿಲ್‌ನಲ್ಲಿ 18 ವರ್ಷ ತುಂಬಿದ್ದರಿಂದ ಇಬ್ಬರು ಮದುವೆಯಾಗುವ ತೀರ್ಮಾನಕ್ಕೆ ಬಂದಿದ್ದರು. ಇಬ್ಬರೂ ಜುಲೈ 14ರಂದು ಜೊತೆಯಾಗಿ ನಾಪತ್ತೆಯಾಗಿದ್ದರು.

ಇತ್ತ ಮಗಳು ಕಾಣದ ಹಿನ್ನೆಲೆಯಲ್ಲಿ ಆಕೆಯ ಪೋಷಕರು ಜುಲೈ 15ರಂದು ಪಾಂಡವಪುರ ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣ ದಾಖಸಿಕೊಂಡ ಪೊಲೀಸರು ಗುರುವಾರ ಇಬ್ಬರನ್ನೂ ಪತ್ತೆ ಮಾಡಿ ಠಾಣೆಗೆ ಕರೆತಂದಿದ್ದರು. ಜತೆಗೆ ಇಬ್ಬರ ಕುಟುಂಬದವರನ್ನೂ ಠಾಣೆಗೆ ಕರೆಸಿದ್ದರು. ಆದರೆ ಯುವತಿ ಪೋಷಕರ ಜೊತೆ ಹೋಗಲು ನಿರಾಕರಿಸಿದ ಹಿನ್ನೆಲೆಯಲ್ಲಿ ಆಕೆಯನ್ನು ಸಾಂತ್ವನ ಕೇಂದ್ರಕ್ಕೆ ಕಳುಹಿಸಲಾಗಿದೆ. ಮುಜಾಸಿನ್ ಪಾಷಾ ಮೇಲೆ ಪೊಲೀಸರು ಪೋಕ್ಸೋ ಪ್ರಕರಣ ದಾಖಸಿ, ಪಾಂಡವಪುರ ಜೆಎಂಎಫ್‌ಸಿ ನ್ಯಾಯಾಲಕ್ಕೆ ಹಾಜರುಪಡಿಸಿದರು. ಬಂಧಿತನನ್ನು ಜುಲೈ 30ರವರೆಗೆ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ.

ಅಂತರಾಳದಿಂದ.. EDITORIAL

# ಚಿಲ್ಲರೆ ಹಣದುಬ್ಬರ ಪ್ರಮಾಣ ಇಳಿಕೆ ಜೀವನ ನಿರ್ವಹಣೆ ವೆಚ್ಚ ತಗ್ಗಿದೆಯೇ?



ಚಿಲ್ಲರೆ ಹಣದುಬ್ಬರ ಪ್ರಮಾಣವು ಕಳೆದ ಕೆಲವು ತಿಂಗಳುಗಳಿಂದ ಕಡಿಮೆ ಆಗುತ್ತಿದೆ. ರಾಷ್ಟ್ರೀಯ ಸಾಂಖ್ಯಿಕ ಕಚೇರಿಯು (ಎನ್‌ಎಸ್‌ಒ) ಬಿಡುಗಡೆ ಮಾಡಿರುವ ಅಂಕಿ–ಅಂಶಗಳು ಇದನ್ನು ದೃಢಪಡಿಸಿವೆ. ಗ್ರಾಹಕ ಬೆಲೆ ಸೂಚ್ಯಂಕ' (ಸಿಪಿಐ) ಆಧಾರಿತ ಚಿಲ್ಲರೆ ಹಣದುಬ್ಬರ ಪ್ರಮಾಣವು ಜೂನ್ ತಿಂಗಳಲ್ಲಿ ಶೇ 2.1ಕ್ಕೆ ಇಳಿದಿದೆ. ಇದು ಮೇ ತಿಂಗಳಲ್ಲಿ ಶೇ 2.82ರಷ್ಟು ಇತ್ತು. ಜೂನ್‌ನಲ್ಲಿ ದಾಖಲಾಗಿರುವ ಚಿಲ್ಲರೆ ಹಣದುಬ್ಬರ ಪ್ರಮಾಣವು ಆರು ವರ್ಷಗಳ ಕನಿಷ್ಠ ಮಟ್ಟದ್ದು.

ಚಿಲ್ಲರೆ ಹಣದುಬ್ಬರ ಪ್ರಮಾಣವನ್ನು ಶೇ 4ರಲ್ಲಿ ಮಿತಿಗೊಳಿಸುವ ಹೊಣೆಯು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಮೇಲಿದೆ. ಜೂನ್ ತಿಂಗಳನ್ನೂ ಪರಿಗಣಿಸಿದರೆ ಚಿಲ್ಲರೆ ಹಣದುಬ್ಬರ ದರವು ಸತತ ಐದು ತಿಂಗಳುಗಳಿಂದ ಶೇ 4ಕ್ಕಿಂತ ಕಡಿಮೆ ದಾಖಲಾಗಿದೆ. ಪ್ರಸಕ್ತ ಆರ್ಥಿಕ ವರ್ಷದ ಮೊದಲ ತ್ರೈಮಾಸಿಕದಲ್ಲಿ ಚಿಲ್ಲರೆ ಹಣದುಬ್ಬರ ಪ್ರಮಾಣವು ಸರಾಸರಿ ಶೇ 2.7ರಷ್ಟಾಗಿದೆ. ಇದು 'ಆರ್‌ಬಿಐ'ನ ನಿರೀಕ್ಷೆಯಾದ ಶೇ 2.9ಕ್ಕಿಂತ ಕಡಿಮೆ. 2024ರ ನವೆಂಬರ್ ತಿಂಗಳಿನಿಂದ ಹಣದುಬ್ಬರ ಪ್ರಮಾಣ ಇಳಿಮುಖವಾಗಿದೆ. 2019ರ ಜನವರಿಯಲ್ಲಿ ಚಿಲ್ಲರೆ ಹಣದುಬ್ಬರ ಪ್ರಮಾಣವು ಶೇ 1.97ರಷ್ಟು ದಾಖಲಾಗಿತ್ತು. ಅದಾದ ನಂತರ ಕನಿಷ್ಠ ಪ್ರಮಾಣ ದಾಖಲಾಗಿರುವುದು ಜೂನ್ ತಿಂಗಳಲ್ಲಿ. ಗ್ರಾಮೀಣ ಪ್ರದೇಶಗಳಲ್ಲಿ ದಾಖಲಾಗಿರುವ ಶೇ 1.97ರಷ್ಟು ಹಣದುಬ್ಬರವು ರಾಷ್ಟ್ರೀಯ ಸರಾಸರಿಗಿಂತ ಕಡಿಮೆ ಇದೆ. ನಗರ ಪ್ರದೇಶಗಳಲ್ಲಿ ಶೇ 2.56ರಷ್ಟು ಹಣದುಬ್ಬರ ದಾಖಲಾಗಿದೆ. ಆಹಾರ ಪದಾರ್ಥಗಳ ಬೆಲೆಯಲ್ಲಿ ಇಳಿಕೆ ಆಗಿರುವುದು ಒಟ್ಟಾರೆ ಹಣದುಬ್ಬರ ಕಡಿಮೆ ಆಗಿರುವುದಕ್ಕೆ ಕಾರಣವಾಗಿದೆ. ಆಹಾರ ಮತ್ತು ಪಾನೀಯಗಳ ಬೆಲೆಯಲ್ಲಿ ಶೇ 0.2ರಷ್ಟು ಇಳಿಕೆ ಆಗಿದೆ. ತರಕಾರಿ ಹಾಗೂ ದ್ವಿದಳ ಧಾನ್ಯಗಳ ಬೆಲೆಯಲ್ಲಿ ತೀವ್ರ ಇಳಿಕೆ ಕಂಡುಬಂದಿದೆ. ಕೃಷಿ ಚಟುವಟಿಕೆಗಳು ಉತ್ತಮವಾಗಿರುವ ಕಾರಣದಿಂದಾಗಿ ಮುಂದಿನ ದಿನ ಗಳಲ್ಲಿಯೂ ಆಹಾರ ಪದಾರ್ಥಗಳ ಬೆಲೆಯು ಕಡಿಮೆ ಮಟ್ಟದಲ್ಲಿಯೇ ಇರುವ ನಿರೀಕ್ಷೆ ಇದೆ. ನೈಋತ್ಯ ಮುಂಗಾರು ಮಳೆಯು ದೇಶದ ಬಹುಭಾಗವನ್ನು ಆವರಿಸಿದೆ. ಜೂನ್ ತಿಂಗಳ ಪ್ರಥಮಾರ್ಧದಲ್ಲಿ ದೇಶದಲ್ಲಿ ಮಳೆಯ ಕೊರತೆ ಇತ್ತು. ಆದರೆ ಈಗಿನ ಅಂಕಿ–ಅಂಶಗಳ ಪ್ರಕಾರ, ದೇಶದಲ್ಲಿ ಸರಾಸರಿ ಮಳೆಯ ಪ್ರಮಾಣವು ದೀರ್ಘಾವಧಿ ಸರಾಸರಿಗಿಂತ ಶೇ. 9.5ರಷ್ಟು ಹೆಚ್ಚಿದೆ. ಮುಂಗಾರು ಅವಧಿಯಲ್ಲಿ ಬೆಳೆಗಳನ್ನು ಬೆಳೆಯುವ ಪ್ರಮಾಣವು ಕಳೆದ ವರ್ಷಕ್ಕಿಂತ ಹೆಚ್ಚಾಗಿದೆ. ಕಚ್ಚಾ ತೈಲದ ಬೆಲೆಯಲ್ಲಿ ಹೆಚ್ಚಳ ಆಗಬಹುದು ಎಂಬ ಭೀತಿಯು ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧ ವಿರಾಮ ಘೋಷಣೆಯ ಕಾರಣದಿಂದಾಗಿ ತಗ್ಗಿದೆ. ಹೀಗಾಗಿ ಹಣದುಬ್ಬರ ಪ್ರಮಾಣವು ನಿಯಂತ್ರಣದಲ್ಲಿ ಇರಬಹುದು ಎನ್ನುವ ಆಶಾಭಾವನೆ ಇದೆ. ಆದರೆ, ಗ್ರಾಹಕ ಬೆಲೆ ಸೂಚ್ಯಂಕದಲ್ಲಿ ಆಹಾರ ಪದಾರ್ಥಗಳನ್ನು ಹೊರತುಪಡಿಸಿ ಇತರ ವಸ್ತುಗಳ ಬೆಲೆಯಲ್ಲಿ ಏರಿಕೆ ಆಗಿದೆ ಎಂಬುದನ್ನು ಗಮನಿಸಬೇಕು. ಶಿಕ್ಷಣ, ಆರೋಗ್ಯ ಸೇವೆಗಳ ವೆಚ್ಚ, ದಿನನಿತ್ಯದ ಇತರ ಹಲವು ಅಗತ್ಯ ಉತ್ಪನ್ನಗಳ ಬೆಲೆಯಲ್ಲಿ ಹೆಚ್ಚಳ ಆಗಿದೆ. ಅಂದರೆ, ಆಹಾರ ಪದಾರ್ಥಗಳಿಗೆ ಮಾಡಬೇಕಿರುವ ವೆಚ್ಚವು ಕಡಿಮೆ ಆಗಿದ್ದರೂ, ಜನರ ಒಟ್ಟಾರೆ ಜೀವನ ನಿರ್ವಹಣೆ ವೆಚ್ಚದಲ್ಲಿ ಕಡಿಮೆ ಆಗಿಲ್ಲ.

**ಹಣದುಬ್ಬರ ಪ್ರಮಾಣ ಇಳಿಮುಖಗೊಂಡು, ಆಹಾರ ಪದಾರ್ಥಗಳಿಗೆ ಮಾಡಬೇಕಿರುವ ವೆಚ್ಚ ಕಡಿಮೆ ಆಗಿದೆ. ಜನರ ಒಟ್ಟಾರೆ ಜೀವನ ನಿರ್ವಹಣೆ ವೆಚ್ಚ ಕಡಿಮೆ ಆಗಿಲ್ಲ.**

ಗ್ರಾಹಕ ಬೆಲೆ ಸೂಚ್ಯಂಕದಲ್ಲಿ ಆಹಾರ ಪದಾರ್ಥಗಳ ಪಾಲು ಹೆಚ್ಚಿದೆ (ಶೇ 46ರಷ್ಟು). ಹೀಗಾಗಿ, ಅವುಗಳ ಬೆಲೆಯಲ್ಲಿ ಆಗುವ ಬದಲಾವಣೆಗಳು ಹಣದುಬ್ಬರದ ಮೇಲೆ ಹೆಚ್ಚು ಪರಿಣಾಮ ಉಂಟು ಮಾಡುತ್ತವೆ. ಹಣದುಬ್ಬರಕ್ಕೆ ಸಂಬಂಧಿಸಿದ ಜೂನ್ ತಿಂಗಳ ಅಂಕಿ–ಅಂಶಗಳು ಆರ್‌ಬಿಐನ ಹಣಕಾಸು ನೀತಿ ಸಮಿತಿಯ (ಎಂಪಿಸಿ) ಆಲೋಚನೆಗಳ ಮೇಲೆ ಪ್ರಭಾವ ಬೀರಲಿವೆಯೇ ಎಂಬುದು ಈಗಿರುವ ಮಹತ್ವದ ಪ್ರಶ್ನೆ. 'ಎಂಪಿಸಿ' ಸಭೆ ಆಗಸ್ಟ್‌ಗೆ ನಿಗದಿಯಾಗಿದೆ. ಕಳೆದ ತಿಂಗಳ ಸಭೆಯಲ್ಲಿ ಎಂಪಿಸಿಯು ರೆಪೊ ದರವನ್ನು ಶೇ 0.50ರಷ್ಟು ಕಡಿಮೆ ಮಾಡಿದೆ. ಫೆಬ್ರುವರಿಯ ನಂತರದಲ್ಲಿ ರೆಪೊ ದರವು ಒಟ್ಟು ಶೇ 1ರಷ್ಟು ಇಳಿಕೆ ಆಗಿರುವುದರಿಂದ, ರೆಪೊ ದರವನ್ನು ಇನ್ನೂ ತಗ್ಗಿಸಲು ಹೆಚ್ಚು ಅವಕಾಶ ಇಲ್ಲ ಎಂದು ಎಂಪಿಸಿ ಹೇಳಿದೆ. ಮುಂದಿನ ತೀರ್ಮಾನ ತೆಗೆದುಕೊಳ್ಳುವ ಮೊದಲು ಕಾದುನೋಡುವ ಕೆಲಸ ಮಾಡಲಾಗುತ್ತದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲೋತ್ರಾ ಕೂಡ ಹೇಳಿದಾರೆ.

# ರಾಮಾಯಣ



## ಶ್ರೀರಾಮನು ದಶರಥನಿಗೆ ಉತ್ತರ ಕ್ರಿಯೆಗಳನ್ನು ಮಾಡಿದ್ದು

• ಹಿಂದಿನ ಸಂಚಿಕೆಯಿಂದ 102ನೆಯ ಅಧ್ಯಾಯ

ಆಮೇಲೆ ಅತ್ಯಂತ ದೃಢಭಕ್ತರಾದ ತಮ್ಮಂದಿರನ್ನು ಕೂಡಿಕೊಂಡು ಅವರನ್ನು ಸಂತವಿಸುತ್ತ ಮಂದಾಕಿನೀನದಿಯ ತೀರಕ್ಕೆ ಹೋಗಿ ಸ್ನಾನವನ್ನು ಮಾಡಿ ಧರ್ಮೋದಕ ತರ್ಪಣಗಳನ್ನು ಕೊಟ್ಟನು. ಅನಂತರ ತೀರಕ್ಕೆ ಬಂದು ಎಲಚಿಹಣ್ಣು ಸಹಿತವಾದ ಇಂಗುದೀಪಿಕ್ಕಾಕದ ಪಿಂಡಗಳನ್ನು ದರ್ಭೆಯ ಮೇಲಿಟ್ಟು ಮಹಾರಾಜ, ನಾವು ವ್ರತಸ್ಥರಾಗಿ ಹಣ್ಣು ಹಂಪಲುಗಳನ್ನು ಆಹಾರಮಾಡಿಕೊಂಡಿದ್ದೇವೆ. ಆದಕಾರಣ ನಾನು ಕೊಡುವ ಎಲಚಿಹಣ್ಣು ಸಮೇತವಾದ ಇಂಗುದೀಪಿಕ್ಕಾಕದ ಪಿಂಡಗಳಿಂದ ತೃಪ್ತನಾಗಿ ಸ್ವರ್ಗಕ್ಕೆ ಹೋಗು. ಲೋಕದಲ್ಲಿ ಯಾವ ವಸ್ತುವನ್ನು ಆಹಾರಮಾಡಿಕೊಂಡಿರುವರೋ ಆ ವಸ್ತುವನ್ನೇ ದೇವತಾರ್ಪಣಮಾಡಿದರೆ ಅದರಿಂದಲೇ ದೇವತೆಗಳಿಗೆ ತೃಪ್ತಿಯಾಗುವುದೆಂಬ ಧರ್ಮಶಾಸ್ತ್ರವುಂಟು ಎಂದು ನುಡಿದನು. ಅಲ್ಲಿಂದ ತಿರುಗಿ ಚಿತ್ರಕೂಟ ಪರ್ವತದ ತಪ್ಪಲಿನಲ್ಲಿದ್ದ ಪರ್ಣಶಾಲೆಗೆ ಹೋಗಿ ಭರತ ಲಕ್ಷ್ಮಣ ಶತ್ರುಘ್ನರನ್ನು ತಬ್ಬಿಕೊಂಡು ರೋದನ ಮಾಡುತ್ತಿದ್ದನು. ಅವರನ್ನು ಕಂಡು ಸೀತಾದೇವಿಯೂ ಅಳುತ್ತಿದ್ದಳು.

ಈ ರೀತಿಯ ರೋದನದ ಕೋಲಾಹಲಧ್ವನಿಯನ್ನು ಕೇಳಿ ದೂರದಲ್ಲಿದ್ದ ಭರತನ ಸೇನೆಯು ಭರತನು ಶ್ರೀರಾಮನನ್ನು ಕಂಡನೆಂದು ನಿಶ್ಚಯಿಸಿ ಧ್ವನಿಯು ಹುಟ್ಟಿದ ಸ್ಥಳವನ್ನು ವಿಚಾರಿಸಿ ಕುದುರೆ ಆನೆ ರಥ ಮೊದಲಾದ ವಾಹನಗಳನ್ನೇರಿಕೊಂಡೂ ಕಾಲುನಡೆಯಿಂದಲೂ ಸೀತಾಲಕ್ಷ್ಮಣ ಸಮೇತನಾದ ಶ್ರೀರಾಮನನ್ನು ನೋಡಬೇಕೆಂದು ಅತಿವೇಗದಿಂದ ಬರುತ್ತಿದ್ದರು. ಆ ರಥಗಳ ಚೀತ್ಕಾರದಿಂದಲೂ ಕುದುರೆಗಳ ಹೇಷಿತಧ್ವನಿಗಳಿಂದಲೂ ಖುರಪುಟದ ತಾಡನಗಳಿಂದಲೂ ಆನೆಗಳ ಬೃಂಹಿತಧ್ವನಿಗಳಿಂದಲೂ ಪಟುಭಟರಾದ ಕಾಲಾಳುಗಳ ಆರ್ಭಟಧ್ವನಿಗಳಿಂದಲೂ ಪರಿಪೂರ್ಣವಾಗಿ ಭೂಮಂಡಲವು, ವರ್ಷಾಕಾಲದಲ್ಲಿ ಮೇಘಗಳಿಂದಲೂ ಗುಡುಗುಗಳ ಗರ್ಜನೆ ಗಳಿಂದಲೂ ಒಪ್ಪುವ ಆಕಾಶಮಂಡಲದಂತೆ ಒಪ್ಪುತ್ತಿತ್ತು. ಕಾಡಾನೆಗಳು ಆ ಸೇನೆಯಲ್ಲಿದ್ದ ಆನೆಗಳ ಮದಗಂಧವನ್ನು ಸಹಿಸಲಾರದೆ ನಾನಾದಿಕ್ಕುಗಳಿಗೂ ದೆಸೆಗೆಟ್ಟು ಓಡುತ್ತಿದ್ದವು. ಆ ಅರಣ್ಯದಲ್ಲಿದ್ದ ಸಿಂಹ ಹುಲಿ ಮೊದಲಾದ ಮೃಗಗಳು ದೆಸೆಗೆಟ್ಟು ಓಡುತ್ತಿದ್ದವು. ಚಕ್ರವಾಕ ಹಂಸ ಕೊಳರ್ವಕ್ಕೆ ಕೋಗಿಲೆ ಮೊದಲಾದ ಪಕ್ಷಿಗಳು ಹಾರಿ ದಿಕ್ಕುದಿಕ್ಕುಗಳಿಗೂ ಓಡುತ್ತಿರಲು ಆ ಪಕ್ಷಿಗಳಿಂದ ಇಟ್ಟಣಿಸಲ್ಪಟ್ಟ ಆಕಾಶವೂ ಚಿತ್ರಕೂಟಪರ್ವತದ ವನವೂ ಅತಿಮನೋಹರವಾಗಿ ಒಪ್ಪಿದವು.

ಈ ಪ್ರಕಾರದಲ್ಲಿ ಆ ಸೇನೆಯು ಹೋಗಿ ನಿರ್ಮಲಸ್ವರೂಪನೂ ದಯಾಳುವೂ ಪುರುಷೋತ್ತಮನೂ ಆದ ಶ್ರೀರಾಮನು ದರ್ಭಾಸನದ ಮೇಲೆ ಕುಳಿತಿರುವುದನ್ನು ಕಂಡು ಅಭಿವಂದಿಸಿ ಕೈಕೇಯಾದೇವಿಯನ್ನೂ ಮಂಥರೆಯನ್ನೂ ನಿಂದಿಸುತ್ತ ಆತನ ಸಮೀಪಕ್ಕೆ ಹೋಗಿ ಕಣ್ಣೀರು ಬಿಡುತ್ತಿದ್ದರು. ಶ್ರೀರಾಮನು ಆ ಜನಗಳನ್ನು ಕಂಡು ಮರುಗುತ್ತ, ಅತ್ಯಂತ ಕೃಪಾದೃಷ್ಟಿಯಿಂದ ತನ್ನ ಮಕ್ಕಳನ್ನು ಕಂಡಂತೆ ಆ ಪ್ರಜೆಗಳಲ್ಲಿ ಕೆಲವರನ್ನು ತಬ್ಬಿಕೊಂಡು ವಯೋವೃದ್ಧರಾಗಿ ಪೂಜ್ಯರಾದ ಬ್ರಾಹ್ಮಣರಿಗೆ ಅಭಿವಂದಿಸಿ ಬಂದಜನರನ್ನು ಸ್ವಾಗತವಚನಗಳಿಂದ ಸಂಮಾನಿಸಿ ಕುಶಲಪ್ರಶ್ನೆಯನ್ನು ಕೇಳಿದನು.

### ಕೌಸಲ್ಯಾದೇವಿ ಮೊದಲಾದವರ ನಿಲಾಪೆ

ಆಮೇಲೆ ವಸಿಷ್ಠಮುನೀಶರನು ಕೌಸಲ್ಯಾದೇವಿ ಮೊದಲಾದ ದಶರಥರಾಯನ ಸ್ತ್ರೀಯರನ್ನು ಮುಂದಿಟ್ಟುಕೊಂಡು ಶ್ರೀರಾಮನನ್ನು ನೋಡಬೇಕೆಂದು ಅತ್ಯಂತಪ್ರೀತಿಯುಳ್ಳವನಾಗಿ ಮೆಲ್ಲಮೆಲ್ಲನೆ ಮಂದಾಕಿನೀತೀರಕ್ಕೆ ಬಂದನು. ಅಲ್ಲಿ ರಾಮಲಕ್ಷ್ಮಣರು ಸ್ನಾನವ ಮಾಡುವ ಘಟ್ಟವನ್ನು ಕಂಡು ಕೌಸಲ್ಯಾದೇವಿಯು ಕಣ್ಣೀರು ತುಂಬಿ ಮುಖಕಾಂತಿಗುಂದಿ ಸುಮಿತ್ರಾದೇವಿಯನ್ನೂ ಮಿಕ್ಕ ರಾಜಸ್ತ್ರೀಯರನ್ನೂ ಕುರಿತು ಎಲೇ ಸುಮಿತ್ರಾದೇವಿ, ರಾಮಲಕ್ಷ್ಮಣರೂ ಸೀತಾದೇವಿಯೂ ಇಂಥ ಘೋರಾರಣ್ಯದಲ್ಲಿ ಇಂಥ ತೀರ್ಥಸೇವೆಯನ್ನು ಮಾಡಿಕೊಂಡು ಅನಾಥರಾಗಿರುವ ಹಾಗಾಯಿತು. ನಿನ್ನ ಕುಮಾರನಾದ ಲಕ್ಷ್ಮಣನು ಅಣ್ಣನಾದ ಶ್ರೀರಾಮನಿಗೆ ಇಲ್ಲಿಂದ ತೀರ್ಥವನ್ನು ತೆಗೆದುಕೊಂಡು 16 ಅಕಟಕಟಾ ರಾಜಪುತ್ರನಾದ ಲಕ್ಷ್ಮಣನು ಉದಕವನ್ನು ಹೊರುವಂಥ ಹೀನಸ್ಥಿತಿಗೆ ಒಳಗಾದನು. ಹಾಗಾದರೂ ತನ್ನ ಜೇಷ್ಠಭ್ರಾತೃವಿನ ಸೇವೆಯಿಂದ ನೀರುಹೊರುವುದು ಲಕ್ಷ್ಮಣನಿಗೆ ಹೀನಕೃತ 'ವಾಗದೆ ಪೂಜ್ಯವಾದದ್ದಾಗಿಯೇ ಇರುವುದು.

ಮುಂದುವರಿಯುವುದು...



ಕಲಾ ಸಾಹಿತ್ಯ

ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

# ಶ್ರೀಮಾತೆ ಶಾರದಾದೇವಿ ರವರ 105ನೇ ವರ್ಷದ ಪುಣ್ಯಸ್ಮರಣೆ

ಶ್ರೀಮಾತೆ ಶಾರದಾದೇವಿರವರು ಕೋಲ್ಕತ್ತಾದಲ್ಲಿ 1853 ಡಿ. 22ರಂದು ತಂದೆ ರಾಮಚಂದ್ರ ಮುಖರ್ಜಿ, ತಾಯಿ ಶ್ಯಾಮಸುಂದರ ದೇವಿರವರ ಮಗಳಾಗಿ ಜನಿಸುತ್ತಾರೆ. ಅವರದು ಸಂಪ್ರದಾಯಸ್ಥ ಬ್ರಾಹ್ಮಣ ಕುಟುಂಬವಾಗಿತ್ತು. ಬಡವರಾಗಿದ್ದರೂ ಸುಸಂಸ್ಕೃತರಾಗಿದ್ದು ಸರಳ ಬದುಕು ಅವರದಾಗಿತ್ತು. ದೇವರು,ಧರ್ಮ, ಆಧ್ಯಾತ್ಮ ವಿಚಾರಗಳಿಂದ ಕೂಡಿದ ಸದಾಚಾರ ಸಂಪನ್ನರಾಗಿದ್ದರು. ಶಾರದಾದೇವಿಗೆ ಐದು ವರ್ಷಗಳು ಆಗಿದ್ದಾಗ ಶ್ರೀ ರಾಮಕೃಷ್ಣ ಪರಮಹಂಸರೊಂದಿಗೆ ವಿವಾಹವಾಯಿತು. ರಾಮಕೃಷ್ಣ ರವರಿಗೆ ಆಗ 25 ವರ್ಷಗಳು, ಅಂದಿನ ದಿನಗಳಲ್ಲಿ ಬಾಲ್ಯವಿವಾಹ ರೂಢಿಯಲ್ಲಿದ್ದಿತ್ತು. ವಿವಾಹದ ನಂತರ ಶ್ರೀರಾಮಕೃಷ್ಣರು ದಕ್ಷಿಣೇಶ್ವರಕ್ಕೆ ಬಂದು ತಮ್ಮ ಅಧ್ಯಾತ್ಮ ಸಾಧನೆ ಯನ್ನು ಮುಂದುವರಿಸಿದರು. ಜನರು ಅವರ ಅನನ್ಯ ಸಾಧನೆ ಸ್ವರೂಪವನ್ನು ಅರ್ಥ ಮಾಡಿಕೊಳ್ಳಲಾರದೆ ಅವರಿಗೆ ಹುಚ್ಚು ಹಿಡಿದಿದೆ ಎಂದು ಅಪಪ್ರಚಾರ ಮಾಡಿದರು. ಈ ವಿಷಯ ತಿಳಿದ ಶಾರದಾದೇವಿ ಪತಿಯ ಸೇವೆ ಮಾಡಲು ದಕ್ಷಿಣೇಶ್ವರಕ್ಕೆ ಹೋದರು. ಶ್ರೀರಾಮಕೃಷ್ಣರು ಪತ್ನಿಯನ್ನು ಕುರಿತು ಜಗತ್ತಿನ ಎಲ್ಲಾ ಹೆಣ್ಣುಮಕ್ಕಳು ಜಗನ್ಮಾತೆಯ ಸ್ವರೂಪ ಎಂದು ನಾನು ತಿಳಿದಿದ್ದೇನೆ.

ನೀನು ಪ್ರಾಪಂಚಿಕ ಸುಖ ಬಯಸಿ ನನ್ನನ್ನು ಐಹಿಕ ಆಕರ್ಷಣೆಯ ಬಲೆಗೆ ಬೀಳುವಂತೆ ಮಾಡಲು ಬಂದಿರುವೆಯಾ? ಎಂದು ಕೇಳುತ್ತಾ ಅದಕ್ಕೆ ಅವರು ಇಲ್ಲಾ! ನಿಮ್ಮನ್ನ ಇಹದ ಆಕರ್ಷಣೆಗಳತ್ತ ಏಕೆ ಸೆಳೆಯಲಿ? ನಾನು ಇಲ್ಲಿಗೆ ಬಂದಿರುವುದು ನಿಮ್ಮ ಕಠಿಣ ಆಧ್ಯಾತ್ಮಿಕ, ಯೋಗ ಸಾಧನೆಯಲ್ಲಿ ನಿಮಗೆ ಸಹಾಯ ಮಾಡುವುದಕ್ಕಾಗಿ ಎಂದು ಹೇಳುತ್ತಾ,ಪತಿಯ ಪಾದಗಳಿಗೆ ನಮಸ್ಕರಿಸಿದರು.ಆಗ ರಾಮಕೃಷ್ಣರು ಈಗ ನಾನು ನಿನ್ನನ್ನು ಜಗಜ್ಜನನಿಯ ಸ್ವರೂಪವೆಂದು ತಿಳಿಯುತ್ತೇನೆ ಎಂದರು.

16 ವರ್ಷದ ಶಾರದಾದೇವಿ ವೈರಾಗ್ಯ ಜೀವನವನ್ನು ಆರಿಸಿಕೊಂಡು ಸುಮಾರು ಹದಿಮೂರು ವರ್ಷಗಳ ಕಾಲ ತನ್ನ ಪತಿಯೊಡನೆ ಇದ್ದು ಶ್ರದ್ಧಾಭಕ್ತಿಯಿಂದ ಪತಿ ಸೇವೆ ಮಾಡಿದರು. ಬಾಲ್ಯದಿಂದಲೂ ಮೃದುಸ್ವಭಾವದ, ಸರಳ ಸಜ್ಜನಿಕೆಯ ಸಾಕಾರವಾಗಿದ್ದರು. ಅವರ ಹೃದಯ,ಪ್ರೀತಿ,ದಯೆ, ವಿಶ್ವಾಸ, ಔದಾರ್ಯ ಎಲ್ಲಾ ಮಾನವೀಯ ಗುಣಗಳಿಂದ ತುಂಬಿತ್ತು.

ಅವರಲ್ಲಿ ಎಣೆಯಿಲ್ಲದ ಮಾತೃವಾತ್ಸಲ್ಯ, ಭಕ್ತಿ, ತಾಳ್ಮೆ ಮತ್ತು ಅಧ್ಯಾತ್ಮ ಜ್ಞಾನ ಎದ್ದು ತೋರುತ್ತಿತ್ತು. ಶ್ರೀರಾಮಕೃಷ್ಣರ ಭಕ್ತರು ಅವರನ್ನು ಶ್ರೀಮಾತೆ ಎಂದು ಗೌರವಿಸುತ್ತಿದ್ದರು. ಮಾತೃ ಹೃದಯದ ಕರುಣಾ ಮೂರ್ತಿಯಾಗಿದ್ದ ಶಾರದಾದೇವಿ ಜಗತ್ತಿಗೆ ತಾಯಿಯಂತಿದ್ದರು. ಶಾರದಾದೇವಿಯವರು ಯಾವ ಪ್ರಚಾರ, ಆಡಂಬರಗಳಿಲ್ಲದೇ ದೀನದಲಿತರಿಗೆ ಆಸರೆಯಾಗಿ, ಅಜ್ಞಾನದ ಅಂಧಕಾರದಲ್ಲಿದ್ದವರಿಗೆ ಕೈದೀವಿಗೆಯಾಗಿ, ದಾರಿ ತಪ್ಪಿದವರಿಗೆ ಮಾರ್ಗದರ್ಶಕರಾಗಿ, ಅಸಂಖ್ಯಾತ ಜನರಿಗೆ ಆತ್ಮೋದ್ಧಾರದ ಮಾರ್ಗವನ್ನು ತೋರಿದರು. ಅವರ ನಿಸ್ವಾರ್ಥ ಬದುಕು ಅವರು ತಮಗಾಗಿ ಏನನ್ನೂ ಅಪೇಕ್ಷಿಸಲಿಲ್ಲ ಏನನ್ನೂ ಸಂಗ್ರಹಿಸಲಿಲ್ಲ ಬಡ ಜನತೆಯ ನೋವನ್ನು ನಿವಾರಿಸಲು ಹಗಲಿರುಳೂ ಶ್ರಮಿಸಿದರು.


**ಅವರ ಬೋಧನೆಯ ನುಡಿಗಳು ಹೀಗಿವೆ:** ನಿಮಗೆ ಮನಸ್ಸಿನ ಶಾಂತಿ ಬೇಕಿದ್ದರೆ ಅನ್ಯರ ತಪ್ಪು ಗಳತ್ತ ದೃಷ್ಟಿ ಹರಿಸಬೇಡಿ, ಬದಲಾಗಿ ನಿಮ್ಮ ದೋಷಗಳತ್ತ ಗಮನಹರಿಸಿ,ಇಡೀ ಜಗತ್ತನ್ನೇ ತನ್ನದಾಗಿಸಿಕೊಳ್ಳುವ ಪ್ರಯತ್ನ ಮಾಡಿರಿ.



**ಈ ಜಗತ್ತಿನಲ್ಲಿ ಯಾರೂ ಅಪರಿಚಿತರಲ್ಲ.ಇಡೀ ವಿಶ್ವವೇ ನಿಮ್ಮದಾಗಿದೆ. ಐಹಿಕ ಪ್ರಪಂಚದ ಸುಖ ಭೋಗಗಳತ್ತ ನಿಮ್ಮ ಸಂಬಂಧ ಕಡಿಮೆಯಾದ ಹಾಗೆ ನೀವು ಮಾನಸಿಕ ಶಾಂತಿಯ ಸುಖವನ್ನು ಅನುಭವಿಸಬಹುದಾಗಿದೆ. ಪ್ರೀತಿ ಹಾಗು ಭಕ್ತಿ ಇಲ್ಲದೇ ಯಾರೂ ಭಗವಂತನನ್ನು ಕಾಣಲಾರರು.ಈ ಮನಸ್ಸು ಮದವೇರಿದ ಆನೆಯಂತೆ ಇದು ಗಾಳಿಯಷ್ಟೇ ಚಂಚಲ. ಆದ್ದರಿಂದ ಸದಾ ವಿವೇಚನಾ ಪರನಾಗಿರಬೇಕು.ಭಗವಂತನ ಸಾಕ್ಷಾತ್ಕಾರಕ್ಕಾಗಿ ಸರ್ವ ಪ್ರಯತ್ನ ಮಾಡಬೇಕು. ಗಂಡ ಹೆಂಡತಿ ಎಲ್ಲಾ ಈ ಶರೀರದ ಮಾಯೆಯೆಡ್ಡಿದ ಸಂಕೋಲೆಗಳು. ಈ ಶರೀರದ ಮೇಲಿನ ಮೋಹ,ಲಾಲಸೆ, ಶರೀರವೇ ತಾನು ಎಂಬ ಭಾವನೆ ಹೋಗಬೇಕು. ಸುಟ್ಟ ಮೇಲೆ ಮೂರು ಹಿಡಿ ಬೂದಿಯಾಗುವ ಈ ಶರೀರದ ಮೇಲೆ ಯಾಕಿಷ್ಟು ಮೋಹ ಎಂಬ ಬೋಧನೆಯನ್ನು ಜಗತ್ತಿಗೆ ಸಾರಿದ್ದಾರೆ.**

ಶ್ರೀಮಾತೆ ಶಾರದಾದೇವಿ ರವರು ಆದರ್ಶ ತಪಸ್ವಿನಿ, ಆದರ್ಶಸತಿ, ಹಾಗೂ ಆದರ್ಶ ಮಾತೆ. ಬಡವ–ಬಲ್ಲಿದ, ಜಾತಿಯಲ್ಲಿ ಮೇಲು–ಕೀಳು ಎಂಬ ಯಾವ ವ್ಯತ್ಯಾಸವನ್ನೂ ತೋರದೆ ಎಲ್ಲರನ್ನೂ ಸರಿಸಮಾನವಾಗಿ ಕಂಡು ಎಲ್ಲರ ಸುಖ–ದುಃಖಗಳಿಗೆ ಸ್ಪಂದಿಸಿದರು. ಅವರಲ್ಲಿ ಲವಲೇಶವೂ ಅಹಂಕಾರ ವಿರಲಿಲ್ಲ. ಲೋಕಮಾತೆ ಶಾರದಾದೇವಿರವರು 1920 ಜುಲೈ 20ರಂದು ತನ್ನ 67ನೇ ವಯಸ್ಸಿನಲ್ಲಿ ಇಹ ಲೋಕವನ್ನಗಲಿ ಪ್ರಕೃತಿಯಲ್ಲಿ ಲೀನವಾದರು. ಶ್ರೀಮಾತೆ ಶಾರದಾದೇವಿಯವರ ಆದರ್ಶಗಳು ಪ್ರಸ್ತುತ ಆಸೆ ದುರಾಸೆಗಳನ್ನು ಇಟ್ಟುಕೊಂಡಿರುವ ಕೆಲವು ಕುಟುಂಬ ವರ್ಗದವರಿಗೆ ಮಿಗಿಲಾಗಿ ಕೆಲವು ಹೆಣ್ಣುಮಕ್ಕಳಿಗೆ ಅತ್ಯವಶ್ಯಕವಾಗಿ ಅಗತ್ಯವೆನಿಸುತ್ತದೆ ಹಾಗೂ ಅವರ ಆದರ್ಶಗಳು ಕುಟುಂಬಕ್ಕೆ,ಸಮಾಜಕ್ಕೆ, ರಾಷ್ಟ್ರಕ್ಕೆ ಹಾಗೂ ಇಡೀ ಜಗತ್ತಿಗೆ ಬೆಳಕು ಚೆಲ್ಲುವ ಬೋಧನೆಗಳು ಆಗಿರುತ್ತವೆ. ನಿಜಕ್ಕೂ ಇಂತಹ ಶ್ರೇಷ್ಠ ಶ್ರೀಮಾತೆ ಶಾರದಾದೇವಿಯವರ 105 ನೇ ವರ್ಷದ ಪುಣ್ಯ ಸ್ಮರಣೇಯ ದಿನವಾದ ಇಂದು ನಾವುಗಳು ಅವರನ್ನು ಸ್ಮರಿಸಿ ನೆನೆಯುತ್ತಾ ಅವರ ಆದರ್ಶಗಳನ್ನು ಪಾಲಿಸುವ ಸಂಕಲ್ಪ ಮಾಡೋಣ.

# ಹನ್ನೆರಡು ನಿಯಮಗಳು



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



**1. ಜಗದ ನಿಯಮ:** ನಾವು ಪ್ರಪಂಚಕ್ಕೆ ಏನನ್ನು ಕೊಡುತ್ತೇವೆಯೋ ಅದೇ ನಮಗೆ ಹಿಂತಿರುಗಿ ಬರುತ್ತದೆ. ನಾವು ಬೇರೆಯವರಿಗೆ ಒಳ್ಳೆಯದನ್ನು ಮಾಡಿದರೆ ನಮಗೂ ಒಳ್ಳೆಯದೇ ಆಗುತ್ತದೆ, ಕೆಟ್ಟದ್ದನ್ನು ಮಾಡಿದರೆ ಕೆಟ್ಟದ್ದೇ ಆಗುತ್ತದೆ.

**2. ಸೃಷ್ಟಿಯ ನಿಯಮ:** ಜಗತ್ತಿನಲ್ಲಿ ತಾನಾಗಿ ತಾನೇ ಯಶಸ್ಸು ಸಿಗುವುದಿಲ್ಲ ಅಥವಾ ಬರುವುದಿಲ್ಲ, ಪ್ರತಿಯೊಂದು ಯಶಸ್ಸು ನಮ್ಮ ಪರಿಶ್ರಮದಿಂದಲೇ ಸಿಗುವುದು.

**3. ನಮ್ರತೆಯ ನಿಯಮ:** ಮೊದಲು ನಾವು ನಮ್ಮ ತಪ್ಪನ್ನು ತಿದ್ದಿಕೊಂಡರೆ ಮಾತ್ರ ಪರಿವರ್ತನೆಯಾಗಲು ಸಾಧ್ಯ.

**4. ಅಭಿವೃದ್ಧಿಯ ನಿಯಮ:** ನಮ್ಮನ್ನು ನಾವು ಬದಲಾಯಿಸಿಕೊಂಡರೆ ಮಾತ್ರ ನಮ್ಮ ಜೀವನವು ಅಭಿವೃದ್ಧಿಯೆಡೆಗೆ ಸಾಗುತ್ತದೆ. ಶ್ರಮ ಪಟ್ಟು ಕೆಲಸ ಮಾಡಬೇಕು, ಸೋಮಾರಿಗಳಾಗಬಾರದು.

**5. ಜವಾಬ್ದಾರಿಯ ನಿಯಮ:** ನಮ್ಮ ಜೀವನಕ್ಕೆ ನಾವೇ ಹೊಣೆ, ಬೇರೆಯವರನ್ನು ದೂಷಿಸುವುದು ಸರಿಯಲ್ಲ.

**6. ಸಂಪರ್ಕ ನಿಯಮ:** ನಮ್ಮ ಜೀವನದ ಭೂತ, ವರ್ತಮಾನ ಮತ್ತು ಭವಿಷ್ಯ ಎಲ್ಲವೂ ಸದಾ ಸಂಪರ್ಕದಲ್ಲಿರುತ್ತದೆ. ನಮ್ಮ ನಿನ್ನೆಯ ಕರ್ಮಗಳು ಇಂದು, ಮತ್ತು ಇಂದಿನ ಕರ್ಮಗಳು ನಾಳೆ ಅನುಭವಿಸುತ್ತಿರುತ್ತೇವೆ.

**7. ಗಮನದ ನಿಯಮ:** ನಾವು ಎರಡೆರಡು ಕೆಲಸಗಳ ಮೇಲೆ ಗಮನ ವಹಿಸುವುದು ವ್ಯರ್ಥ. ಮಾಡುವ ಒಂದು ಕೆಲಸ ಅಥವಾ ಕಾರ್ಯದಲ್ಲಿ ಗಮನವಿರಲಿ.

**8. ಅತಿಥ್ಯದ ನಿಯಮ:** ನಮ್ಮ ನೆಡವಳಿಕೆ, ನಮ್ಮ ಆಚಾರ, ವಿಚಾರ ಹಾಗೂ ಚಿಂತನೆಗೆ ಕನ್ನಡಿ ಇದ್ದಂತೆ.

**9. ಇಂದು ಮತ್ತು ಈಗಿನ ನಿಯಮ:** ವರ್ತಮಾನದ ಬಗ್ಗೆ ಹೆಚ್ಚು ಗಮನವಿರಬೇಕು ಭೂತ –ಭವಿಷ್ಯದ ಬಗ್ಗೆ ಅಲ್ಲ.

**10. ಪರಿವರ್ತನೆಯ ನಿಯಮ:** ಹಿಂದಿನ ಕರ್ಮಗಳು ಮತ್ತೆ ಮತ್ತೆ ಮರುಕಳಿಸುತ್ತದೆ. ನಾವು ಪರಿವರ್ತನೆಯಾಗಲು ಪ್ರಯತ್ನಿಸಿದರೆ ಮಾತ್ರ ಪರಿವರ್ತನೆ ಸಾಧ್ಯ.

**11. ತಾಳ್ಮೆಯ ನಿಯಮ:** ತಾಳ್ಮೆ, ಸಹನೆ ಮತ್ತು ಛಲದಿಂದ ಏನನ್ನು ಬೇಕಾದರೂ ಸಾಧಿಸಬಹುದು. ಇವು ಜೀವನದಲ್ಲಿ ಬಹಳ ಮುಖ್ಯ.

**12. ಯಶಸ್ಸಿನ ನಿಯಮ:** ಯಶಸ್ಸು ನಾವು ಹಾಕುವ ಪರಿಶ್ರಮದಷ್ಟೇ ದೊಡ್ಡದಾಗಿ ಕಾಣುತ್ತದೆ. ನಾವು ಜೀವನದಲ್ಲಿ ಯಶಸ್ಸನ್ನು ಒಮ್ಮೆಗಳಿಸಲು ಪ್ರಾರಂಭಿಸಿದರೆ ನಮ್ಮ ಪರಿಶ್ರಮ ಲೆಕ್ಕಕ್ಕೆ ಬರುವುದಿಲ್ಲ. ಆ ಯಶಸ್ಸಿನ ಖುಷಿಯ ಮುಂದೆ ಎಲ್ಲಾ ಪರಿಶ್ರಮವೂ, ಅದರ ನೋವು, ನಾವು ಪಟ್ಟ ಕಷ್ಟ ಎಲ್ಲವೂ ಮರೆತು ಹೋಗುತ್ತದೆ.

# ಈ ಪೌಡರ್ ಸೇವಿಸಲು ಶುರು ಮಾಡಿ ಅಂತಾರೆ ಆಯುರ್ವೇದ ಡಾಕ್ಟರ್

ಮಧುಮೇಹವು ಅಪಾಯಕಾರಿ ಮತ್ತು ಮಾರಕ ಕಾಯಿಲೆಯಾಗಿದೆ ಇದು ಮೂತ್ರಪಿಂಡ, ಯಕೃತ್ತು, ಮೇದೋಜ್ಜೀರಕ ಗ್ರಂಥಿ ಮತ್ತು ಹೃದಯ ಸೇರಿದಂತೆ ದೇಹದ ಬಹುತೇಕ ಎಲ್ಲಾ ಅಂಗಗಳನ್ನು ನಿಧಾನವಾಗಿ ಹಾನಿಗೊಳಿಸುತ್ತದೆ. ಮಧುಮೇಹಕ್ಕೆ ಖಚಿತವಾದ ಚಿಕಿತ್ಸೆ ಇಲ್ಲ ಹಾಗಾಗಿ ಮಧುಮೇಹ ರೋಗಿಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವ ಮೂಲಕ ಮಾತ್ರ ಆರೋಗ್ಯಕರ ಜೀವನವನ್ನು ನಡೆಸಬಹುದು.



**ನಿಮಗೆ ಬೇಕಾದ ವಸ್ತುಗಳು:** ಗುಡ್ಮಾರ್ ಎಲೆಗಳು – 100 ಗ್ರಾಂ, ವಿಜಯಸರ್ – 120 ಗ್ರಾಂ, ಅಮೃತಬಳ್ಳಿ– 80 ಗ್ರಾಂ, ಆಲಲೆಕಾಯಿ ಸಿಪ್ಪೆ – 100 ಗ್ರಾಂ, ಕಲೋಂಜಿ – 80 ಗ್ರಾಂ, ಹಾಗಲಕಾಯಿ ಬೀಜಗಳು – 100 ಗ್ರಾಂ

**ಇದನ್ನು ತಯಾರಿಸುವುದು ಹೇಗೆ ?:** ಈ ಎಲ್ಲಾ ವಸ್ತುಗಳನ್ನು ಆಯುರ್ವೇದ ಅಂಗಡಿಗಳಲ್ಲಿ ಲಭ್ಯವಿದೆ. ಇವನ್ನು ತಂದು ಬಿಸಿಲಿಗೆ ಒಣಗಿಸಿ ಇದರ ನಂತರ, ಅದನ್ನು ಮಿಕ್ಸರ್‌ನಲ್ಲಿ ಹಾಕಿ ಪುಡಿ ಮಾಡಿ ಒಂದು ಡಬ್ಬದಲ್ಲಿ ಶೇಖರಿಸಿ. ಅಗತ್ಯವಿದ್ದಾಗ ಅದನ್ನು ಬಳಸಿ.

**ಹೇಗೆ ಸೇವಿಸಬೇಕು?:** ವೈದ್ಯರು ಬೆಳಿಗ್ಗೆ ನೀರಿನೊಂದಿಗೆ ಒಂದು ಚಮಚ ಎಸ್‌ಎಸ್‌ಪಿ ಪುಡಿಯನ್ನು ಮತ್ತು ಸಂಜೆ ಹಾಲಿನೊಂದಿಗೆ ಒಂದು ಚಮಚವನ್ನು ಸೇವಿಸಿ. ನೀವು ಅಧಿಕ ತೂಕ ಹೊಂದಿದ್ದರೆ ಮತ್ತು ಹಾಲು ಜೀರ್ಣಿಸಿಕೊಳ್ಳಲು ಸಾಧ್ಯವಾಗದಿದ್ದರೆ, ನೀವು ಬೆಳಿಗ್ಗೆ ಮತ್ತು ರಾತ್ರಿ ಇದನ್ನು ನೀರಿನೊಂದಿಗೆ ಇದನ್ನು ಸೇವಿಸಬಹುದು.

**ಔಷಧಿಗಳನ್ನು ತ್ಯಜಿಸಲಾಗುತ್ತದೆ:** ಈ ಪಾಕವಿಧಾನವು ತುಂಬಾ ಪರಿಣಾಮಕಾರಿ ಆಗಿದ್ದು ಇದನ್ನು ನಿಯಮಿತವಾಗಿ ಸೇವಿಸುವುದರಿಂದ, ನೀವು ಕ್ರಮೇಣ ಅಲೋಪತಿ ಔಷಧಿಗಳಿಂದ ಮುಕ್ತರಾಗುತ್ತೀರಿ ಎಂದು ವೈದ್ಯರು ಹೇಳಿದರು. ಈ ಪಾಕವಿಧಾನವು ಸಕ್ಕರೆಯನ್ನು ಉತ್ತಮ ರೀತಿಯಲ್ಲಿ ನಿಯಂತ್ರಿಸುತ್ತದೆ. ಮಧುಮೇಹದಿಂದ ಉಂಟಾಗುವ ದೌರ್ಬಲ್ಯವನ್ನು ಸಹ ಇದು ನಿವಾರಿಸುತ್ತದೆ. ಇದರ ಸೇವನೆಯು ನಿಮ್ಮ ದೇಹಕ್ಕೆ ಯಾವುದೇ ಹಾನಿಯನ್ನುಂಟುಮಾಡುವುದಿಲ್ಲ ಎಂದು ವೈದ್ಯರು ಹೇಳುತ್ತಾರೆ.

# ಸ್ನಾನದ ನಂತರ ತುರಿಕೆ ಏಕೆ ಬರುತ್ತದೆ?

ಕೆಲವರಿಗೆ ಸ್ನಾನ ಮಾಡಿದ ನಂತರ ಚರ್ಮದಲ್ಲಿ ತುರಿಕೆ ಕಾಣಿಸಿಕೊಳ್ಳುತ್ತದೆ. ಅದಕ್ಕಾಗಿ ತಕ್ಷಣ ಬಾಡಿ ಲೋಷನ್ ಹಚ್ಚುತ್ತಾರೆ. ಆದರೆ ಸ್ನಾನದ ನಂತರ ಕಾಣಿಸಿಕೊಳ್ಳುವ ಈ ತುರಿಕೆಯನ್ನು ವೈದ್ಯಕೀಯವಾಗಿ ಅಕ್ವಾಜೆನಿಕ್ ಪ್ರುರಿಟಸ್ ಎಂದು ಕರೆಯುತ್ತಾರೆ. ಈ ರೀತಿಯ ತುರಿಕೆಗೆ ಹಲವು ಕಾರಣಗಳಿರಬಹುದು. ಇಂಡಿಯನ್ ಜರ್ನಲ್ ಆಫ್ ಡರ್ಮಟಾಲಜಿ ಪ್ರಕಾರ, ನೀರಿನ ಸಂಪರ್ಕಕ್ಕೆ ಪ್ರತಿಕ್ರಿಯೆಯಾಗಿ ತೀವ್ರವಾದ ತುರಿಕೆ ಉಂಟಾಗುತ್ತದೆ. ಆದರೆ ಯಾವುದೇ ಗಾಯಗಳಿರುವುದಿಲ್ಲ. ಅದು ನೀವು ಸ್ನಾನ ಮಾಡಿದ ಒಂದು ಗಂಟೆಯವರೆಗೂ ಇರಬಹುದು.

**ನೀರು ಚರ್ಮದೊಂದಿಗೆ ಹೇಗೆ ಪ್ರತಿಕ್ರಿಯಿಸುತ್ತದೆ:** ನೀರು, ತಾಪಮಾನವು ನಿಮ್ಮ ಚರ್ಮದೊಂದಿಗೆ ಹೇಗೆ ಸಂವಹನ ನಡೆಸುತ್ತದೆ ಎಂಬ ಕಾರಣದಿಂದಾಗಿ ಈ ಸಂವೇದನೆ ಹೆಚ್ಚಾಗಿ ಸಂಭವಿಸುತ್ತದೆ. ನಿಮ್ಮ ಚರ್ಮವು ರಕ್ಷಣಾತ್ಮಕ ಹೊರ ಪದರವನ್ನು ಹೊಂದಿದ್ದು ಅದು ತೇವಾಂಶವನ್ನು ಒಳಗೆ ಮತ್ತು ಉದ್ರೇಕಕಾರಿಗಳನ್ನು ಹೊರಗಿಡುತ್ತದೆ. ಈ ಪದರಕ್ಕೆ ಅಡ್ಡಿಯಾದಾಗ ಅದು ಕಿರಿಕಿರಿಗೊಳಿಸುವುದು, ಜುಮ್ಮೆನಿಸುವಿಕೆ ಅಥವಾ ತುರಿಕೆ ಸಂವೇದನೆಗೆ ಕಾರಣವಾಗಬಹುದು.



**ಬಿಸಿನೀರು, ದೀರ್ಘ ಸ್ನಾನ:** ಬಹಳ ದಣಿವಾಗಿದ್ದಾಗ, ಮೈ ಕೈ ನೋವಾಗಿದ್ದಾಗ ಪ್ರತಿಯೊಬ್ಬರೂ ಬಿಸಿ ನೀರಿನ ಸ್ನಾನ ಮಾಡಲು ಬಯಸುತ್ತಾರೆ. ಬಿಸಿ ನೀರಿನ ಸ್ನಾನವು ದೇಹಕ್ಕೆ ಆರಾಮವನ್ನು ನೀಡುತ್ತದೆ. ಹಾಗಾಗಿ ಬಿಸಿ ನೀರನ್ನು ದೀರ್ಘಕಾಲದ ಸ್ನಾನ ಮಾಡುತ್ತಾರೆ. ಇದು ನಿಮ್ಮ ಚರ್ಮವನ್ನು ಡ್ರೈ ಆಗಿಸುವುದಲ್ಲದೆ, ಸೂಕ್ಷ್ಮವಾಗಿಸುತ್ತದೆ. ಅದರಲ್ಲೂ ಚಳಿಗಾಲದಲ್ಲಿ ಬಿಸಿ ನೀರಿನ ಸ್ನಾನ ನಿಮ್ಮ ಚರ್ಮವನ್ನು ಡ್ರೈ ಆಗಿಸುತ್ತದೆ.


**ಒಣ ಚರ್ಮ:** ಕೆಲವರು ಒಣ ಚರ್ಮವನ್ನು ಹೊಂದಿರುತ್ತಾರೆ. ನೈಸರ್ಗಿಕವಾಗಿ ಒಣ ಚರ್ಮವನ್ನು ಹೊಂದಿದ್ದರೆ, ನಿಮ್ಮ ಚರ್ಮಕ್ಕೆ ಮಾಯಿಶ್ಚರೈಸರ್ ಬಳಸದಿದ್ದರೆ ಬಿಸಿ ನೀರಿನ ಸ್ನಾನವು ನಿಮ್ಮ ಚರ್ಮವನ್ನು ಇನ್ನಷ್ಟು ಒಣಗಿಸಬಹುದು. ಒಣ ಚರ್ಮವು ತನ್ನ ರಕ್ಷಣಾತ್ಮಕ ತಡೆಗೋಡೆಯನ್ನು ಕಳೆದುಕೊಳ್ಳುತ್ತದೆ. ನಿಮ್ಮ ನರಗಳು ನೀರು, ತಾಪಮಾನ ಬದಲಾವಣೆಗಳಿಗೆ ಹೆಚ್ಚು ಸೂಕ್ಷ್ಮವಾಗುತ್ತವೆ.

**ಸೋಪ್, ಶಾಂಪೂ ಅವಶೇಷಗಳು:** ಅತಿಯಾದ ಸುಗಂಧ ದ್ರವ್ಯಗಳು, ಸಲ್ಫೇಟ್, ಆಲ್ಕೋಹಾಲ್ ಹೊಂದಿರುವ ಕಠಿಣ ಸೋಪ್‌ಗಳು, ಶಾಂಪೂಗಳನ್ನು ಬಳಸುವುದರಿಂದಲೂ ನಿಮ್ಮ ಚರ್ಮ ಡ್ರೈ ಆಗುತ್ತದೆ. ಇದು ನಿಮ್ಮ ಚರ್ಮವನ್ನು ಮತ್ತಷ್ಟು ಕೆರಳಿಸುತ್ತವೆ. ಈ ಉತ್ಪನ್ನಗಳನ್ನು ಬಳಸಿ ಸ್ನಾನ ಮಾಡುವುದರಿಂದ ಅವು ಚರ್ಮದ ಮೇಲೆ ಉಳಿದಿದ್ದರೆ ತುರಿಕೆಗೆ ಕಾರಣವಾಗಬಹುದು.

**ಗಡಸು ನೀರು:** ನೀವು ಬಳಸುವ ನೀರು ಗಡಸು ನೀರಾಗಿರಬಹುದು. ಅಂದರೆ ಈ ನೀರಿನಲ್ಲಿ ಕ್ಯಾಲ್ಸಿಯಂ, ಮೆಗ್ನೀಸಿಯಮ್‌ನಂತಹ ಖನಿಜಗಳು ಹೆಚ್ಚಿನ ಪ್ರಮಾಣದಲ್ಲಿರುತ್ತವೆ. ನೀವು ಅಂತಹ ನೀರನ್ನು ಬಳಸುತ್ತಿದ್ದರೆ ಅದು ನಿಮ್ಮ ಚರ್ಮದ ಮೇಲೆ ಶೇಷವನ್ನು ಬಿಡಬಹುದು. ಈ ಶೇಷವು ನಿಮ್ಮ ಚರ್ಮದ ನೈಸರ್ಗಿಕ ಸಮತೋಲನವನ್ನು ಅಡ್ಡಿಪಡಿಸಬಹುದು ಇದು ತುರಿಕೆಗೆ ಕಾರಣವಾಗಬಹುದು.

# ದೇಹದ ಮೇಲಿನ ಮಚ್ಚೆಗಳ ಗಾತ್ರ, ಆಕಾರ, ಬಣ್ಣ ಬದಲಾದರೆ ಅದು ಸ್ಕಿನ್ ಕ್ಯಾನ್ಸರ್ ಲಕ್ಷಣನಾ?


ಕ್ಯಾನ್ಸರ್ ನಲ್ಲಿಯೂ ಕೂಡ ಹಲವಾರು ವಿಧದ ಕ್ಯಾನ್ಸರ್ ಗಳಿವೆ ಎನ್ನುವುದು ನಮಗೆಲ್ಲಾ ಗೊತ್ತೇ ಇದೆ. ಅದರಲ್ಲಿ ಸ್ಕಿನ್ ಕ್ಯಾನ್ಸರ್ ಅಥವಾ ಚರ್ಮದ ಕ್ಯಾನ್ಸರ್ ಕೂಡ ಒಂದು. ಅದರಲ್ಲೂ ಮೆಲನೋಮ, ಬೇಸಲ್ ಸೆಲ್ ಕಾರ್ಸಿನೋಮ ಮತ್ತು ಸ್ಕ್ವಾಮಸ್ ಸೆಲ್ ಕಾರ್ಸಿನೋಮದಂತಹ ಚರ್ಮದ ಕ್ಯಾನ್ಸರ್‌ಗಳು ಹೆಚ್ಚಾಗಿ ನಮ್ಮ ದೇಹದ ತ್ವಚೆಯ ಅನಗತ್ಯ ಬದಲಾವಣೆಗಳೊಂದಿಗೆ ಪ್ರಾರಂಭವಾಗುತ್ತವೆ. ಚರ್ಮದ ಮೇಲಿನ ಅಂತಹ ಬದಲಾವಣೆಗಳು ಚರ್ಮದ ಮೇಲಿನ ಅಂತಹ ಬದಲಾವಣೆಗಳು ಕ್ಯಾನ್ಸರ್ ಅಲ್ಲ, ಆದರೆ ಕ್ಯಾನ್ಸರ್‌ಗೆ ಕಾರಣವಾಗಬಹುದು. ಒಂದು ಅಂದಾಜಿನ



ಪ್ರಕಾರ,65 ವರ್ಷ ವಯಸ್ಸಿನ ಬಿಳಿ ಚರ್ಮ ಹೊಂದಿರುವ ಸುಮಾರು 40 ರಿಂದ 50 ಪ್ರತಿಶತದಷ್ಟು ಜನರು ಕ್ಯಾನ್ಸರ್ ಗೆ ಹೆಚ್ಚಿನ ಅಪಾಯವನ್ನು ಹೊಂದಿರುತ್ತಾರೆ. ಆದ್ದರಿಂದ, ಚರ್ಮದ ಮೇಲೆ ಕಾಣಿಸಿಕೊಳ್ಳುವ ಯಾವುದೇ ಕಲೆಗಳನ್ನು ನಿರ್ಲಕ್ಷಿಸಬಾರದು ಆರಂಭಿಕ ಹಂತದಲ್ಲಿ ಚರ್ಮದ ಕ್ಯಾನ್ಸರ್ ತಡೆಯದಿದ್ದರೆ, ಪರಿಸ್ಥಿತಿ ಇನ್ನಷ್ಟು ಹದಗೆಡಬಹುದು.

**ಆಕ್ಟೋನಿಕ್ ಕೆರಾಟೋಸಿಸ್:** ದೇಹದ ಮೇಲಿನ ಈ ಸಣ್ಣ ಕಲೆಗಳು ಸೂರ್ಯನ ಬೆಳಕಿಗೆ ಅತಿಯಾಗಿ ಒಡ್ಡಿಕೊಳ್ಳುವುದರಿಂದ ಉಂಟಾಗಬಹುದು. ಅಂತಹ ಗುರುತುಗಳು ನಮ್ಮ ತಲೆ, ಮೂಗು, ಕೈಗಳು ಅಥವಾ ದೇಹದ ಯಾವುದೇ ಭಾಗದಲ್ಲಿ ಕಾಣಿಸಿ ಕೊಳ್ಳಬಹುದು. ಆದಾಗ್ಯೂ, ಅಂತಹ ಗುರುತುಗಳು ಎಷ್ಟು ಸಮಯದ ನಂತರ ಕ್ಯಾನ್ಸರ್ ರೂಪವನ್ನು ಪಡೆಯುತ್ತವೆ ಎಂದು ಹೇಳುವುದು ಕಷ್ಟ. ಇದರ ಸಾಧ್ಯತೆ ತುಂಬಾ ಕಡಿಮೆ, ಆದರೆ ವೈದ್ಯರು ಇನ್ನೂ ಅದನ್ನು ಪರೀಕ್ಷಿಸಲು ಶಿಫಾರಸು ಮಾಡುತ್ತಾರೆ. ಬಿಳಿ ಚರ್ಮ, ಕೆಂಪು ಕೂದಲು ಅಥವಾ ನೀಲಿ–ಹಸಿರು ಕಣ್ಣುಗಳನ್ನು ಹೊಂದಿರುವ ಜನರು ಹೆಚ್ಚು ಅಪಾಯದಲ್ಲಿದ್ದಾರೆ.

**ಆಕ್ಟಿನಿಕ್ ಚೀಲೈಟಿಸ್:** ಆಕ್ಟಿನಿಕ್ ಚೀಲೈಟಿಸ್ ಕೂಡ ಚರ್ಮದ ಕ್ಯಾನ್ಸರ್‌ನ ಆರಂಭಿಕ ಸ್ಥಿತಿಯಾಗಿದ್ದು, ಇದು ಸಾಮಾನ್ಯವಾಗಿ ಕೆಳ ತುಟಿಯ ಮೇಲೆ ಕಂಡು ಬರುತ್ತದೆ. ಇದು ತುಟಿಗಳ ಮೇಲೆ ಚಿಪ್ಪುಗಳುಳ್ಳ ತೇಪೆಗಳು, ಒರಟುತನವನ್ನು ಉಂಟುಮಾಡಬಹುದು. ಕೆಲವು ಸಂದರ್ಭಗಳಲ್ಲಿ, ಇದು ತುಟಿಗಳು, ಚರ್ಮದ ತೀಕ್ಷ್ಣವಾದ ಗಡಿಗಳು, ತುಟಿ ರೇಖೆಯ ಮೇಲೂ ಪರಿಣಾಮ ಬೀರಬಹುದು. ಸಮಯಕ್ಕೆ ಚಿಕಿತ್ಸೆ ನೀಡದಿದ್ದರೆ, ಆಕ್ಟಿನಿಕ್ ಚೀಲೈಟಿಸ್ ಅಪಾಯಕಾರಿ ಸ್ಕ್ವಾಮಸ್ ಸೆಲ್ ಕಾರ್ಸಿನೋಮವಾಗಿ ಬದಲಾಗಬಹುದು.



**ಮಚ್ಚೆಗಳು:** ದೇಹದ ಮೇಲೆ ಗೋಚರಿಸುವ ಮಚ್ಚೆಗಳಲ್ಲಿ ಬದಲಾವಣೆ ಕಾಣಿಸಿಕೊಂಡರೆ ನಿರ್ಲಕ್ಷ್ಯ ಮಾಡಲು ಹೋಗಬಾರದು. ಈ ರೀತಿಯ ಸಮಸ್ಯೆ ಚರ್ಮದ ಕ್ಯಾನ್ಸರ್‌ಗೆ ಕಾರಣವಾಗಬಹುದು. ಅಂತಹ ಬದಲಾವಣೆಗಳು ಸ್ವಲ್ಪ ಸಮಯದ ನಂತರ ಮೆಲನೋಮ ಕ್ಯಾನ್ಸರ್ ಗೆ ಕಾರಣವಾಗುತ್ತವೆ. ಚರ್ಮದ ಕ್ಯಾನ್ಸರ್ ಆಗಿ ಪರಿವರ್ತನೆಗೊಳ್ಳುವ ಮಚ್ಚೆಗಳು ಸಾಮಾನ್ಯವಾಗಿ ಆಕಾರದಲ್ಲಿ ಅನಿಯಮಿತವಾಗಿರುತ್ತವೆ. ಅವು ಯಾವುದೇ ಬಣ್ಣದ್ದಾಗಿರ ಬಹುದು. ಅವುಗಳ ಗಾತ್ರವು ಪೆನ್ಸಿಲ್ ಎರೇಸರ್‌ನಷ್ಟು ದೊಡ್ಡದಾಗಿರಬಹುದು.

**ಡಿಸ್ಪ್ಲಾಸ್ಟಿಕ್ ನೆವಿ:** ಹುಟ್ಟಿನಿಂದಲೇ ದೇಹದ ಮೇಲೆ ಕಾಣಿಸಿಕೊಳ್ಳುವ ಮಚ್ಚೆಗಳು ಕ್ಯಾನ್ಸರ್ ಅಲ್ಲ, ಆದರೆ ಮುಂದಿನ ದಿನಗಳಲ್ಲಿ ಇವು ಕ್ಯಾನ್ಸರ್ ಕಾಯಿಲೆಗೆ ಪರಿವರ್ತನೆ ಆಗುವ ಸಾಧ್ಯತೆ ಇರುತ್ತದೆ. ಹೆಚ್ಚು, ಕಡಿಮೆ ಸೂರ್ಯನ ಬೆಳಕಿಗೆ ಒಡ್ಡಿಕೊಳ್ಳುವ ದೇಹದ ಭಾಗಗಳಲ್ಲಿ ಇದರ ಸಾಧ್ಯತೆ ಹೆಚ್ಚು. ಅವು ಸಾಕಷ್ಟು ದೊಡ್ಡದಾಗಿರಬಹುದು ಮತ್ತು ಗಾತ್ರದಲ್ಲಿ ಅನಿಯಮಿತವಾಗಿರಬಹುದು, ಸ್ವಲ್ಪ ಮಸುಕಾದ ಗಡಿಗಳನ್ನು ಹೊಂದಿರಬಹುದು. ಅವು ಗುಲಾಬಿ, ಕೆಂಪು ಅಥವಾ ಕಂದು ಬಣ್ಣದಲ್ಲಿರಬಹುದು.

**ವೈದ್ಯರನ್ನು ಯಾವಾಗ ಸಂಪರ್ಕಿಸಬೇಕು:** ದೇಹದ ಮೇಲೆ ಮಚ್ಚೆಗಳು ಇರುವುದು ತುಂಬಾ ಸಾಮಾನ್ಯ. ಆದರೆ ಮಚ್ಚೆಯ ಅಂಚು ತುಂಡುಗಳಾಗಿ ಕಾಣಿಸಿಕೊಂಡರೆ ಅಥವಾ ಅದರ ಆಕಾರ ಅನಿಯಮಿತವಾಗಿದ್ದರೆ, ಅದನ್ನು ಚರ್ಮರೋಗ ವೈದ್ಯರಿಂದ ಪರೀಕ್ಷಿಸಬೇಕು. ಮೆಲನೋಮ ಗಾಯಗಳಲ್ಲಿಯೂ ಸಹ ಇಂತಹ ಅಸಮ ಗಡಿಗಳು ಹೆಚ್ಚಾಗಿ ಕಂಡುಬರುತ್ತವೆ.

### ಬಣ್ಣದಲ್ಲಿ ಬದಲಾವಣೆ ಆಗಬಹುದು

**ಮಚ್ಚೆಯು ಕ್ಯಾನ್ಸರ್ ಆಗಿ ರೂಪಾಂತರಗೊಳ್ಳುವ ಒಂದು ದೊಡ್ಡ ಎಚ್ಚರಿಕೆಯ ಸಂಕೇತವೆಂದರೆ ಅದು ಯಾವಾಗಲೂ ಒಂದೇ ಬಣ್ಣದಲ್ಲಿ ಉಳಿಯುವುದಿಲ್ಲ. ಅದು ಕೆಂಪು, ಕಂದು, ನೀಲಿ, ಬಿಳಿ ಅಥವಾ ಯಾವುದೇ ಬಣ್ಣದ್ದಾಗಿರಬಹುದು. ಆದರೆ ಸಾಮಾನ್ಯ ಮಚ್ಚೆಯು ಯಾವಾಗಲೂ ಒಂದೇ ಬಣ್ಣದಲ್ಲಿ ಉಳಿಯುತ್ತದೆ. ಅಸಹಜ ಆಕಾರ ಮತ್ತು ಮಚ್ಚೆಯ ಬಣ್ಣದಲ್ಲಿ ಬದಲಾವಣೆಯ ಸಂದರ್ಭದಲ್ಲಿ, ಖಂಡಿತವಾಗಿಯೂ ವೈದ್ಯರಿಂದ ತಪಾಸಣೆ ಮಾಡಿಸಿಕೊಳ್ಳಿ.**

● ಮರ್ಕೂಸ್ ಯೋಜನೆಯಡಿ ಪ್ರವಾಸಿಗರಿಗೆ ಸುಲಭವಾಗಲಿ ಎನ್ನುವ ಕಾರಣಕ್ಕಾಗಿ ಹೊಸ ರೂಲ್ಸ್

# 52 ದೇಶಗಳ ಜನರಿಗೆ ಗಲ್ಫ್ ರಾಷ್ಟ್ರದಿಂದ ಸಿಹಿಸುದ್ದಿ : ನಿಮ್ಮೂರ ಡಿಎಲ್ ಅಲ್ಲೂ ವ್ಯಾಲಿಡ್

**ಅಬುದಾಯಿ :** ಸಂಯುಕ್ತ ಅರಬ್ ಗಣರಾಜ್ಯವು ತಮ್ಮ ದೇಶಕ್ಕೆ ಬರುವ ಪ್ರವಾಸಿಗರಿಗೆ ಸುಲಭವಾಗಲಿ ಎನ್ನುವ ನಿಟ್ಟಿನಲ್ಲಿ ಹೊಸ ಕಾನೂನು ಜಾರಿಗೆ ತಂದಿದೆ. ಇದರ ಅನ್ವಯ 52 ದೇಶಗಳ ಪ್ರವಾಸಿಗರು, ತಮ್ಮ ದೇಶಗಳ ಚಾಲನಾ ಪರವಾನಿಗೆ ಇಟ್ಟುಕೊಂಡು ಗಲ್ಫ್ ರಾಷ್ಟ್ರಗಳಲ್ಲಿ ವಾಹನವನ್ನು ಚಲಾಯಿಸಬಹುದಾಗಿದೆ.

ಇದರ ಜೊತೆಗೆ, ಬೇರೆ ದೇಶದ ನಿವಾಸಿಗಳು ತಮ್ಮ ಡ್ರೈವಿಂಗ್ ಲೈಸೆನ್ಸ್ ಅನ್ನು ಗಲ್ಫ್ ದೇಶದ ಪರವಾನಿಗೆಯೊಂದಿಗೆ ಬದಲಾಯಿಸಿಕೊಳ್ಳಬಹುದು. ಇದಕ್ಕಾಗಿ, ಯಾವುದೇ ಡ್ರೈವಿಂಗ್ ಟೆಸ್ಟಿಗೆ ಒಳಗಾಗಬೇಕಾದ ಅವಶ್ಯಕತೆಯಿಲ್ಲ. ಆದರೆ, ಇದಕ್ಕೆ ಕೆಲವೊಂದು

- ಮರ್ಕೂಸ್ ಯೋಜನೆಯಡಿ ಪ್ರವಾಸಿಗರಿಗೆ ಸುಲಭವಾಗಲಿ ಎನ್ನುವ ಕಾರಣಕ್ಕಾಗಿ ಹೊಸ ರೂಲ್ಸ್
- ತಮ್ಮ ದೇಶದ ಡ್ರೈವಿಂಗ್ ಲೈಸೆನ್ಸ್ ಮೂಲಕ ಗಲ್ಫ್ ನಲ್ಲೂ ಗಾಡಿ ಚಲಾಯಿಸಬಹುದು
- ಅರಬ್ ಗಣರಾಜ್ಯಕ್ಕೆ ಬರುವ ಪ್ರವಾಸಿಗರಿಗೆ ಸುಲಭವಾಗಲಿ ಎನ್ನುವ ಕಾರಣಕ್ಕಾಗಿ ಈ ನಿಯಮ

**ಭಾರತದ ಡ್ರೈವಿಂಗ್ ಲೈಸೆನ್ಸ್ ಮಾನ್ಯತೆ ಪಡೆದುಕೊಂಡಿದೆಯಾ?**

**ಭಾರತೀಯರು ತಮ್ಮ ಡಿಎಲ್ ಜೊತೆ ಅಂತರರಾಷ್ಟ್ರೀಯ ಪರವಾನಿಗೆ ಅನ್ನು ಹೊಂದಿರಬೇಕು. ಡಿಎಲ್ ಮತ್ತು ಐಡಿಪಿ ಇದ್ದರೆ, ಅಧಿಕೃತವಾಗಿ ಗಲ್ಫ್ ರಾಷ್ಟ್ರದಲ್ಲಿ ಗಾಡಿ ಚಲಾಯಿಸಬಹುದು.**

ನಿಯಮಗಳನ್ನು ಯುಎಎ ಸರ್ಕಾರ ಹಾಕಿದೆ.

ದಕ್ಷಿಣ ಕೊರಿಯಾದ ಪರವಾನಿಗೆ ಮಾನ್ಯವಾಗುವುದಿಲ್ಲ ಎಂದು ಗಲ್ಫ್ ರಾಷ್ಟ್ರ ಸ್ಪಷ್ಟ ಪಡಿಸಿದೆ. ಮರ್ಕೂಸ್ ಯೋಜನೆಯ ಭಾಗವಾಗಿ ಈ ಹೊಸ ನಿಯಮವನ್ನು ಜಾರಿಗೆ ತರಲಾಗುತ್ತಿದೆ. ಸಾರ್ವಜನಿಕರಿಗಾಗಿ ಇರುವ ಸೇವೆಗಳನ್ನು ಸುಲಭಗೊಳಿಸುವ ನಿಟ್ಟಿನಲ್ಲಿ ಇದನ್ನು ಜಾರಿಗೆ ತರಲಾಗುತ್ತಿದೆ. ಯುಎಇನಲ್ಲಿ ನೆಲೆಸುವ ಉದ್ದೇಶವನ್ನು ಪ್ರವಾಸಿಗರು ಹೊಂದಿರಬಾರದು. ತಮ್ಮ ದೇಶದ ಡಿಎಲ್ ಅವಧಿ ಮುಗಿದಿರಬಾರದು. ಹೊಂದಿರುವ ಲೈಸೆನ್ಸ್ ಯಾವ ವಾಹನ

**ಹೊಸ ಕಾನೂನು ಜಾರಿ**



**ಯುಎಇ ವಿನಾಯತಿ ನೀಡಿರುವ 52 ರಾಷ್ಟ್ರಗಳು ಯಾವುವು?**

**ಎಸ್ಟೋನಿಯಾ, ಅಲ್ಬೇನಿಯಾ, ಪೋರ್ಚುಗಲ್, ಚೀನಾ, ಹಂಗೇರಿ, ಗ್ರೀಸ್, ಉಕ್ರೇನ್, ಬಲ್ಗೇರಿಯಾ, ಸ್ಲೋವಾಕಿಯಾ, ಸ್ಲೊವೇನಿಯಾ, ಸೆರ್ಬಿಯಾ, ಸೈಪ್ರಸ್, ಲಾಟ್ವಿಯಾ, ಲಕ್ಸೆಂಬರ್ಗ್, ಲಿಥುವೇನಿಯಾ, ಮಾಲ್ಟಾ, ಐಸ್ಲ್ಯಾಂಡ್, ಮಾಂಟೆನೆಗ್ರೊ, ಇಸ್ರೇಲ್, ಅಜೆರ್ಬೈಜಾನ್, ಬೆಲಾರಸ್, ಉಜ್ಬೇಕಿಸ್ತಾನ್, ಅಮೆರಿಕ ಸಂಯುಕ್ತ ಸಂಸ್ಥಾನ, ಫ್ರಾನ್ಸ್, ಜಪಾನ್, ಬೆಲ್ಜಿಯಂ, ಸ್ವಿಟ್ಜರ್ಲೆಂಡ್. ಜರ್ಮನಿ, ಇಟಲಿ, ಸ್ವೀಡನ್, ಐರ್ಲೆಂಡ್, ಸ್ಪೇನ್, ನಾರ್ವೆ, ನ್ಯೂಜಿಲೆಂಡ್, ರೊಮೇನಿಯಾ, ಸಿಂಗಾಪುರ, ಹಾಂಗ್ ಕಾಂಗ್, ಡೆನ್ಮಾರ್ಕ್, ಆಸ್ಟ್ರಿಯಾ, ಫಿನ್ಲ್ಯಾಂಡ್, ಯುನೈಟೆಡ್ ಕಿಂಗ್ಡಮ್, ಟರ್ಕಿ, ಕೆನಡಾ, ಪೋಲೆಂಡ್, ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾ, ಕ್ರೊಯೇಷಿಯಾ, ಉತ್ತರ ಮೆಸಿಡೋನಿಯಾ ಗಣರಾಜ್ಯ, ಕೊಸೊವೊ ಗಣರಾಜ್ಯ, ಕಿರ್ಗಿಜ್ ಗಣರಾಜ್ಯ.**

ಚಲಾವಣೆಯ ಪ್ರಾಕಾರದ್ದು ಎನ್ನುವ ಅಂಶ ಡಿಎಲ್‌ನಲ್ಲಿ ಸ್ಪಷ್ಟವಾಗಿ ಉಲ್ಲೇಖವಾಗಿರಬೇಕು. ಅರಬ್ ಗಣರಾಜ್ಯದ ಲೈಸೆನ್ಸ್ ಪಡೆಯಲು ಏನಾದರೂ ಡ್ರೈವಿಂಗ್ ಟೆಸ್ಟಿಗೆ ಒಳಪಡಬೇಕೇ? ಸರ್ಕಾರ ಅನುಮೋದನೆ ನೀಡಿರುವ ದೇಶಗಳ ಪ್ರವಾಸಿಗರು, ಯಾವುದೇ ಪರೀಕ್ಷೆಯನ್ನು ಎದುರಿಸದೇ, ತಮ್ಮ ಡಿಎಲ್ ಅನ್ನು ವಿನಿಮಯ ಮಾಡಿಕೊಳ್ಳಬಹುದು.

ಡಿಜಿಟಲ್ ಮುರೂರ್ ಖೌಸ್ ಅಡಿಯಲಿ ಆರು ನೂರು ಎಇಡಿ ಮೊತ್ತವನ್ನು ಪಾವತಿಸಬೇಕಾಗುತ್ತದೆ.

ಅಡ್ರೆಸ್ ಪ್ರೂಫ್, ಮೂಲ ರಾಷ್ಟ್ರೀಯ ಪರವಾನಿಗೆ, ದೃಷ್ಟಿ ಪರೀಕ್ಷೆಯ ಫಲಿತಾಂಶದ ರಿಪೋರ್ಟ್ ಇದು ಎರಡು ಅವಶ್ಯಕ.

## ಉ.ಪ್ರದೇಶದಲ್ಲಿ ಸುರಿದ ಭಾರಿ ಮಳೆಗೆ 18 ಮಂದಿ ಬಲಿ

**ಲಕ್ನೋ:** ಉ.ಪ್ರದೇಶದಲ್ಲಿ ನಿನ್ನೆಯಿಂದ ಸುರಿಯುತ್ತಿರುವ ಧಾರಾಕಾರ ಮಳೆಗೆ ಕನಿಷ್ಠ 18 ಜನರು ನೀರಿನಲ್ಲಿ ಮುಳುಗಿ ಹಾವು ಕಡಿತದಂತಹ ಮಳೆ ಸಂಬಂಧಿತ ಘಟನೆಗಳಿಂದ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಒಂದು ಹೇಳಿಕೆಯ ಪ್ರಕಾರ, ಚಿತ್ರಕೂಟ ಜಿಲ್ಲೆಯಲ್ಲಿ ಆರು ಜನರು ಸಾವನ್ನಪ್ಪಿದರೆ, ಮಹೋಬಾ, ಬಂಡಾ ಮತ್ತು ಮೊರಾದಾಬಾದ್‌ನಲ್ಲಿ ತಲಾ 3 ಜನರು ಸಾವನ್ನಪ್ಪಿದ್ದಾರೆ. ಘಾಜಿಪುರ, ಲಲಿತಪುರ ಮತ್ತು ಗೊಂಡಾದಲ್ಲಿ ತಲಾ ಒಬ್ಬರು ಸಾವನ್ನಪ್ಪಿದ್ದಾರೆ. ಈ 18 ಸಾವುಗಳಲ್ಲಿ ಎಂಟು ಜನರು ಅತಿಯಾದ ಮಳೆಯಿಂದ ಮುಳುಗಿ ಸಾವನ್ನಪ್ಪಿದ್ದರೆ, ಇಬ್ಬರು ಹಾವು ಕಡಿತದಿಂದ ಸಾವನ್ನಪ್ಪಿದ್ದಾರೆ.

ಜುಲೈ 17 ಮತ್ತು 18 ರಂದು ಚಿತ್ರಕೂಟದಲ್ಲಿ ತಲಾ ಇಬ್ಬರು ಮುಳುಗಿ ಸಾವನ್ನಪ್ಪಿದ್ದರೆ, ಜುಲೈ 17 ರಂದು ಮೊರಾದಾಬಾದ್‌ನಲ್ಲಿ ಮುಳುಗಿ ಮೂವರು ಮತ್ತು ಜುಲೈ 18 ರಂದು ಘಾಜಿಪುರದಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ ಎಂದು ಅದು ಹೇಳಿದೆ.ಬಂದಾದಲ್ಲಿ ಅತಿಯಾದ ಮಳೆಯಿಂದಾಗಿ ಮೂವರು ಸಾವನ್ನಪ್ಪಿದ್ದಾರೆ. ಜುಲೈ 18 ರಂದು ಮಹೋಬಾದಲ್ಲಿ ಅತಿವೃಷ್ಟಿಯಿಂದಾಗಿ



ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಜುಲೈ 18 ರಂದು ಚಿತ್ರಕೂಟದಲ್ಲಿ ಹಲವರು ಸಾವನ್ನಪ್ಪಿದ್ದಾರೆ.

ಜುಲೈ 18 ರಂದು ಲಲಿತಪುರದಲ್ಲಿ ಅತಿವೃಷ್ಟಿಯಿಂದಾಗಿ ಒಬ್ಬರು ಸಾವನ್ನಪ್ಪಿದ್ದಾರೆ ಎಂದು ಹೇಳಿಕೆ ತಿಳಿಸಿದೆ. ಜುಲೈ 18 ರಂದು ಮಹೋಬಾ ಜಿಲ್ಲೆಯಲ್ಲಿ ಒಬ್ಬರು ಮತ್ತು ಗೊಂಡಾ ಜಿಲ್ಲೆಯಲ್ಲಿ ಇನ್ನೊಬ್ಬರು ಹಾವು ಕಡಿತದಿಂದ ಇಬ್ಬರು ಸಾವನ್ನಪ್ಪಿದ್ದಾರೆ. ಎಂದು ಹೇಳಿಕೆ ತಿಳಿಸಿದೆ. ಜುಲೈ 17 ರಂದು ರಾತ್ರಿ 8 ಗಂಟೆಯಿಂದ ಜುಲೈ 18 ರಂದು ರಾತ್ರಿ 8 ಗಂಟೆಯವರೆಗೆ 24 ಗಂಟೆಗಳ ಅವಧಿಯಲ್ಲಿ ಈ ಸಾವುಗಳು ಸಂಭವಿಸಿವೆ ಎಂದು ಹೇಳಿಕೆ ತಿಳಿಸಿದೆ.

## ಬೆಟ್ಟಿಂಗ್ ಆಪ್ ಪ್ರಕರಣ: ಗೂಗಲ್, ಮೆಟಾಗೆ ಇಡಿ ನೋಟಿಸ್

**ನವದೆಹಲಿ:** ದೈತ್ಯ ಕಂಪನಿಗಳಾದ ಗೂಗಲ್ ಹಾಗೂ ಮೆಟಾಗೆ ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್ ಪ್ರಕರಣಗಳ ತನಿಖೆ ಸಂಬಂಧ ಜಾರಿ ನಿರ್ದೇಶನಾಲಯ (ಇಡಿ) ನೋಟಿಸ್ ಜಾರಿ ಮಾಡಿ ಜುಲೈ 21 ರಂದು ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ನೀಡಿದೆ. ಈಗಾಗಲೇ ಇಡಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವಾರು ಸೆಲೆಬ್ರಿಟಿಗಳು ಮತ್ತು ಪ್ರಭಾವಿಗಳಿಗೆ ನೋಟೀಸ್ ಜಾರಿಗೊಳಿಸಿದೆ. ಮನಿ ಲಾಂಡರಿಂಗ್ ಮತ್ತು ಹವಾಲಾ ವಹಿವಾಟುಗಳು ಸೇರಿದಂತೆ ಗಂಭೀರ ಆರ್ಥಿಕ ಅಪರಾಧಗಳಿಗಾಗಿ ಪ್ರಸ್ತುತ ತನಿಖೆಯಲ್ಲಿರುವ ಬೆಟ್ಟಿಂಗ್ ಆಪ್‌ಗಳ ಪ್ರಚಾರವನ್ನು ಗೂಗಲ್ ಮತ್ತು ಮೆಟಾ ಸಕ್ರಿಯವಾಗಿ ಸುಗಮಗೊಳಿಸುತ್ತಿವೆ ಎಂದು ಇಡಿ ಆರೋಪಿಸಿದೆ.

ಈ ಟೆಕ್ ಕಂಪನಿಗಳು ಪ್ರಮುಖ ಜಾಹೀರಾತು ಸ್ಲಾಟ್‌ಗಳನ್ನು ಒದಗಿಸಿವೆ ಮತ್ತು ಈ ಆನ್‌ಲೈನ್ ಬೆಟ್ಟಿಂಗ್ ಪ್ಲಾಟ್‌ಫಾರ್ಮ್‌ಗಳಿಗೆ ಲಿಂಕ್ ಮಾಡಲಾದ ವೆಬ್‌ಸೈಟ್‌ಗಳು ತಮ್ಮ ಪ್ಲಾಟ್‌ಫಾರ್ಮ್‌ಗಳಲ್ಲಿ ಅವಕಾಶವನ್ನು ನೀಡಿದೆ. ಗೂಗಲ್ ಹಾಗೂ ಮೆಟಾ ಇವುಗಳನ್ನು ಪ್ರಮೋಟ್ ಮಾಡುತ್ತಿದೆ ಎಂದು ಇಡಿ ತನ್ನ ನೋಟೀಸ್‌ನಲ್ಲಿ ತಿಳಿಸಿದೆ. ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್‌ಗಳು ಕೋಟ್ಯಂತರ ರೂಪಾಯಿ ಮೌಲ್ಯದ ಅಕ್ರಮ ಹಣವನ್ನು ಗಳಿಸಿವೆ ಎಂದು ಹೇಳಲಾಗಿದೆ. ಇವುಗಳನ್ನು ಪತ್ತೆಹಚ್ಚುವುದನ್ನು ತಪ್ಪಿಸಲು ಸಂಕೀರ್ಣ ಹವಾಲಾ ಚಾನೆಲ್‌ಗಳ ಮೂಲಕ ರವಾನಿಸಲಾಗುತ್ತದೆ. ಕಳೆದ ವಾರ, ಈ ಅಕ್ರಮ ಬೆಟ್ಟಿಂಗ್ ಅರ್ಜಿಗಳನ್ನು ಪ್ರಚಾರ ಮಾಡಿದ್ದಕ್ಕಾಗಿ ಪ್ರಮುಖ ನಟರು, ದೂರದರ್ಶನ ನಿರೂಪಕರು ಮತ್ತು ಸಾಮಾಜಿಕ ಮಾಧ್ಯಮ ಪ್ರಭಾವಿಗಳು ಸೇರಿದಂತೆ 29 ವ್ಯಕ್ತಿಗಳ ವಿರುದ್ಧ ಇಡಿ ಪ್ರಕರಣ ದಾಖಲಿಸಿದೆ.

ಈ ಅಪ್ಲಿಕೇಶನ್‌ಗಳನ್ನು ಅನುಮೋದಿಸಿದ್ದಕ್ಕಾಗಿ ಗಣನೀಯ ಆರ್ಥಿಕ ಪರಿಹಾರವನ್ನು ಪಡೆದ ಆರೋಪದ ಮೇಲೆ ಪ್ರಕಾಶ್ ರಾಜ್, ರಾಣಾ ದಗ್ಗುಬಾಟಿ ಮತ್ತು ವಿಜಯ್ ದೇವರಕೊಂಡ ಅವರಂತಹ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

- ಬೆಟ್ಟಿಂಗ್ ಅಪ್ಲಿಕೇಷನ್ ಪ್ರಕರಣ, ಗೂಗಲ್ ಮೆಟಾಗೆ ಸಂಕಷ್ಟ
- ವಿಚಾರಣೆಗೆ ಹಾಜರಾಗಲು ಜಾರಿ ನಿರ್ದೇಶನಾಲಯ ಸಮನ್ಸ್
- ಜು. 21 ರಂದು ವಿಚಾರಣೆಗೆ ಹಾಜರಾಗಲು ಸೂಚನೆ
- ಸೆಲೆಬ್ರಿಟಿಗಳು, ಪ್ರಭಾವಿಗಳಿಗೂ ನೋಟಿಸ್ ಜಾರಿ
- ಬೆಟ್ಟಿಂಗ್ ಅಪ್ಲಿಕೇಷನ್ ಮೂಲಕ ಅಕ್ರಮ ಹಣಗಳಿಕೆ ಆರೋಪ

## ಕನ್ವರ್ ಯಾತ್ರಿಗಳು-ಮುಸ್ಲಿಮರ ನಡುವೆ ಘರ್ಷಣೆ



**ಪ್ರಯಾಗ್ ರಾಜ್:** ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ನಡೆದ ಕನ್ವರ್ ಯಾತ್ರೆಯ ಪ್ರಾರ್ಥನೆಯ ಸಮಯದಲ್ಲಿ ಜೋರಾಗಿ ಡಿಜೆ ಸಂಗೀತ ಹಾಕಿದ ಹಿನ್ನೆಲೆಯಲ್ಲಿ ಮೌಯಿಮಾ ಪ್ರದೇಶದಲ್ಲಿ ಕನ್ವರ್ ಯಾತ್ರಾರ್ಥಿಗಳು ಮತ್ತು ಮುಸ್ಲಿಂ ಸಮುದಾಯದ ನಡುವೆ ಘರ್ಷಣೆ ಭುಗಿಲೆದ್ದಿದೆ. ಘಟನೆಗೆ ಸಂಬಂಧಿಸಿದಂತೆ ಮುಸ್ಲಿಂ ಸಮುದಾಯದ ಮೂವರು ವ್ಯಕ್ತಿಗಳನ್ನು ಬಂಧಿಸಿದ್ದಾರೆ. ಘರ್ಷಣೆಯಲ್ಲಿ ಭಾಗಿಯಾಗಿದ್ದಾರೆ ಎಂಬ ಆರೋಪದ ಮೇಲೆ 15 ಮಂದಿ ಸೇರಿದಂತೆ ಒಟ್ಟು 65 ಜನರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಎರಡು ಧರ್ಮಗಳ ನಡುವೆ ಉಂಟಾದ ಬಿಗುವಿನ ವಾತಾವರಣವನ್ನು ಪೊಲೀಸರು ಮಧ್ಯಪ್ರವೇಶಿಸುವ ಮೂಲಕ ತಿಳಿಗೊಳಿಸುವಲ್ಲಿ ಸಫಲರಾಗಿದ್ದಾರೆ. ಆದರೆ ಪರಿಸ್ಥಿತಿ ಮಾತ್ರ ಬೂದಿ ಮುಚ್ಚಿದ ಕೆಂಡದ ರೀತಿ ಇದೆ ಎಂದು ಹೇಳಲಾಗಿದೆ. ಪ್ರಾರ್ಥನೆಯ ಸಮಯದಲ್ಲಿ ವಾರ್ಷಿಕ ಕನ್ವರ್ ಯಾತ್ರೆಯಲ್ಲಿ ಭಾಗವಹಿಸುವ ಭಕ್ತರು ಮತ್ತು ಮುಸ್ಲಿಂ ಸಮುದಾಯದ ಸದಸ್ಯರ ನಡುವೆ ಘರ್ಷಣೆ ಭುಗಿಲೆದ್ದ ನಂತರ ಪ್ರಯಾಗ್‌ರಾಜ್ ಜಿಲ್ಲೆಯ ಮೌಯಿಮಾದ ಸರಾಯ್ ಖ್ವಾಜಾ ಪ್ರದೇಶದಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಭಾರಿ ಬಿಗಿಭದ್ರತೆ ಒದಗಿಸಲಾಗಿದೆ.


ಪ್ರಾಥಮಿಕ ಮಾಹಿತಿಯ ಪ್ರಕಾರ ಹತ್ತಿರದ ಮಸೀದಿಯಲ್ಲಿ ಪ್ರಾರ್ಥನೆ ನಡೆಯುತ್ತಿದ್ದ ಸಮಯದಲ್ಲಿ ಕನ್ವರ್ ಯಾತ್ರೆಯ ಮೆರವಣಿಗೆ ಸಮಯದಲ್ಲಿ ಸರಾಯ್ ಖ್ವಾಜಾ ಪ್ರದೇಶದ ಮೂಲಕ ಜೋರಾಗಿ ಡಿಜೆ ಸಂಗೀತ ಹಾಕಿದ್ದೇ ಗಲಾಟೆಗೆ ಕಾರಣ ಎನ್ನಲಾಗಿದೆ. ಇದರ ಪರಿಣಾಮ ಎರಡೂ ಧರ್ಮದ ನಡುವೆ ಉಂಟಾದ ಗಲಾಟೆ, ಹಿಂಸಾಚಾರದ ರೂಪ ತಾಳಿತ್ತು, ಅದನ್ನು ಆರಂಭದಲ್ಲಿ ಪೊಲೀಸರ ಮಧ್ಯ ಪ್ರವೇಶದಿಂದ ನಿಂತಿದೆ ಎಂದು ಹೇಳಲಾಗಿದೆ. ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಪ್ರತಿಕ್ರಿಯಿಸಿ ಈ ವಿಷಯ ತನಿಖಾ ಹಂತದಲ್ಲಿದೆ. ತಪ್ಪಿತಸ್ಥರ ವಿರುದ್ಧ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಕೋಮು ಸಾಮರಸ್ಯ ಕಾಪಾಡಿಕೊಳ್ಳುವುದು ಮತ್ತು ಅಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳುವುದು ನಮ್ಮ ಆದ್ಯತೆಯಾಗಿದೆ ಎಂದು ಹೇಳಿದ್ದಾರೆ.

ಈ ವರ್ಷದಲ್ಲೇ ಮೊದಲ ಮೇಡ್ ಇನ್ ಇಂಡಿಯಾ

## ಸೆಮಿಕಂಡಕ್ಟರ್ ಚಿಪ್ ಬಿಡುಗಡೆ: ಅಶ್ವಿನಿ ವೈಷ್ಣವ್

**ಹೈದರಾಬಾದ್:** ದೇಶೀಯವಾಗಿ ಉತ್ಪಾದಿಸಲಾದ ಮೊದಲ ಸೆಮಿಕಂಡಕ್ಟರ್ ಚಿಪ್ ಈ ವರ್ಷ ಬಿಡುಗಡೆಯಾಗುವ ನಿರೀಕ್ಷೆಯಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಕೇಶವ್ ಮೆಮೋರಿಯಲ್ ಎಜುಕೇಷನಲ್ ಸೊಸೈಟಿಯ 85 ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಭಾರತವು ಸೆಮಿ ಕಂಡಕ್ಟರ್ ಉದ್ಯಮದಲ್ಲಿ ಮಹತ್ವದ ಜಾಗತಿಕ ಆಟಗಾರನಾಗಲು ಸಜ್ಜಾಗಿದೆ ಎಂದು ಹೇಳಿದರು. ಹೈದರಾಬಾದ್, ಬೆಂಗಳೂರು, ಪುಣೆ, ಗುರುಗ್ರಾಮ್ ಮತ್ತು ಚೆನ್ನೈ ಸೇರಿದಂತೆ ದೇಶದ ಇತರ ಕೆಲವು ನಗರಗಳಲ್ಲಿ ಅತ್ಯಂತ ಸಂಕೀರ್ಣವಾದ ಕೆಲವು ಚಿಪ್‌ಗಳನ್ನು ವಿನ್ಯಾಸಗೊಳಿಸಲಾಗಿದೆ ಎಂದು ಅವರು ಹೇಳಿದರು. ಭಾರತ ಮಿಷನ್‌ನ ಭಾಗವಾಗಿ, ಡೇಟಾಸೆಟ್‌ಗಳು ಮತ್ತು ಇತರವುಗಳನ್ನು ಅಪ್‌ಲೋಡ್ ಮಾಡಲಾಗುತ್ತಿದೆ ಎಂದು ಕೇಂದ್ರ ಸಚಿವರು ಹೇಳಿದರು. ಬಳಕೆಯಲ್ಲಿ ಸುಮಾರು ಒಂದು ಮಿಲಿಯನ್ ಜನರಿಗೆ ತರಬೇತಿ ನೀಡಲಾಗುತ್ತಿದೆ. 2047ರ ವೇಳೆಗೆ ಭಾರತವು ವಿಶ್ವದ ಎರಡು ಅಗ್ರ ಆರ್ಥಿಕತೆಗಳಲ್ಲಿ ಒಂದಾಗಲಿದೆ ಎಂದು ವೈಷ್ಣವ್ ಹೇಳಿದರು. ಜಗತ್ತು ದೊಡ್ಡ ಬದಲಾವಣೆಯ ಮೂಲಕ ಸಾಗುತ್ತಿದೆ ಎಂದು ಹೇಳಿದ ಅವರು, ಆರ್ಥಿಕತೆಯಲ್ಲಿ ಪ್ರಾಬಲ್ಯ ಹೊಂದಿದ್ದ ಪಾಶ್ಚಿಮಾತ್ಯ ದೇಶಗಳನ್ನು ಈಗ ಪೂರ್ವ ಗೋಳಾರ್ಧ ಬದಲಾಯಿಸುತ್ತಿದೆ ಎಂದು ಹೇಳಿದರು.

> **ಈಗ, ನಾವು ಸೆಮಿಕಂಡಕ್ಟರ್ ಚಿಪ್‌ಗಳ ತಯಾರಿಕೆಯನ್ನು ಪ್ರಾರಂಭಿಸುತ್ತಿದ್ದೇವೆ. ನಾವು ಈಗಾಗಲೇ ಆರು ಸೆಮಿಕಂಡಕ್ಟರ್ ಸ್ಥಾವರಗಳನ್ನು ಅನುಮೋದಿಸಿದ್ದೇವೆ. ಅವುಗಳ ನಿರ್ಮಾಣ ನಡೆಯುತ್ತಿದೆ. 2025ರಲ್ಲಿ ನಾವು ಮೊದಲ ಮೇಡ್ ಇನ್ ಇಂಡಿಯಾ ಚಿಪ್ ಅನ್ನು ಹೊಂದುತ್ತೇವೆ.**
> -ಅಶ್ವಿನಿ ವೈಷ್ಣವ್, ಸಚಿವ



## ವಿಶ್ವಸಂಸ್ಥೆ- ಅಮೆರಿಕ ಮುಂದೆ ಟಿಆರ್‌ಎಫ್ ಕಡತ

**ನವದೆಹಲಿ:** ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಸಂಘಟನೆ ಟಿಆರ್‌ಎಫ್ ವಿರುದ್ಧ ದೃಢ ಹೆಜ್ಜೆ ಇಟ್ಟಿರುವ ಭಾರತ, ಟಿಆರ್‌ಎಫ್ ಚಟುವಟಿಕೆಗಳಿಗೆ ಸಂಬಂಧಿಸಿದ ವಿವರವಾದ ದಾಖಲೆಯನ್ನು ಅಮೆರಿಕ ಮತ್ತು ವಿಶ್ವಸಂಸ್ಥೆಗೆ ಸಲ್ಲಿಸಿದೆ. ಈ ದಾಖಲೆಯನ್ನು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರು ವಾಷಿಂಗ್ಟನ್ ಮತ್ತು ನ್ಯೂಯಾರ್ಕ್‌ನಲ್ಲಿ ಸಲ್ಲಿಸಿದ್ದಾರೆ, ನಂತರ ಅಮೆರಿಕ ಟಿಆರ್‌ಎಫ್ ಜಾಗತಿಕ ಭಯೋತ್ಪಾದಕ ಸಂಘಟನೆ ಎಂದು ಘೋಷಿಸಿದೆ.

ಪೆಹಲ್ಗಾಮ್ ದಾಳಿಯ ನಂತರ, ಭಾರತವು ಭಯೋತ್ಪಾದಕ ಸಂಘಟನೆ ದಿ ರೆಸಿಸ್ಟೆನ್ಸ್ ಫ್ರಂಟ್ (ಟಿಆರ್‌ಎಫ್) ವಿರುದ್ಧ ಬಲವಾದ ಕ್ರಮ ಕೈಗೊಂಡು ಅಮೆರಿಕ ಮತ್ತು ವಿಶ್ವಸಂಸ್ಥೆಗೆ ವಿವರವಾದ ದಾಖಲೆಯನ್ನು ಸಲ್ಲಿಸಿದೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರು ಮೇ 27 ಮತ್ತು 29 ರ ನಡುವೆ ವಾಷಿಂಗ್ಟನ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಟಿಆರ್‌ಎಫ್ ಚಟುವಟಿಕೆಗಳು ಮತ್ತು ಪುರಾವೆಗಳ ವಿವರವಾದ ದಾಖಲೆಯನ್ನು ಯುಎಸ್ ಸ್ಟೇಟ್



**ಟಿಆರ್‌ಎಫ್ ಜಾಗತಿಕ ಭಯೋತ್ಪಾದಕ ಸಂಘಟನೆ**

ಡಿಪಾರ್ಟ್‌ಮೆಂಟ್‌ಗೆ ಸಲ್ಲಿಸಿದರು.

ಟಿಆರ್‌ಎಫ್ ವಿಶೇಷ ಭಯೋತ್ಪಾದಕ ಸಂಘಟನೆ ಎಂದು ಘೋಷಿಸಲು ವಿಶ್ವಸಂಸ್ಥೆಯ 1267 ಸಮಿತಿಗೆ ಇದೇ ರೀತಿಯ ದಾಖಲೆಯನ್ನು ಸಲ್ಲಿಸಲಾಗಿದೆ. ಟಿಆರ್‌ಎಫ್ ಜಾಗತಿಕ ಭಯೋತ್ಪಾದಕ ಸಂಘಟನೆ ಎಂದು ಘೋಷಿಸುವುದು ಭಾರತ ಮತ್ತು ಅಮೆರಿಕ ಭಯೋತ್ಪಾದನೆಯ ವಿರುದ್ಧದ ಸಾಮಾನ್ಯ ಕಾರ್ಯಸೂಚಿಯಲ್ಲಿ ಒಂದಾಗಿವೆ ಎಂಬುದರ ಸ್ಪಷ್ಟ ಸೂಚನೆಯನ್ನು ನೀಡಿದೆ. ಅಧ್ಯಕ್ಷ ಟ್ರಂಪ್ ಮತ್ತು ಪಾಕಿಸ್ತಾನ ಸೇನಾ ಮುಖ್ಯಸ್ಥ ಹಫೀಜ್ ಅಸಿಮ್ ಮುನೀರ್ ನಡುವಿನ ಸಭೆ ಎಷ್ಟೇ ಮಹತ್ವ ಪಡೆದರೂ ಸಹ, ಭಯೋತ್ಪಾದನೆಯ ವಿಷಯದಲ್ಲಿ ಅಮೆರಿಕ ಯಾವುದೇ ಸಡಿಲಿಕೆ ನೀಡುವುದಿಲ್ಲ ಎಂಬ ನೇರ ಸಂದೇಶವನ್ನು ಈ ಕ್ರಮವು ಪಾಕಿಸ್ತಾನಕ್ಕೆ ರವಾನಿಸುತ್ತದೆ.

ಟಿಆರ್‌ಎಫ್ ಶೇಖ್ ಸಜ್ಜದ್ ಗುಲ್ ಅಲಿಯಾಸ್ ಸಜ್ಜದ್ ಅಹ್ಮದ್ ಶೇಖ್ ನೇತೃತ್ವ ವಹಿಸಿದ್ದಾರೆ.

ಲಷ್ಕರೆ ಸಂಘಟನೆಯ ಕಾಶ್ಮೀರಿ ಮುಖವಾಗಿ ಐಎಸ್‌ಐ ಈತನನ್ನು ನಿರ್ದಿಷ್ಟವಾಗಿ ಆಯ್ಕೆ ಮಾಡಿದೆ. ಈ ಸಂಘಟನೆಯು 2020 ರಿಂದ 2024 ರವರೆಗೆ ಜಮ್ಮು ಮತ್ತು ಕಾಶ್ಮೀರದ ಮಧ್ಯ ಮತ್ತು ದಕ್ಷಿಣ ಭಾಗಗಳಲ್ಲಿ ಹಲವಾರು ಭಯೋತ್ಪಾದಕ ದಾಳಿಗಳಲ್ಲಿ ಭಾಗಿಯಾಗಿದೆ. ಇದರಲ್ಲಿ ಗ್ರೆನೇಡ್ ದಾಳಿಗಳು, ಪೊಲೀಸರ ಮೇಲೆ ಹೊಂಚುದಾಳಿಗಳು ಮತ್ತು ಇತ್ತೀಚಿನ ಪೆಹಲ್ಗಾಮ್ ಹತ್ಯಾಕಾಂಡ ಸೇರಿವೆ.


20 ಲಕ್ಷ, ಬುಲೆಟ್ ಬೈಕ್ ಗಿಫ್ಟ್ ಮಾಡಿದ್ರು ವರದಕ್ಷಿಣೆ ಕಿರುಕುಳ

## ದೇಹದ ಮೇಲೆ ಡೆತ್‌ನೋಟ್ ಬರೆದುಕೊಂಡು ಆತ್ಮಹತ್ಯೆ

**ಲಖನೌ:** ವರದಕ್ಷಿಣೆ ಕಿರುಕುಳಕ್ಕೆ ಬೇಸತ್ತು ಮಹಿಳೆಯೊಬ್ಬರು ತಮ್ಮ ದೇಹದ ಮೇಲೆಯೇ ಡೆತ್‌ನೋಟ್ ಬರೆದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಉತ್ತರಪ್ರದೇಶದ ಬಾಗಪತ್‌ನಲ್ಲಿ ಜರುಗಿದೆ. ಮನೀಷಾ ಮೃತ ಮಹಿಳೆ. ಮದುವೆಯಾದ ಕೆಲ ತಿಂಗಳಲ್ಲೇ ಪತಿ ಹಾಗೂ ಅತ್ತೆ ವರದಕ್ಷಿಣೆ ತರುವಂತೆ ಕಿರುಕುಳ ನೀಡುತ್ತಿದ್ದರು ಎಂದು ಅವರು ಬರೆದಿದ್ದಾರೆ. ಅಲ್ಲದೇ, ಮನೀಷಾ ತಮ್ಮ ಮೊಬೈಲ್‌ನಲ್ಲಿ ವಿಡಿಯೊ ರೆಕಾರ್ಡ್ ಮಾಡಿಕೊಂಡು ಇರಿಸಿರುವುದು ಸದ್ಯ ಪೊಲೀಸರಿಗೆ ದೊರೆತಿದೆ. ಅದರಲ್ಲಿತಾನು ಎದುರಿಸಿದ ಕ್ರೂರತೆ ಬಗ್ಗೆ ವಿವರಿಸಿದ್ದಾರೆ. ಈ ವಿಡಿಯೋ ತುಣುಕಿನಲ್ಲಿ ಮನೀಷಾ ಅಳುತ್ತಾ, ಪತಿ, ಅವರ ತಾಯಿ, ತಂದೆ ಮತ್ತು ಸಹೋದರ ವರದಕ್ಷಿಣೆಗಾಗಿ ನಿರಂತರವಾಗಿ ಕಿರುಕುಳ ನೀಡುತ್ತಿದ್ದರು. ನನ್ನ ಸಾವಿಗೆ ಕಾರಣರಾದವರು ಪತಿ ಕುಂದನ್, ಅತ್ತೆ, ಸೋದರ ಮಾವ ದೀಪಕ್ ಮತ್ತು ವಿಶಾಲ್ ಎಂದು ಸಕಾಲಿನ ಮೇಲೆ ಬರೆದುಕೊಂಡಿದ್ದಾರೆ.

**ಗರ್ಭಪಾತಕ್ಕೆ ಕಿರುಕುಳ**

**ಅತ್ತೆ ಮತ್ತು ಪತಿ ನನ್ನನ್ನು ಹೊಡೆಯುತ್ತಿದ್ದರು. ಅಲ್ಲದೇ ಗರ್ಭಪಾತ ಮಾಡಿಸಿಕೊಳ್ಳುವಂತೆ ಒತ್ತಾಯಿಸುತ್ತಿದ್ದರು. ವರದಕ್ಷಿಣೆ ಬೇಡಿಕೆಗಳಿಗೆ ಮಣಿಯದಿದ್ದಾಗ, ಅತ್ತೆ ಮತ್ತು ಪತಿ ವಿದ್ಯುತ್ ಸ್ಪರ್ಶಿಸಿ ಕೊಲ್ಲಲು ಪ್ರಯತ್ನಿಸಿದ್ದರು ಎಂದು ಆರೋಪಿಸಿದ್ದಾರೆ.**



# ಭಾರತ - ಪಾಕ್ ಕದನ, 5 ಫೈಟರ್ ಜೆಟ್ ಹೊಡೆದುರುಳಿಸಲಾಗಿದೆ: ಟ್ರಂಪ್

● ಭಾರತ ಮತ್ತು ಪಾಕಿಸ್ತಾನದ ನಡುವೆ ನಮ್ಮ ಸರ್ಕಾರ ವ್ಯಾಪಾರದ ಆಸೆಯನ್ನು ತೋರಿಸಿ ಕದನ ವಿರಾಮ ಮಾಡಿಸಿದ್ದೇವೆ

**ವಾಷಿಂಗ್ಟನ್:** ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷ, ಅಧಿಕೃತವಾಗಿ ಯುದ್ಧಕ್ಕೆ ತಿರುಗದಂತೆ ನೋಡಿಕೊಂಡಿದ್ದೇ ನಾನು ಎಂದು ಅಮೆರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೆ ತನ್ನ ಬೆನ್ನು ತಾನೇ ತಟ್ಟಿಕೊಂಡಿದ್ದಾರೆ.

ಆ ಮೂಲಕ, ಈ ವಿಚಾರದಲ್ಲಿ ಟ್ರಂಪ್, ಅವರ ಗೊಂದಲಕಾರಿ ಹೇಳಿಕೆ ಮುಂದುವರಿದಿದೆ. ರಾಜಧಾನಿಯ ವೈಟ್ ಹೌಸ್ ನಲ್ಲಿ ರಿಪಬ್ಲಿಕನ್ ಶಾಸಕರೊಂದಿಗಿನ ಭೋಜನಕೂಟದ ವೇಳೆ ಮಾತನಾಡಿದ, ಎರಡು ಪರಮಾಣು ಹೊಂದಿರುವ ರಾಷ್ಟ್ರಗಳ ನಡುವಿನ ಸಂಘರ್ಷ, ವಿಪರೀತಕ್ಕೆ ಹೋಗುವ ಸಾಧ್ಯತೆಯಿತ್ತು.

1. ಭಾರತ ಮತ್ತು ಪಾಕಿಸ್ತಾನ ಕದನ ಆಪರೇಷನ್ ಸಿಂಧೂರ್
2. ಕದನ ವಿರಾಮವನ್ನು ಜಾರಿಗೆ ತಂದಿದ್ದೇ ನಾನು ಎಂದ ಟ್ರಂಪ್
3. ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧ ನಡೆಯುವುದನ್ನು ಯುಎಸ್ ತಡೆದಿದೆ



ನಮ್ಮ ಸರ್ಕಾರ, ಎರಡು ರಾಷ್ಟ್ರಗಳಿಗೆ ವ್ಯಾಪಾರದ ಆಸೆಯನ್ನು ತೋರಿಸಿ, ಕದನ ವಿರಾಮ ಮಾಡಿಸಿದ್ದೇವೆ ಎಂದು ಪುನರ್ ಉಚ್ಚರಿಸಿದ್ದಾರೆ.

ಎರಡು ದೇಶಗಳ ನಡುವಿನ ಕದನದ ವೇಳೆ ಐದು ಫೈಟರ್ ಜೆಟ್ ಅನ್ನು ಹೊಡೆದುರುಳಿಸಲಾಗಿದೆ ಎಂದು ಟ್ರಂಪ್ ಹೇಳಿದ್ದಾರೆ. ಆದರೆ, ಉರುಳಿದ ವಿಮಾನಗಳು ಯಾವ ದೇಶದ್ದು ಎನ್ನುವುದನ್ನು ಟ್ರಂಪ್ ಹೇಳಲಿಲ್ಲ. ಭಾರತ ಪಾಕಿಸ್ತಾನದ ನಡುವೆ ಕದನ ವಿರಾಮ ಮೇ ಹತ್ತರಂದು ಏರ್ಪಟ್ಟಿತ್ತು.

ಇಂಡೋ ಪಾಕ್ ಸಂಘರ್ಷ, ಯುದ್ಧಕ್ಕೆ ತಿರುಗುತ್ತದೆ ಎನ್ನುವಷ್ಟರಲ್ಲಿ ಡೊನಾಲ್ಡ್ ಟ್ರಂಪ್, ಕದನ ವಿರಾಮ ನಡೆದಿದೆ ಎನ್ನುವ ಟ್ವೀಟ್ (ಎಕ್ಸ್) ಅನ್ನು ಮಾಡಿ, ಎಲ್ಲರ ಹುಬ್ಬೇರಿಸುವಂತೆ ಮಾಡಿದ್ದರು. ಇದಕ್ಕೆ ಮುನ್ನ ಸಾಕಷ್ಟು ರಾಜಕೀಯ/ಸೇನಾ ಚಟುವಟಿಕೆಗಳು ನಡೆದಿತ್ತು. ಪಾಕಿಸ್ತಾನದ ವಿದೇಶಾಂಗ ಸಚಿವರು, ಡಿಜಿಎಂಒ ಹಂತದಲ್ಲಿ ಮಾತುಕತೆ ನಡೆಯುತ್ತಿದೆ ಎನ್ನುವ ಮೂಲಕ, ಕದನ ವಿರಾಮದ ಸುಳಿವನ್ನು ನೀಡಿದ್ದರು.

ಐದು ಜೆಟ್ ನಾಶವಾಗಿದೆ ಎನ್ನುವ ಮೂಲಕ ಟ್ರಂಪ್ ಮತ್ತೆ ಗೊಂದಲ ಹುಟ್ಟು ಹಾಕಿದ್ದಾರೆ. ಭಾರತದ ವಾಯುಸೇನೆಯ ಏರ್ ಮಾರ್ಷಲ್ ಎಕೆ ಭಾರತಿ ಈ ಸಂಬಂಧ ಹೇಳಿಕೆಯನ್ನು ನೀಡುತ್ತಾ, ಪಾಕಿಸ್ತಾನದ ಹಲವು ಫೈಟರ್ ಜೆಟ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ಹೇಳಿದ್ದರು. ಆದರೆ, ಅವರು ಸಂಖ್ಯೆಯನ್ನು ಹೇಳಿರಲಿಲ್ಲ. ಆದರೆ, ಇದನ್ನು ಪಾಕಿಸ್ತಾನ ಅಲ್ಲಗಳೆದಿತ್ತು.

ಪಾಕಿಸ್ತಾನದ ವಾಯುಸೇನೆಗೆ ಸಣ್ಣಹಾನಿ ಸಂಭವಿಸಿದೆ. ಪಾಕಿಸ್ತಾನವು, ಭಾರತದ ರಫೇಲ್ ಸೇರಿದಂತೆ ಆರು ಭಾರತೀಯ ಜೆಟ್ ಗಳನ್ನು ಹೊಡೆದುರುಳಿಸಿದ್ದೇವೆ ಎಂದು ಪಾಕ್ ಸೇನೆ ಹೇಳಿಕೊಂಡಿತ್ತು. ಇದನ್ನು ಭಾರತದ ಚೀಫ್ ಆಫ್ ಡಿಫೆನ್ಸ್ ಸ್ಟಾಫ್ ಜನರಲ್ ಅನಿಲ್ ಚೌಹಾಣ್, ಇದೊಂದು ವ್ಯಂಗ್ಯ ಎಂದು ಪಾಕ್ ಹೇಳಿಕೆಯನ್ನು ತಳ್ಳಿ ಹಾಕಿದ್ದರು. ಭಾರತ ಮತ್ತು ಪಾಕಿಸ್ತಾನದ ಉದ್ವಿಗ್ನತೆಯನ್ನು ವ್ಯಾಪಾರದ ಆಸೆಯನ್ನು ತೋರಿಸಿ ನಾವು ನಿಲ್ಲಿಸಿದ್ದೇವೆ. ಎರಡೂ ದೇಶಗಳು ನ್ಯೂಕ್ಲಿಯರ್ ಶಕ್ತಿಯನ್ನು ಹೊಂದಿವೆ. ಪರಿಸ್ಥಿತಿ ಕೈಮೀರುವ ಸ್ಥಿತಿಯಲ್ಲಿತ್ತು ಮತ್ತು ನಮ್ಮ ಮಧ್ಯಸ್ಥಿಕೆಗೆ ಅವರು ಬೆಲೆ ಕೊಟ್ಟರು ಎಂದು ಯುಎಸ್ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಆದರೆ, ಟ್ರಂಪ್ ಅವರು ಈ ಹೇಳಿಕೆಯನ್ನು ಆರಂಭದಲ್ಲಿ ನೀಡಿದ ಬೆನ್ನಲ್ಲೇ, ಭಾರತ ಮತ್ತು ಪಾಕಿಸ್ತಾನದ ಡಿಜಿಎಂಒ ನಡುವೆ ಮಾತುಕತೆ ನಡೆದಿದೆಯೇ ಹೊರತು, ಅಮೆರಿಕಾದ ಅಧ್ಯಕ್ಷರ ಪಾತ್ರ ಇದರಲ್ಲಿ ಏನೂ ಇಲ್ಲ. ಪಾಕಿಸ್ತಾನದ ಅಧಿಕಾರಿಗಳು ಮೊದಲು ಚರ್ಚೆ ಆರಂಭಿಸಿದರು, ಅದಕ್ಕೆ ನಾವು ಸ್ಪಂದಿಸಿದ್ದೇವೆ ಎಂದು ಭಾರತದ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಫೈಟರ್ ಜೆಟ್ ವಿಮಾನಗಳನ್ನು ಆಕಾಶದಲ್ಲೇ ಹೊಡೆದುರುಳಿಸಲಾಗಿದೆ. ಅದು, ನಾಲ್ಕು ಅಥವಾ ಐದು ಇರಬಹುದು. ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಗಂಭೀರತೆಗೆ ಹೋಗುವುದನ್ನು ನಾವು ತಡೆಗಟ್ಟಿದ್ದೇವೆ ಎನ್ನುವುದಕ್ಕೆ ನಮಗೆ ಸಂತೋಷವಿದೆ ಎಂದು ಟ್ರಂಪ್ ಹೇಳಿದ್ದಾರೆ.

**ಟ್ರಂಪ್ ಗೊಂದಲಕಾರಿ ಹೇಳಿಕೆ**



## ಮಿನಿ ನ್ಯೂಸ್

### 6 ಮಾವೋವಾದಿಗಳ ಹತ್ಯೆ

**ರಾಯ್‌ಪುರ:** ಛತ್ತೀಸ್‌ಗಢದಲ್ಲಿ ಭದ್ರತಾ ಪಡೆಗಳು ನಡೆಸಿದ ಎನ್‌ಕೌಂಟರ್‌ನಲ್ಲಿ 6 ಮಾವೋವಾದಿಗಳು ಹತ್ಯೆಗೀಡಾಗಿದ್ದಾರೆ. ಎನ್‌ಕೌಂಟರ್ ನಡೆದ ಸ್ಥಳದಲ್ಲಿ ಎಕೆ -47 ಮತ್ತು ರೈಫಲ್‌ಗಳು, ಸ್ಫೋಟಕಗಳು ಪತ್ತೆಯಾಗಿವೆ. ನಾರಾಯಣಪುರ ಜಿಲ್ಲೆಯ ಅಬುಜ್‌ಮದ್ ಪ್ರದೇಶದ ದಟ್ಟ ಅರಣ್ಯ ಪ್ರದೇಶದಲ್ಲಿ ಭದ್ರತಾ ಪಡೆಗಳು ಕಾರ್ಯಾಚರಣೆ ನಡೆಸಿವೆ. ಕಾರ್ಯಾಚರಣೆ ಇನ್ನೂ ನಡೆಯುತ್ತಿದೆ. ನಕ್ಸಲರ ಭದ್ರಕೋಟೆಯಾದ ಅಬುಜ್‌ಮದ್ ಕೋರ್ ವಲಯದಲ್ಲಿ ಮಾವೋವಾದಿಗಳ ವಿರುದ್ಧ ನಡೆದ ಮಹತ್ವದ ಕಾರ್ಯಾಚರಣೆಯಲ್ಲಿ ಈ ಎನ್‌ಕೌಂಟರ್ ಸಹ ಒಂದಾಗಿದೆ. ಈ ಪ್ರದೇಶದಲ್ಲಿ ಮಾವೋವಾದಿಗಳ ಚಲನವಲನದ ಬಗ್ಗೆ ಗುಪ್ತಚರ ಮಾಹಿತಿಯ ಆಧಾರದ ಮೇಲೆ ಕಾರ್ಯಾಚರಣೆ ನಡೆಸಲಾಗಿದೆ ಎಂದು ಮೂಲಗಳು ತಿಳಿಸಿವೆ.

### ಬುದ್ಧ ಅಮರನಾಥ ಯಾತ್ರೆಗೆ ಸಜ್ಜು ಅಧಿಕಾರಿಗಳಿಂದ ಭದ್ರತೆ ಪರಿಶೀಲನೆ

**ಜಮ್ಮು:** ಪೂಂಚ್ ಜಿಲ್ಲೆಯಲ್ಲಿ ಮುಂಬರುವ 13 ದಿನಗಳ ಬುದ್ಧ ಅಮರನಾಥ ಯಾತ್ರೆಯ ಸುಗಮ ನಿರ್ವಹಣೆಗೆ ಜಮ್ಮು ಮತ್ತು ಕಾಶ್ಮೀರ ಸರ್ಕಾರದ ಹಿರಿಯ ಅಧಿಕಾರಿಗಳು ವ್ಯವಸ್ಥೆಗಳನ್ನು ಪರಿಶೀಲಿಸಿದ್ದಾರೆ. ಪೊಲೀಸ್ ಉಪ ಮಹಾನಿರೀಕ್ಷಕ ತೇಜಿಂದರ್ ಸಿಂಗ್ ಅವರು ಪೂಂಚ್‌ನಲ್ಲಿ ಭದ್ರತೆಯನ್ನು ಪರಿಶೀಲಿಸಿದರು ಮತ್ತು ಭಕ್ತರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವ ಮಹತ್ವವನ್ನು ಒತ್ತಿ ಹೇಳಿದರು. ಮೊದಲ ತಂಡವು ಜುಲೈ 28 ರಂದು ಜಮ್ಮುವಿನ ಭಗವತಿ ನಗರ ಬೇಸ್ ಕ್ಯಾಂಪ್‌ನಿಂದ ಸಂಪೂರ್ಣ ಭದ್ರತಾ ವ್ಯವಸ್ಥೆಗಳ ನಡುವೆ ನಿಯಂತ್ರಿತ ಬೆಂಗಾವಲು ಪಡೆಯಲ್ಲಿ ಪೂಂಚ್‌ನ ಮಂಡಿ ತಹಶೀಲ್ ಕಡೆಗೆ ಚಲಿಸಲಿದೆ ಎಂದು ವಕ್ತಾರರು ತಿಳಿಸಿದ್ದಾರೆ. ಜಮ್ಮು ವಿಭಾಗೀಯ ಆಯುಕ್ತ ರಮೇಶ್ ಕುಮಾರ್ ಮತ್ತು ಪೊಲೀಸ್ ಮಹಾನಿರ್ದೇಶಕ (ಐಜಿಪಿ) ಭೀಮ್ ಸೇನ್ ಟುಟಿ ವ್ಯವಸ್ಥೆಗಳನ್ನು ಪರಿಶೀಲಿಸಿದರು.ಯಾತ್ರಿಕರಿಗೆ ಅನುಕೂಲವಾಗುವಂತೆ ಭಗವತಿ ನಗರ ಮತ್ತು ಜಮ್ಮು ರೈಲು ನಿಲ್ದಾಣದಲ್ಲಿ ಸಹಾಯ ಕೇಂದ್ರ ಮತ್ತು ನೋಂದಣಿ ಕೌಂಟರ್ ಸ್ಥಾಪಿಸಲು ಕುಮಾರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

### ನೈಗರ್‌ನಲ್ಲಿ ಉಗ್ರ ದಾಳಿ: ಇಬ್ಬರು ಭಾರತೀಯರು ಸಾವು, ಒಬ್ಬರ ಅಪಹರಣ

**ನಿಯಾಮಿ:** ನೈಋತ್ಯ ನೈಗರ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಇಬ್ಬರು ಭಾರತೀಯರು ಸಾವನ್ನಪ್ಪಿದ್ದಾರೆ ಮತ್ತು ಒಬ್ಬರನ್ನು ಅಪಹರಿಸಲಾಗಿದೆ ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

ಜುಲೈ 15 ರಂದು ನೈಗರ್‌ನ ಡೋಸ್ಸೊ ಪ್ರದೇಶದಲ್ಲಿ ನಡೆದ ಘೋರ ಭಯೋತ್ಪಾದಕ ದಾಳಿಯಲ್ಲಿ ಇಬ್ಬರು ಭಾರತೀಯ ಪ್ರಜೆಗಳು ಪ್ರಾಣ ಕಳೆದುಕೊಂಡರು ಮತ್ತು ಒಬ್ಬರನ್ನು ಅಪಹರಿಸಲಾಗಿದೆ ಎಂದು ರಾಯಭಾರ ಕಚೇರಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದೆ. ರಾಜಧಾನಿ ನಿಯಾಮಿಯಿಂದ ಸುಮಾರು 130 ಕಿಲೋಮೀಟರ್ ದೂರದಲ್ಲಿರುವ ಡೋಸ್ಸೊದಲ್ಲಿ ನಿರ್ಮಾಣ ಸ್ಥಳವೊಂದನ್ನು ಕಾಯುತ್ತಿದ್ದ ಸೇನಾ ಘಟಕದ ಮೇಲೆ ಅಪರಿಚಿತ ಬಂದೂಕುಧಾರಿಗಳು ದಾಳಿ ಮಾಡಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಹತ್ಯೆಯಾದವರ ಮೃತದೇಹಗಳನ್ನು ಸ್ವದೇಶಕ್ಕೆ ಕಳುಹಿಸಲು ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿರುವುದಾಗಿ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

ಅಪಹರಿಸಲ್ಪಟ್ಟ ಭಾರತೀಯನ ಸುರಕ್ಷಿತ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳಲು ರಾಯಭಾರ ಕಚೇರಿ ಕೆಲಸ ಮಾಡುತ್ತಿದೆ.

### ಟ್ರಕ್‌ಗೆ- ಮಿನಿ ವ್ಯಾನ್ ಡಿಕ್ಕಿ, ಒಂದೇ ಕುಟುಂಬದ ಮೂವರು ಸೇರಿ ಆರು ಮಂದಿ ಸಾವು

**ಮಥುರಾ:** ಉತ್ತರ ಪ್ರದೇಶದ ಮಥುರಾ ಜಿಲ್ಲೆಯ ಯಮುನಾ ಎಕ್ಸ್‌ಪ್ರೆಸ್‌ವೇಯಲ್ಲಿ ಟ್ರಕ್‌ಗೆ ಮಿನಿ ವ್ಯಾನ್ ಡಿಕ್ಕಿ ಹೊಡೆದ ಪರಿಣಾಮ ಒಂದೇ ಕುಟುಂಬದ ಮೂವರು ಸೇರಿದಂತೆ ಆರು ಮಂದಿ ಸಾವನ್ನಪ್ಪಿದ್ದಾರೆ. ಭೀಕರ ಅಪಘಾತದಲ್ಲಿ ಇಬ್ಬರು ಗಾಯಗೊಂಡಿದ್ದಾರೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಬೆಳಿಗ್ಗೆ 3 ಗಂಟೆಯ ಸುಮಾರಿನಲ್ಲಿ ಈ ಅಪಘಾತ ಸಂಭವಿಸಿದೆ. ಆಗ್ರಾಕ್ಕೆ ತೆರಳುತ್ತಿದ್ದ ಮಿನಿ-ವ್ಯಾನ್ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಬಹುಶಃ ಚಾಲಕನು ನಿದ್ರೆಯ ಮಂಪರಿನಲ್ಲಿದ್ದರಿಂದ ಈ ಅಪಘಾತ ಸಂಭವಿಸಿದೆ ಎಂದು ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಶ್ಲೋಕ್ ಕುಮಾರ್ ಹೇಳಿದ್ದಾರೆ. ಆರು ಮಂದಿ ಸ್ಥಳದಲ್ಲೇ ಮೃತಪಟ್ಟರೆ, ಇಬ್ಬರಿಗೆ ಗಂಭೀರ ಗಾಯಗಳಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತರ ಕುಟುಂಬ ಸದಸ್ಯರಿಗೆ ಮಾಹಿತಿ ನೀಡಲಾಗಿದ್ದು ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಎಸ್‌ಎಸ್‌ಪಿ ತಿಳಿಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ಡಿಕ್ಕಿಯ ರಭಸಕ್ಕೆ ಮಿನಿ ವ್ಯಾನ್ ನಜ್ಜುಗುಜ್ಜಾಗಿದ್ದು, ಶವಗಳನ್ನು ಹೊರತೆಗೆಯಲು ಕಟರ್ ಅನ್ನು ಬಳಸಬೇಕಾಯಿತು ಎಂದು ಅವರು ಮಾಹಿತಿ ನೀಡಿದ್ದಾರೆ.

### ಪಾಕಿಸ್ತಾನ 500ಸೈನಿಕರು ಶರಣು

**ಕರಾಚಿ:** ಪಾಕಿಸ್ತಾನ ಸೇನೆಯ ಸುಮಾರು 500ಕ್ಕೂ ಅಧಿಕ ಸೈನಿಕರು ಬಲೂಚಿಸ್ತಾನ ಸ್ವಾತಂತ್ರ್ಯ ಹೋರಾಟಗಾರರ ವಿರುದ್ಧ ಶರಣಾಗಿದ್ದಾರೆ ಎಂದು ಹೇಳಲಾಗಿದೆ. ಈ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಸುದ್ದಿ ಪ್ರಸಾರವಾಗುತ್ತಿರುವಂತೆಯೇ ಈ ಕುರಿತು ಸ್ವತಃ ಬಲೂಚಿಸ್ತಾನ ಹೋರಾಟಗಾರ ಮೀರ್ ಯಾರ್ ಬಲೂಚ್ ಎಕ್ಸ್‌ನಲ್ಲಿ ಮಾಹಿತಿ ನೀಡಿದ್ದಾರೆ. ಪಾಕಿಸ್ತಾನಿ ಸೇನೆ ಮತ್ತು ಪೊಲೀಸರ 500 ಕ್ಕೂ ಹೆಚ್ಚು ಸಿಬ್ಬಂದಿ ಬಲೂಚ್ ಸ್ವಾತಂತ್ರ್ಯ ಹೋರಾಟಗಾರರ ವಿರುದ್ಧ ಹೋರಾಡಲು ನಿರಾಕರಿಸಿ ಬಲೂಚ್ ಸ್ವಾತಂತ್ರ್ಯ ಹೋರಾಟಗಾರರ ಎದುರು ಶರಣಾಗಿದ್ದಾರೆ ಎಂದು ಹೇಳಲಾಗಿದೆ. ಜುಲೈ 2025 ರ ಮಧ್ಯದಲ್ಲಿ, 500 ಕ್ಕೂ ಹೆಚ್ಚು ಪಾಕಿಸ್ತಾನಿ ಸೇನೆ ಮತ್ತು ಪೊಲೀಸ್ ಸಿಬ್ಬಂದಿಗಳು ಬಲೂಚ್ ಸ್ವಾತಂತ್ರ್ಯ ಹೋರಾಟಗಾರರ ವಿರುದ್ಧ ಹೋರಾಡಲು ನಿರಾಕರಿಸಿದ್ದಾರೆ ಮತ್ತು ಅವರನ್ನು ಪಂಜಾಬ್‌ಗೆ ಹಿಂತಿರುಗಿಸಲಾಗಿದೆ ಎಂದು ವರದಿಯಾಗಿದೆ. ಶರಣಾದ ಈ ಸೈನಿಕರನ್ನು ವಿಶೇಷ ಬಸ್‌ಗಳ ಮೂಲಕ ಪಾಕಿಸ್ತಾನಕ್ಕೆ ಹಿಂದಿರುಗಿಸಲಾಗಿದ್ದು, ಅವರನ್ನು ಪಾಕಿಸ್ತಾನದಲ್ಲಿ ಸಂಭಾವ್ಯ ನ್ಯಾಯಾಲಯ-ಸಮರ ಪ್ರಕ್ರಿಯೆಗಳಿಗೆ ಒಡ್ಡುವ ಸಾಧ್ಯತೆ ಇದೆ ಎಂದು ಬಲೂಚ್ ಸ್ವಾತಂತ್ರ್ಯ ಹೋರಾಟಗಾರ ಮೀರ್ ಯಾರ್ ಬಲೂಚ್ ಟ್ವೀಟ್ ಮಾಡಿದ್ದಾರೆ.

ಅಂತೆಯೇ ಇದು ಬಲೂಚಿಸ್ತಾನದಲ್ಲಿ ನಿಯೋಜಿಸಲಾದ ಭದ್ರತಾ ಪಡೆಗಳಲ್ಲಿನ ಆಂತರಿಕ ಭಿನ್ನಾಭಿಪ್ರಾಯವನ್ನು ಎತ್ತಿ ತೋರಿಸುತ್ತದೆ ಎಂದು ಹೇಳಿರುವ ಮೀರ್ ಯಾರ್ ಬಲೂಚ್, ಬಲೂಚಿಸ್ತಾನದಲ್ಲಿ 93,000 ಸೈನಿಕರ ಸಂಬಂಧಿಕರು ಶರಣಾಗುತ್ತಿದ್ದಾರೆ ಏಕೆಂದರೆ ಪಾಕಿಸ್ತಾನ ಸೈನ್ಯವು ಬಲೂಚಿಸ್ತಾನದಲ್ಲಿ ಯುದ್ಧವನ್ನು ಸೋತಿದೆ ಎಂದು ಅವರಿಗೆ ತಿಳಿದಿದೆ.

# ಸಿಡಿದೆದ್ದ ಜಯಂ ರವಿ

ತಮಿಳು ನಟ ಜಯಂ ರವಿ ಇತ್ತೀಚೆಗೆ ತಮ್ಮ ಸಿನಿಮಾಗಳಿಗಿಂತ ವೈಯಕ್ತಿಕ ಕಾರಣಗಳಿಂದಲೇ ಹೆಚ್ಚು ಸುದ್ದಿಯಲ್ಲಿದ್ದಾರೆ. ಪತ್ನಿಯೊಂದಿಗೆ ಜಗಳ ಹಾಗೂ ವಿಚ್ಛೇದನ ವಿಚಾರವಾಗಿ ಜಯಂ ರವಿ ಸುದ್ದಿಯಾಗಿದ್ದರು. ಇದೀಗ ಸಿನಿಮಾ ನಿರ್ಮಾಪಕರು ಹಾಗೂ ನಿರ್ಮಾಣ ಸಂಸ್ಥೆಯ ವಿಚಾರವಾಗಿ ಕೋರ್ಟ್ ಮೆಟ್ಟಿಲು ಹತ್ತಿದ್ದಾರೆ. ಜಯಂ ರವಿ ಜೊತೆ ಸಿನಿಮಾ ಮಾಡುವುದಾಗಿ 80 ದಿನಗಳ ಕಾಲ್‌ಶೀಟ್ ಪಡೆದು ಅನಾವಶ್ಯಕವಾಗಿ ಕಾಲಹರಣ ಮಾಡಿದೆ. ಕಾಲ್‌ಶೀಟ್ ಕೊಟ್ಟ ದಿನಾಂಕದಂದು ಯಾವುದೇ ಸಿನಿಮಾ ಮಾಡಿಲ್ಲ. ಹೀಗಾಗಿ, ಜಯಂ ರವಿ ಇದಕ್ಕೆ ಪರಿಹಾರವಾಗಿ ನಿರ್ಮಾಪಕರು 9 ಕೋಟಿ ಹಣ ನೀಡಬೇಕು ಅಂತಾ ಕೋರ್ಟ್ ಮುಂದೆ ಈಗ ಹೋಗಿದ್ದಾರೆ. ಅಂದಹಾಗೆ ನಟ ರವಿ ಮೋಹನ್ ಅವರು ಬಾಂಬೆ ಟಚ್ ಗೋಲ್ಡ್ ಯೂನಿವರ್ಸ್ ಪ್ರೈವೆಟ್ ಲಿಮಿಟೆಡ್ ಹೆಸರಿನ ನಿರ್ಮಾಣ ಸಂಸ್ಥೆಗೆ ಬರೋಬ್ಬರಿ 80 ದಿನಗಳ ಕಾಲ್‌ಶೀಟ್ ನೀಡಿದ್ದರಂತೆ. ಈ ಸಂಸ್ಥೆ ಸಿನಿಮಾವನ್ನ ಪ್ರಾರಂಭ ಕೂಡ ಮಾಡಿಲ್ಲ. ಅಲ್ಲದೇ ಆ ಕಾಲ್‌ಶೀಟ್ ಕೊಟ್ಟ ಟೈಂನಲ್ಲಿ ಜಯಂ ರವಿ ಬೇರೆ ಯಾವುದೇ ಪ್ರಾಜೆಕ್ಟ್ ಒಪ್ಪಿಕೊಂಡಿಲ್ಲ. ಕಾಲ್‌ಶೀಟ್ ಮೇಲೆ ಎರಡು ಸಿನಿಮಾಗಳ ಆಫರ್ ಕೂಡಾ ಬಂದಿದ್ದರೂ ಒಪ್ಪಿಕೊಳ್ಳಲಿಲ್ಲ. ಸುಳ್ಳು ಭರವಸೆ ನೀಡಿ ಸಿನಿಮಾನೂ ಮಾಡದೇ ಇರೋ ಕಾರಣಕ್ಕೆ ಜಯಂ ರವಿ ಬಾಂಬೆ ಟಚ್ ಗೋಲ್ಡ್ ಯೂನಿವರ್ಸ್ ಪ್ರೈವೆಟ್ ಲಿಮಿಟೆಡ್ ಹೆಸರಿನ ನಿರ್ಮಾಣ ಸಂಸ್ಥೆ ವಿರುದ್ಧ ಹೈದರಾಬಾದ್ ಕೋರ್ಟ್‌ನಲ್ಲಿ ಅರ್ಜಿ ಹಾಕಿದ್ದಾರಂತೆ.



**ಪರಿಹಾರಕ್ಕಾಗಿ 9 ಕೋಟಿ ಬೇಡಿಕೆ**



# ಫೋಟೋಶೂಟ್ ಮೂಡ್‌ನಲ್ಲಿ ಪವಿತ್ರಾ ಗೌಡ

ರೇಣುಕಾಸ್ವಾಮಿ ಕೊಲೆ ಪ್ರಕರಣದ ಎ1 ಆರೋಪಿ ಪವಿತ್ರಾ ಗೌಡ, ಇದೀಗ ಬ್ಯುಸಿನೆಸ್‌ನಲ್ಲಿ ಬ್ಯುಸಿಯಾಗಿದ್ದಾರೆ. ನೂರಾರು ದಿನಗಳ ಕಾಲ ಜೈಲಿನಲ್ಲಿ ಇದ್ದು ಬಂದ ನಂತರ ಟೆಂಪಲ್ ರನ್ ಮಾಡಿದ್ದ ಪವಿತ್ರಾ ಗೌಡ, ಆನಂತರ ರೆಡ್ ಕಾರ್ಪೆಟ್ ಕಂಪನಿಯಲ್ಲಿ ತೊಡಗಿಕೊಂಡಿದ್ದರು. ಅದಕ್ಕಾಗಿ ಹಲವು ರಾಜ್ಯಗಳನ್ನೂ ಸುತ್ತಿದ್ದರು. ಇದೀಗ ಆ ಬ್ಯುಸಿನೆಸನ್ನು ಮತ್ತೊಂದು ಹಂತಕ್ಕೆ ತಗೆದುಕೊಂಡು ಹೋಗುವುದಕ್ಕೆ ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಒಂದು ಕಡೆ ಪವಿತ್ರಾ ಗೌಡ ಬ್ಯುಸಿನೆಸ್ ಕೆಲಸಗಳನ್ನು ತೊಡಗಿಕೊಂಡಿದ್ದರೆ, ಮತ್ತೊಂದು ಕಡೆ ಸುಪ್ರೀಂಕೋರ್ಟ್‌ನಲ್ಲಿ ಜಾಮೀನು ರದ್ದು ಕುರಿತಾದ ವಿಚಾರಣೆ ನಡೆಯುತ್ತಿದೆ. ಹೈಕೋರ್ಟ್ ನೀಡಿರುವ ಜಾಮೀನನ್ನು ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳು ಪ್ರಶ್ನೆ ಮಾಡಿದ್ದಾರೆ. ಯಾಕೆ ಜಾಮೀನು ರದ್ದು ಮಾಡಬಾರದು ಎಂದು ಕೇಳಿದ್ದಾರೆ. ಒಂದು ವೇಳೆ ಜಾಮೀನು ರದ್ದಾದರೆ, ಮತ್ತೆ ಪವಿತ್ರಾಗೆ ಜೈಲೇ ಗತಿ. ಈ ಟೆನ್ಷನ್ ನಡುವೆಯೇ ರೆಡ್ ಕಾರ್ಪೆಟ್‌ಗಾಗಿ ಅವರು ಫೋಟೋಶೂಟ್ ಮಾಡಿಸಿದ್ದಾರೆ. ರೂಪದರ್ಶಿಗೆ ಪೋಸ್ ಹೇಗೆ ಕೊಡಬೇಕು ಎನ್ನುವುದನ್ನು ಪವಿತ್ರಾ ಗೌಡ ಪಾಠ ಮಾಡುತ್ತಿದ್ದಾರೆ. ಆ ವಿಡಿಯೋವನ್ನು ಅವರು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.



# ಬೀಚ್‌ನಲ್ಲಿ ಬರ್ತ್‌ಡೇ

ಬಾಲಿವುಡ್‌ನ ಹೆಸರಾಂತ ನಟಿ ಪ್ರಿಯಾಂಕಾ ಚೋಪ್ರಾ ತಮ್ಮ 43ನೇ ಹುಟ್ಟುಹಬ್ಬವನ್ನ ವಿದೇಶದಲ್ಲಿ ಆಚರಿಸಿಕೊಂಡಿದ್ದಾರೆ. ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುವುದಕ್ಕಾಗಿಯೇ ಅವರು ಪತಿ ಮತ್ತು ಮಗಳ ಜೊತೆ ವಿದೇಶ ಪ್ರಯಾಣ ಬೆಳೆಸಿದ್ದರು. ಸಮುದ್ರ ತೀರದಲ್ಲಿ ಬಿಂದಾಸ್ ಆಗಿ ಕಳೆದಿದ್ದಾರೆ.

ಪತಿ ಜೊತೆ ಬಿಂದಾಸ್ ಆಗಿ ಕಳೆದಿರುವ ಕ್ಷಣಗಳನ್ನು ಅವರು ವಿಡಿಯೋ ರೂಪದಲ್ಲಿ ಪ್ರಕಟಿಸಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿರುವ ವಿಡಿಯೋ ವೈರಲ್ ಆಗಿದೆ. ಓಡಿ ಬಂದು ಪತಿಯನ್ನು ಅಪ್ಪಿಕೊಳ್ಳುವುದು, ತುಟಿ ತುಟಿ ಸೇರಿಸಿ ಚುಂಬಿಸುವುದು, ಮಗಳ ಜೊತೆ ಸಮಯ ಕಳೆಯುವುದು ಮತ್ತು ಸಮುದ್ರದಲ್ಲಿ ಡ್ರೈವ್ ಮಾಡಿರುವ ಕ್ಷಣಗಳನ್ನು ಹಂಚಿಕೊಂಡಿದ್ದಾರೆ. ಪ್ರತಿ ವರ್ಷವೂ ಅವರು ತಮ್ಮ ಹುಟ್ಟುಹಬ್ಬದ ವೇಳೆ ಬೇರೆ ಬೇರೆ ದೇಶಗಳನ್ನು ಸುತ್ತುತ್ತಾ ಇರುತ್ತಾರೆ. ಈ ಬಾರಿಯೂ ಅದನ್ನೇ ಮುಂದುವರೆಸಿದ್ದಾರೆ. ಆ ಕ್ಷಣಗಳನ್ನು ಒಟ್ಟು ಮಾಡಿ, ಫ್ಯಾನ್ಸ್ ಮುಂದೆ ಇಟ್ಟಿದ್ದಾರೆ. ಅಭಿಮಾನಿಗಳು ನೆಚ್ಚಿನ ನಟಿಗೆ ಶುಭಾಶಯ ತಿಳಿಸಿದ್ದಾರೆ.


**ಪತಿ ಜೊತೆ ಹುಟ್ಟುಹಬ್ಬ ಆಚರಿಸಿಕೊಂಡ ಪ್ರಿಯಾಂಕಾ**



# ಶೂಟಿಂಗ್ ವೇಳೆ ನಟ ಶಾರುಖ್ ಖಾನ್‌ಗೆ ಗಾಯ

**ಶಾರುಖ್ ಅಮೆರಿಕಕ್ಕೆ ಪ್ರಯಾಣ**

ಕಿಂಗ್ ಸಿನಿಮಾ ಶೂಟಿಂಗ್ ವೇಳೆ ಬಾಲಿವುಡ್ ನಟ ಶಾರುಖ್ ಖಾನ್ ಗಾಯಗೊಂಡಿದ್ದಾರೆ. ಕಿಂಗ್ ಖಾನ್ ಬೆನ್ನಿಗೆ ಪೆಟ್ಟಾಗಿದ್ದು, ವಿಶ್ರಾಂತಿಗೆ ವೈದ್ಯರು ಸಲಹೆ ನೀಡಿದ್ದಾರೆ. ಸಾಹಸ ಸನ್ನಿವೇಶ ಚಿತ್ರೀಕರಣ ಮಾಡುವಾಗ ಶಾರುಖ್ ಖಾನ್ ಗಾಯಗೊಂಡಿದ್ದಾರೆ.ಮುಂಬೈನ ಚಿತ್ರೀಕರಣದ ಸ್ಟುಡಿಯೋದಲ್ಲಿ ಘಟನೆ ನಡೆದಿದೆ. ಚಿತ್ರೀಕರಣದ ವೇಳೆ ಮಗಳು ಕೂಡ ಭಾಗಿಯಾಗಿದ್ದರು. ಗಾಯದ ಕಾರಣಕ್ಕೆ ಶಾರುಖ್ ಅಮೆರಿಕಕ್ಕೆ ಪ್ರಯಾಣ ಬೆಳೆಸಬಹುದು ಎನ್ನಲಾಗಿದೆ. ನಂತರ ಯುಕೆಗೆ ಪ್ರವಾಸ ಮಾಡಲಿದ್ದಾರೆ. ಅಲ್ಲಿ ಕುಟುಂಬದವರೊಟ್ಟಿಗೆ ಇದ್ದು ಚೇತರಿಸಿಕೊಳ್ಳಲಿದ್ದಾರೆ. ವಿಶ್ರಾಂತಿ ಕಾರಣಕ್ಕಾಗಿ ಶ್ರೀಲಂಕಾಗೆ ಯೋಜಿಸಿದ್ದ ಪ್ರವಾಸವನ್ನು ಮುಂದೂಡಲಾಗಿದೆ. ಸಿದ್ಧಾರ್ಥ್ ಆನಂದ್ ನಿರ್ದೇಶನದಲ್ಲಿ 'ಕಿಂಗ್' ಚಿತ್ರ ಶೂಟಿಂಗ್ ನಡೆಯುತ್ತಿದೆ. ಈ ಚಿತ್ರದಲ್ಲಿ ದೀಪಿಕಾ ಪಡುಕೋಣೆ, ಅಭಿಷೇಕ್ ಬಚ್ಚನ್, ಜೈದೀಪ್ ಅಹ್ಲಾವತ್, ಅನಿಲ್ ಕಪೂರ್ ಮತ್ತು ಅಭಯ್ ವರ್ಮಾ ಕೂಡ ನಟಿಸಿದ್ದಾರೆ. ಶಾರುಖ್ ಖಾನ್‌ಗೆ ಗಂಭೀರ ಪೆಟ್ಟಾಗಿಲ್ಲ. ಚೇತರಿಸಿ ಕೊಳ್ಳುತ್ತಿದ್ದಾರೆ. ಕಿಂಗ್ ಖಾನ್ ಗಾಯಗೊಂಡಿರುವುದರಿಂದ ಸಿನಿಮಾ ಚಿತ್ರೀಕರಣದಲ್ಲಿ ವಿಳಂಬವಾಗಲಿದೆ.



# ರಿಯಲ್ ಹೀರೋ ಅಕ್ಷಯ್‌ಕುಮಾರ್

ಸಿನಿಮಾ ತಾರೆಯರು ಕೇವಲ ರೀಲ್‌ನಲ್ಲಿ ಮಾತ್ರವಲ್ಲ, ರಿಯಲ್ ಲೈಫ್‌ನಲ್ಲೂ ಹೀರೋ ಆಗಿ ಮಾಡಿದ ಕಾರ್ಯಗಳು ಸಮಾಜಕ್ಕೆ ಮಾದರಿಗಳಾದ ಅದೆಷ್ಟೋ ಉದಾಹರಣೆಗಳಿವೆ. ಇದೀಗ ಬಾಲಿವುಡ್ ನಟ ಅಕ್ಷಯ್ ಕುಮಾರ್ ಕೂಡಾ ಮಹತ್ವದ ಕೆಲಸ ಮಾಡಿದ್ದಾರೆ. ಇಡೀ ಭಾರತೀಯ ಸಿನಿಮಾ ಇಂಡಸ್ಟ್ರಿ ಅವರ ಈ ಮಹತ್ತರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸುತ್ತಿದ್ದಾರೆ. ನಟ ಅಕ್ಷಯ್‌ಕುಮಾರ್, 650–700 ಜನ ಸ್ಟಂಟ್ ಮಾಸ್ಟರ್‌ಗಳಿಗೆ ಲೈಫ್ ಇನ್ಶುರೆನ್ಸ್, ಹೆಲ್ತ್ ಇನ್ಶುರೆನ್ಸ್ ಮಾಡಿಸಿಕೊಟ್ಟಿದ್ದಾರೆ. ಸಿನಿಮಾದ ಸಾಹಸ ದೃಶ್ಯಗಳನ್ನ ಮಾಡುವಾಗ ಸಾಕಷ್ಟು ಏಟುಗಳನ್ನ ಮಾಡಿಕೊಳ್ಳುತ್ತಾರೆ. ಕೆಲವೊಂದು ಬಾರಿ ಜೀವಕ್ಕೆ ಕುತ್ತು ಬರುವಂತಹ ರಿಸ್ಕಿ ದೃಶ್ಯಗಳಲ್ಲಿ ಸಾಹಸ ನಿರ್ದೇಶಕರು, ಸ್ಟಂಟ್ ಕೆಲಸದಲ್ಲಿ ತೊಡಗಿದವರು ಭಾಗಿಯಾಗುವಂತಹ ಸನ್ನಿವೇಶಗಳು ಎದುರಾಗುತ್ತವೆ. ಕೆಲದಿನಗಳ ಹಿಂದಷ್ಟೇ ತಮಿಳು ಸಿನಿಮಾದ ಚಿತ್ರೀಕರಣದ ವೇಳೆ ಮೋಹನ್ ರಾಜ್ ಎನ್ನುವ ಹಿರಿಯ ಸ್ಟಂಟ್‌ಮ್ಯಾನ್ ಮೃತಪಟ್ಟಿದ್ದರು. ಆ ವೇಳೆ ಚಿತ್ರತಂಡಕ್ಕೆ ಸಂಕಷ್ಟ ಕೂಡಾ ಎದುರಾಗಿತ್ತು. ಸ್ಟಂಟ್ ಮಾಸ್ಟರ್ ಮೋಹನ್ ರಾಜ್ ನಿಧನದ ಘಟನೆ ಬಳಿಕ ಇದೀಗ ಬಾಲಿವುಡ್ ನಟ ಅಕ್ಷಯ್‌ಕುಮಾರ್ ಲಕ್ಷಾಂತರ ರೂಪಾಯಿ ಖರ್ಚು ಮಾಡಿ 650 ಮಂದಿಗೆ ಜೀವ ವಿಮೆ ಮಾಡಿಸಿಕೊಟ್ಟು ಮಾನವೀಯತೆ ಮೆರೆದಿದ್ದಾರೆ. ಸಿನಿಮಾ ಶೂಟಿಂಗ್ ವೇಳೆ ಅವಘಡ ನಡೆಯುತ್ತವೆ. ಈ ಸಂದರ್ಭದಲ್ಲಿ ಅವರಿಗೆ ಚಿಕಿತ್ಸೆ ಪಡೆಯಲು ಸಹಾಯಕವಾಗಲಿ ಎನ್ನುವ ದೂರದೃಷ್ಟಿಯಿಂದ ಈ ಮಹತ್ತರ ಕಾರ್ಯ ಮಾಡಿದ್ದಾರೆ. ಹಿರಿಯ ಸ್ಟಂಟ್‌ಮ್ಯಾನ್ ಹಾಗೂ ಸ್ಟಂಟ್‌ಮ್ಯಾನ್ ಅಸೋಸಿಯೇಷನ್ ಮುಖಂಡ ವಿಕ್ರಮ್ ಸಿಂಗ್ ದಹಿಯಾ ಅವರು ನಟ ಅಕ್ಷಯ್‌ಕುಮಾರ್ ಸಹಾಯವನ್ನ ಕೊಂಡಾಡಿದ್ದಾರೆ. ಸ್ವತಃ ತಾವೇ ಆಕ್ಷನ್ ನಟರಾದ ಅಕ್ಷಯ್‌ಕುಮಾರ್ ಆ ದೃಶ್ಯಗಳನ್ನ ಕಣ್ಣಾರೆ ಕಂಡವರು.



**650 ಮಂದಿಗೆ ಜೀವ ವಿಮೆ**

# ವಿಶ್ವ ದಾಖಲೆ ನಿರ್ಮಿಸಿದ ಜೋಸ್ ಬಟ್ಲರ್

ಟಿ20 ಕ್ರಿಕೆಟ್‌ನಲ್ಲಿ ಜೋಸ್ ಬಟ್ಲರ್ ಹೊಸ ಮೈಲುಗಲ್ಲು ಮುಟ್ಟಿದ್ದಾರೆ. ಅದು ಕೂಡ 13 ಸಾವಿರ ರನ್ ಕಲೆಹಾಕುವ ಮೂಲಕ. ಅಲ್ಲದೆ ಈ ಸಾಧನೆ ಮಾಡಿದ ವಿಶ್ವದ 7ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ವೆಸ್ಟ್ ಇಂಡೀಸ್‌ನ ಮಾಜಿ ಆರಂಭಿಕ ಆಟಗಾರ ಕ್ರಿಸ್ ಗೇಲ್. ಟಿ20 ಕ್ರಿಕೆಟ್ ಇತಿಹಾಸದಲ್ಲಿ 13 ಸಾವಿರ ರನ್ ಕಲೆಹಾಕಿರುವುದು ಕೇವಲ ಏಳು ಬ್ಯಾಟ್ಸ್‌ಮನ್‌ಗಳು ಮಾತ್ರ. ಈ ಏಳು ಬ್ಯಾಟರ್‌ಗಳಲ್ಲಿ ಕೊನೆಯ ಸ್ಥಾನದಲ್ಲಿರುವುದು ಜೋ ಬಟ್ಲರ್ . ಅಂದರೆ ಟಿ20 ಕ್ರಿಕೆಟ್‌ನಲ್ಲಿ 13000 ಸಾವಿರ ರನ್ ಕಲೆಹಾಕಿದ ಬ್ಯಾಟರ್‌ಗಳ ಪಟ್ಟಿಗೆ ಬಟ್ಲರ್ ಕೂಡ ಎಂಟ್ರಿ ಕೊಟ್ಟಿದ್ದಾರೆ.

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ಟಿ20 ಬ್ಲಾಸ್ಟ್ ಟೂರ್ನಿಯಲ್ಲಿ ಲಂಕಾಶೈರ್ ಪರ ಆಡುತ್ತಿರುವ ಜೋಸ್ ಬಟ್ಲರ್, ಯಾರ್ಕ್‌ಶೈರ್ ವಿರುದ್ಧದ ಪಂದ್ಯದಲ್ಲಿ 46 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 7 ಫೋರ್‌ಗಳೊಂದಿಗೆ 77 ರನ್ ಬಾರಿಸಿದ್ದಾರೆ. ಈ ಎಪ್ಪತ್ತೇಳು ರನ್‌ಗಳೊಂದಿಗೆ ಬಟ್ಲರ್ ಟಿ20 ಕ್ರಿಕೆಟ್‌ನಲ್ಲಿ 13 ಸಾವಿರ ರನ್ ಪೂರೈಸಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ 13 ಸಾವಿರ ರನ್ ಕಲೆಹಾಕಿದ ಇಂಗ್ಲೆಂಡ್ 2ನೇ ಬ್ಯಾಟರ್ ಹಾಗೂ ವಿಶ್ವದ 7ನೇ ಆಟಗಾರ ಎಂಬ ಹೆಗ್ಗಳಿಕೆಯನ್ನು ಜೋಸ್ ಬಟ್ಲರ್ ತಮ್ಮದಾಗಿಸಿಕೊಂಡಿದ್ದಾರೆ. ಬಟ್ಲರ್‌ಗೂ ಮುನ್ನ ಇಂಗ್ಲೆಂಡ್‌ನ ಅಲೆಕ್ಸ್ ಹೇಲ್ಸ್ (13814) ಟಿ20 ಕ್ರಿಕೆಟ್‌ನಲ್ಲಿ 13 ಸಾವಿರ ರನ್ ಕಲೆಹಾಕಿದ ಸಾಧನೆ ಮಾಡಿದ್ದರು. ಇದೀಗ 13 ಸಾವಿರ ರನ್ ಕಲೆಹಾಕುವ ಮೂಲಕ ಬಟ್ಲರ್ ಈ ಸಾಧನೆ ಮಾಡಿದ ಇಂಗ್ಲೆಂಡ್‌ನ ಎರಡನೇ ಆಟಗಾರ ಎನಿಸಿಕೊಂಡಿದ್ದಾರೆ. ಈವರೆ 432 ಟಿ20 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿರುವ ಬಟ್ಲರ್ 8946 ಎಸೆತಗಳನ್ನು ಎದುರಿಸಿದ್ದಾರೆ.

**13 ಸಾವಿರ ರನ್ ಕಲೆ**



# ಕೊನೆಯ 2 ಎಸೆತಗಳಲ್ಲಿ ಇಡೀ ಪಂದ್ಯದ ಚಿತ್ರಣ ಬದಲು

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ಟಿ20 ಬ್ಲಾಸ್ಟ್ ನಾರ್ತ್ ಗ್ರೂಪ್ ಪಂದ್ಯದಲ್ಲಿ ರಣರೋಚಕ ಹೋರಾಟ ಕಂಡು ಬಂದಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಲೀಸೆಸ್ಟರ್‌ಶೈರ್ ತಂಡವು 18.5 ಓವರ್‌ಗಳಲ್ಲಿ 185 ರನ್‌ಗಳಿಸಿ ಆಲೌಟ್ ಆಯಿತು. 186 ರನ್‌ಗಳ ಗುರಿ ಪಡೆದ ಯಾರ್ಕ್‌ಶೈರ್ ತಂಡ 175 ರನ್‌ಗಳಿಗೆ 8 ವಿಕೆಟ್ ಕಳೆದುಕೊಂಡು ಸೋಲಿನತ್ತ ಮುಖ ಮಾಡಿತ್ತು. ಅಲ್ಲದೆ ಯಾರ್ಕ್‌ಶೈರ್ ತಂಡಕ್ಕೆ ಗೆಲ್ಲಲು ಕೊನೆಯ ಮೂರು ಎಸೆತಗಳಲ್ಲಿ 11 ರನ್‌ಗಳ ಅವಶ್ಯಕತೆಯಿತ್ತು. ಇತ್ತ ಇಬ್ಬರು ಬೌಲರ್‌ಗಳು ಕ್ರೀಸ್‌ನಲ್ಲಿದ್ದರಿಂದ ಲೀಸೆಸ್ಟರ್‌ಶೈರ್ ತಂಡ ಗೆಲ್ಲೋದು ಖಚಿತ ಎಂದೇ ಎಲ್ಲರೂ ಭಾವಿಸಿದ್ದರು. ಇದನ್ನು ಪುಷ್ಠೀಕರಿಸುವಂತೆ ಜೋಶ್ ಹಲ್ 19ನೇ ಓವರ್‌ನ 4ನೇ ಎಸೆತದಲ್ಲಿ ನೀಡಿದ್ದು ಕೇವಲ 1 ರನ್ ಮಾತ್ರ. ಅಂತಿಮ ಎರಡು ಎಸೆತಗಳಲ್ಲಿ 10 ರನ್‌ಗಳು ಬೇಕಿತ್ತು.

ಈ ವೇಳೆ ಸ್ಟ್ರೈಕ್‌ಗೆ ಆಗಮಿಸಿದ ಮ್ಯಾಟ್ ಮಿಲ್ನ್ಸ್ ಭರ್ಜರಿ ಸಿಕ್ಸ್ ಸಿಡಿಸಿದರು. ಕೊನೆಯ ಎಸೆತದಲ್ಲಿ 4 ರನ್‌ಗಳು ಬೇಕಿತ್ತು. ಈ ವೇಳೆ ಸ್ಕೂಪ್ ಶಾಟ್‌ನೊಂದಿಗೆ ಸಿಕ್ಸ್ ಸಿಡಿಸುವ ಮೂಲಕ ಮ್ಯಾಟ್ ಮಿಲ್ನ್ಸ್ ತಂಡಕ್ಕೆ 2 ವಿಕೆಟ್‌ಗಳ ರೋಚಕ ಜಯ ತಂದುಕೊಟ್ಟರು. ಇದೀಗ ಮ್ಯಾಟ್ ಮಿಲ್ನ್ಸ್ ಅವರ ಕೊನೆಯ ಸಿಕ್ಸ್ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.



# ವರ್ಷಗಳು ಕಳೆದರೂ ಬದಲಾಗದ ಪಾಕಿಸ್ತಾನ್ ವಿಕೆಟ್ ಕೀಪರ್

ಪಾಕಿಸ್ತಾನ್ ಕ್ರಿಕೆಟ್ ಕಂಡಂತಹ ಅತ್ಯಂತ ಕಳಪೆ ವಿಕೆಟ್ ಕೀಪರ್ ಯಾರೆಂದು ಕೇಳಿದರೆ ಥಟ್ಟನೆ ಬರುವ ಉತ್ತರ ಕಮ್ರಾನ್ ಅಕ್ಮಲ್. ಇದನ್ನು ಖುದ್ದು ಪಾಕ್ ವೇಗಿ ಶೊಯೆಬ್ ಅಖ್ತರ್ ಕೂಡ ಹೇಳಿದ್ದಾರೆ. ಸುಲಭ ಕ್ಯಾಚ್, ಸ್ಟಂಪಿಂಗ್ ಅವಕಾಶಗಳನ್ನು ಕೈಚೆಲ್ಲುವ ಮೂಲಕ ಸದಾ ಸುದ್ದಿಯಲ್ಲಿದ್ದ ಕಮ್ರಾನ್ ಅಕ್ಮಲ್ ಇದೀಗ ಮತ್ತೆ ಸುದ್ದಿಯಾಗಿದ್ದಾರೆ. ಈ ಬಾರಿ ಕೂಡ ಸ್ಟಂಪಿಂಗ್ ಅವಕಾಶವನ್ನು ಕೈ ಚೆಲ್ಲುವ ಮೂಲಕವೇ ಸುದ್ದಿಯಾಗಿರುವುದು ವಿಶೇಷ. ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ನಡೆದ ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟೂರ್ನಿಯ ಮೊದಲ ಪಂದ್ಯದಲ್ಲಿ ಇಂಗ್ಲೆಂಡ್ ಚಾಂಪಿಯನ್ಸ್ ಹಾಗೂ ಪಾಕಿಸ್ತಾನ್ ಚಾಂಪಿಯನ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ್ ಚಾಂಪಿಯನ್ಸ್ ತಂಡ 20 ಓವರ್‌ಗಳಲ್ಲಿ 9 ವಿಕೆಟ್ ಕಳೆದುಕೊಂಡು 160 ರನ್ ಕಲೆಹಾಕಿತು. 161 ರನ್‌ಗಳ ಗುರಿ ಬೆನ್ನತ್ತಿದ ಇಂಗ್ಲೆಂಡ್ ಚಾಂಪಿಯನ್ಸ್ ಪರ ಫಿಲ್ ಮಸ್ಟರ್ಡ್ ಹಾಗೂ ಅಲಸ್ಟೈರ್ ಕುಕ್ ಇನಿಂಗ್ಸ್ ಆರಂಭಿಸಿದ್ದರು. ಇತ್ತ ಪವರ್ ಪ್ಲೇಯ ಕೊನೆಯ ಓವರ್‌ನಲ್ಲಿ ಸ್ಪಿನ್ನರ್ ಶೊಯೆಬ್ ಮಲಿಕ್ ದಾಳಿಗಿಳಿದರು. ಸ್ಪಿನ್ ಎಸೆತದಲ್ಲಿ ಭರ್ಜರಿ ಪ್ರಯತ್ಯುತ್ತರ ನೀಡಲು ಮಸ್ಟರ್ಡ್ ಮುನ್ನುಗ್ಗಿ ಬಂದು ಹೊಡೆಯುವ ಪ್ರಯತ್ನ ಮಾಡಿದರು. ಆದರೆ ಚೆಂಡು ಬ್ಯಾಟ್‌ಗೆ ತಾಗದೇ ನೇರವಾಗಿ ವಿಕೆಟ್ ಕೀಪರ್‌ನತ್ತ ಸಾಗಿತು. ಅತ್ತ ಚೆಂಡು ಹಿಡಿದು ಸುಲಭವಾಗಿ ಸ್ಟಂಪ್ ಔಟ್ ಮಾಡುವ ಅವಕಾಶ ಅಕ್ಮಲ್‌ಗೆ ಒದಗಿ ಬಂದಿತ್ತು. ಆದರೆ ಚೆಂಡನ್ನು ಸರಿಯಾಗಿ ಗುರುತಿಸುವಲ್ಲಿ ಎಡವಿದ ಕಮ್ರಾನ್ ಸ್ಟಂಪ್ ಔಟ್ ಅವಕಾಶವನ್ನು ತಪ್ಪಿಸಿಕೊಂಡರು.



# ಸ್ಮೃತಿ ಮುಡಿಗೆ ಮತ್ತೊಂದು ದಾಖಲೆ

ಮಹಿಳಾ ಕ್ರಿಕೆಟ್‌ನಲ್ಲಿ ಸ್ಮೃತಿ ಮಂಧಾನ ಅವರ ಪರಾಕ್ರಮ ಮುಂದುವರೆದಿದೆ. ಇತ್ತೀಚೆಗೆ ನಡೆದ ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ ಹಲವು ದಾಖಲೆಗಳನ್ನು ಬರೆದಿದ್ದ ಸ್ಮೃತಿ ಇದೀಗ ಏಕದಿನ ಕ್ರಿಕೆಟ್‌ನಲ್ಲೂ ಭರ್ಜರಿ ದಾಖಲೆಯೊಂದನ್ನು ನಿರ್ಮಿಸಿದ್ದಾರೆ. ಈ ಮೂಲಕ ಈ ಸಾಧನೆ ಮಾಡಿದ ವಿಶ್ವದ 10ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಮಹಿಳಾ ಕ್ರಿಕೆಟ್‌ನಲ್ಲಿ ದಾಖಲೆಗಳ ಮೇಲೆ ದಾಖಲೆ ಬರೆಯುತ್ತಿರುವ ಸ್ಮೃತಿ ಮಂಧಾನ ಇದೀಗ ಮತ್ತೊಂದು ಮೈಲುಗಲ್ಲು ದಾಟಿದ್ದಾರೆ. ಈ ಮೈಲುಗಲ್ಲು ದಾಟುವುದರೊಂದಿಗೆ ಈ ಸಾಧನೆ ಮಾಡಿದ ಭಾರತದ 2ನೇ ಮಹಿಳಾ ಬ್ಯಾಟರ್ ಎಂಬ ಹೆಗ್ಗಳಿಕೆಯನ್ನು ಸಹ ತಮ್ಮದಾಗಿಸಿಕೊಂಡಿದ್ದಾರೆ. ಇಂಗ್ಲೆಂಡ್ ವಿರುದ್ಧದ ಮೊದಲ ಏಕದಿನ ಪಂದ್ಯದಲ್ಲಿ ಆರಂಭಿಕಳಾಗಿ ಕಣಕ್ಕಿಳಿದ ಸ್ಮೃತಿ ಮಂಧಾನ 24 ಎಸೆತಗಳಲ್ಲಿ 5 ಫೋರ್‌ಗಳೊಂದಿಗೆ 28 ರನ್ ಬಾರಿಸಿದ್ದರು. ಈ 28 ರನ್‌ಗಳೊಂದಿಗೆ ಸ್ಮೃತಿ ಮಹಿಳಾ ಏಕದಿನ ಕ್ರಿಕೆಟ್‌ನಲ್ಲಿ 4500 ರನ್ ಪೂರೈಸಿದ್ದಾರೆ. ಈ ಮೂಲಕ ಈ ಸಾಧನೆ ಮಾಡಿದ 2ನೇ ಭಾರತೀಯ ಆಟಗಾರ್ತಿ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಈ ಸಾಧನೆ ಮಾಡಿದ್ದು ಭಾರತ ಮಹಿಳಾ ತಂಡದ ಮಾಜಿ ನಾಯಕಿ ಮಿಥಾಲಿ ರಾಜ್. ಭಾರತದ ಪರ 211 ಏಕದಿನ ಇನಿಂಗ್ಸ್ ಆಡಿರುವ ಮಿಥಾಲಿ 7 ಶತಕ ಹಾಗೂ 64 ಅರ್ಧಶತಕಗೊಂದಿಗೆ 7805 ರನ್ ಕಲೆಹಾಕಿದ್ದಾರೆ. ಈ ಮೂಲಕ ಮಹಿಳಾ ಏಕದಿನ ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್‌ಗಳಿಸಿದ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದೀಗ 103 ಏಕದಿನ ಇನಿಂಗ್ಸ್‌ಗಳ ಮೂಲಕ 11 ಶತಕ ಹಾಗೂ 31 ಅರ್ಧಶತಕಗಳನ್ನು ಬಾರಿಸಿರುವ ಸ್ಮೃತಿ ಮಂಧಾನ ಒಟ್ಟು 4501 ರನ್ ಕಲೆಹಾಕಿದ್ದಾರೆ. ಈ ಮೂಲಕ ಏಕದಿನ ಕ್ರಿಕೆಟ್‌ನಲ್ಲಿ ಭಾರತದ ಪರ ಅತ್ಯಧಿಕ ರನ್ ಕಲೆಹಾಕಿದ 2ನೇ ಬ್ಯಾಟರ್ ಎಂಬ ಹೆಗ್ಗಳಿಕೆಯನ್ನು ಸ್ಮೃತಿ ತಮ್ಮದಾಗಿಸಿಕೊಂಡಿದ್ದಾರೆ.

**ಏಕದಿನ ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್‌ಗಳಿಸಿದ ಬ್ಯಾಟರ್**



# ಬಿಸಿಸಿಐ ಮನವಿಗೆ ಸೊಪ್ಪು ಹಾಕದ ಎಸಿಸಿ

ಏಷ್ಯಾಕಪ್ 2025 ರಿಂದ ಭಾರತ ತಂಡವು ಹೊರಗುಳಿಯುವ ಸಾಧ್ಯತೆಯಿದೆ. ಇದಕ್ಕೆ ಮುಖ್ಯ ಕಾರಣ ಭಾರತೀಯ ಕ್ರಿಕೆಟ್ ಮಂಡಳಿಯ ಮನವಿಯನ್ನು ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಪುರಸ್ಕರಿಸದಿರುವುದು. ಈ ಬಾರಿಯ ಏಷ್ಯನ್ ಕ್ರಿಕೆಟ್ ಕೌನ್ಸಿಲ್‌ನ ವಾರ್ಷಿಕ ಮಹಾಸಭೆಯನ್ನು ಢಾಕಾದಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ. ಆದರೆ ಭಾರತ ಮತ್ತು ಬಾಂಗ್ಲಾದೇಶ್ ನಡುವೆ ರಾಜಕೀಯ ಬಿಕ್ಕಟ್ಟು ಮುಂದುವರೆದಿದ್ದು, ಹೀಗಾಗಿ ಢಾಕಾದಿಂದ ವಾರ್ಷಿಕ ಮಹಾಸಭೆಯನ್ನು ಸ್ಥಳಾಂತರಿಸಲು ಬಿಸಿಸಿಐ ಮನವಿ ಮಾಡಿದೆ. ಅಲ್ಲದೆ ಢಾಕಾದಲ್ಲಿ ಎಸಿಸಿ ಸಭೆ ನಡೆದರೆ ಬಿಸಿಸಿಐ ಭಾಗವಹಿಸುವುದಿಲ್ಲ ಎಂದು ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಹಾಗೂ ಪಿಸಿಬಿ ಅಧ್ಯಕ್ಷರಾದ ಮೊಹ್ಸಿನ್ ನಖ್ವಿ ಅವರಿಗೆ ತಿಳಿಸಲಾಗಿದೆ. ಇದಾಗ್ಯೂ ಎಸಿಸಿ ಈವರೆಗೆ ಯಾವುದೇ ಉತ್ತರ ನೀಡಿಲ್ಲ. ಅತ್ತ ಕಡೆಯಿಂದ ಯಾವುದೇ ಪ್ರತಿಕ್ರಿಯೆ ಬರದಿರುವುದರಿಂದ ಬಿಸಿಸಿಐ ಏಷ್ಯನ್ ಕ್ರಿಕೆಟ್ ಕೌನ್ಸಿಲ್‌ನ ಸಭೆ ಹಾಗೂ ಏಷ್ಯಾಕಪ್‌ನಿಂದ ಹಿಂದೆ ಸರಿಯುವ ಸಾಧ್ಯತೆಯಿದೆ ಎಂದು ವರದಿಯಾಗಿದೆ. ಇನ್ನು ಢಾಕಾದಲ್ಲಿ ನಡೆಯಲಿರುವ ಸಭೆಯಲ್ಲಿ ಭಾಗವಹಿಸಲು ಭಾರತವಲ್ಲದೆ, ಶ್ರೀಲಂಕಾ, ಒಮಾನ್ ಮತ್ತು ಅಫ್ಘಾನಿಸ್ತಾನದ ಕ್ರಿಕೆಟ್ ಮಂಡಳಿಗಳು ಕೂಡ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದ್ದಾರೆ. ಈ ಆಕ್ಷೇಪಣೆಗಳ ಹೊರತಾಗಿಯೂ ಏಷ್ಯನ್ ಕ್ರಿಕೆಟ್ ಕೌನ್ಸಿಲ್ ವಾರ್ಷಿಕ ಸಭೆಯನ್ನು ಬೇರೊಂದು ನಗರಕ್ಕೆ ಸ್ಥಳಾಂತರಿಸುವ ಬಗ್ಗೆ ಯಾವುದೇ ನಿರ್ಧಾರವನ್ನು ತಿಳಿಸಿಲ್ಲ. ಹೀಗಾಗಿ ಈ ಕ್ರಿಕೆಟ್ ಮಂಡಳಿಗಳು ಕೂಡ ಸಭೆಯನ್ನು ಬಹಿಷ್ಕರಿಸುವ ಸಾಧ್ಯತೆಯನ್ನು ಸಹ ತಳ್ಳಿ ಹಾಕುವಂತಿಲ್ಲ.

ಏಷ್ಯನ್ ಕ್ರಿಕೆಟ್ ಕೌನ್ಸಿಲ್ ತನ್ನ ನಿರ್ಧಾರವನ್ನು ಬದಲಿಸದಿದ್ದರೆ, ಬಿಸಿಸಿಐ ಈ ಸಭೆಯಲ್ಲಿ ಭಾಗವಹಿಸದಿರಲು ನಿರ್ಧರಿಸಿದೆ. ಅಲ್ಲದೆ ಮುಂಬರುವ ಏಷ್ಯಾಕಪ್ ನಿಂದಲೂ ಹಿಂದೆ ಸರಿಯುವ ಸಾಧ್ಯತೆಯಿದೆ. ಅಲ್ಲದೆ ಪ್ರಮುಖ ಸದಸ್ಯ ಮಂಡಳಿಗಳು ಭಾಗವಹಿಸದೆ ಢಾಕಾದಲ್ಲಿ ನಡೆಯುವ ಸಭೆಯಲ್ಲಿ ತೆಗೆದುಕೊಳ್ಳುವ ಯಾವುದೇ ನಿರ್ಧಾರಗಳನ್ನು ಅಮಾನ್ಯವೆಂದು ಬಿಸಿಸಿಐ ಪರಿಗಣಿಸಲಿದೆ.




**ಏಷ್ಯಾಕಪ್ ಬಹಿಷ್ಕರಿಸುವ ಸಾಧ್ಯತೆ**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966